ಸಂಪುಟ: 04 ಸಂಚಿಕೆ: 315 ಪುಟಗಳು: 08 ಸೋಮವಾರ 27 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833 9448225696 +91 8035841833 ₹5
76Th
ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಜನಾರ್ಧನ ರೆಡ್ಡಿ ಉಚ್ಚಾಟಿಸಿ, ಶ್ರೀರಾಮುಲುಗೆ ಕೇಂದ್ರ ಮಂತ್ರಿ ಸ್ಥಾನ ನೀಡಿ

• ಉದಯವಾಹಿನಿ, ಬೆಂಗಳೂರು

ಶಾಸಕ ಗಾಲಿ ಜನಾರ್ಧನ ರೆಡ್ಡಿ ಮತ್ತು ಮಾಜಿ ಸಚಿವ ಬಿ.ಶ್ರೀರಾಮುಲು ಮಧ್ಯದ ಜಗಳ ಮತ್ತೊಂದು ಹಂತಕ್ಕೆ ಹೋಗುವ ಸೂಚನೆಗಳು ಲಭಿಸಿವೆ. ಈ ಬಗ್ಗೆ ಬಿಜೆಪಿ ನಾಯಕರು ಎಲ್ಲಾವು ಸರಿ ಹೋಗಲಿದೆ ಎಂದು ಹೇಳಿದ್ದಾರೆ. ಸ್ನೇಹಿತರ ಬದ್ಧ ವೈರಿಗಳಂತಾಗಿದ್ದಾರೆ. ಈ ಮಧ್ಯೆ ಶ್ರೀರಾಮುಲು ಅವರನ್ನು ಕೇಂದ್ರದ ಮಂತ್ರಿ ಮಾಡದಿದ್ದರೆ ಬಿಜೆಪಿ ಬಹಿಷ್ಕರಿಸುವುದಾಗಿ ಎಚ್ಚರಿಕೆಗಳು ಕೇಳಿ ಬಂದಿವೆ. ಹೌದು, ವಾಲ್ಮೀಕಿ ಸಮುದಾಯದ ನಾಯಕರಾದ ಶ್ರೀರಾಮುಲು ಅವರಿಗೆ ಬಿಜೆಪಿಯು ರಾಜ್ಯಸಭಾ ಸದಸ್ಯತ್ವ ನೀಡಿ, ಕೇಂದ್ರ ಮಂತ್ರಿ ಮಾಡದೇ ಹೋದಲ್ಲಿ ವಾಲ್ಮೀಕಿ ಸಮಯದಾಯವು ಬಿಜೆಪಿಯನ್ನು ಮುಂದಿನ ಎಲ್ಲಾ ಚುನಾವಣೆಗಳಲ್ಲೂ ಬೈಕಾಟ್ ಮಾಡಬೇಕಾಗುತ್ತದೆ ಎಂದು ವಾಲ್ಮೀಕಿ ಸ್ವಾಭಿಮಾನಿ ಸಂಘದ ರಾಜ್ಯಾಧ್ಯಕ್ಷ ಚಳುವಳಿ ರಾಜಣ್ಣ ಎಚ್ಚರಿಕೆ ನೀಡಿದರು. ಬೆಂಗಳೂರಿನಲ್ಲಿ ಭಾನುವಾರ ವಾಲ್ಮೀಕಿ ಸ್ವಾಭಿಮಾನಿ ಸಂಘ, ಜೈಭೀಮ್ ಅಖಿಲ ಭಾರತ ದಲಿತ ಹೋರಾಟ ಸಮಿತಿ, ಶ್ರೀರಾಮುಲು ಅಭಿಮಾನಿ ಬಳಗ ಸೇರಿದಂತೆ ಹಲವು ಸಂಘಟನೆಗಳ ಸಹಯೋಗದಲ್ಲಿ ನಡೆದ ಸುದ್ದಿಗೋಷ್ಠಿ ನಡೆಯಿತು. ಈ ವೇಳೆ ಸಂಘದ ರಾಜ್ಯಾಧ್ಯಕ್ಷ ರಾಜಣ್ಣ ಅವರು ಬೇಡಿಕೆ ಈಡೇರಿಕೆಗೆ ಆಗ್ರಹಿಸಿದ್ದರು.

ಸರ್ಕಾರ ದಿವಾಳಿಯಾಗಿದ್ದಕ್ಕೆ ಮೈಕ್ರೋ ಫೈನಾನ್ಸ್ ಹಾವಳಿ

• ಉದಯವಾಹಿನಿ, ಮೈಸೂರು

ರಾಜ್ಯ ಕಾಂಗ್ರೇಸ್ ಸರ್ಕಾರ ದಿವಾಳಿಯಾಗಿರುವುದರಿಂದ ರಾಷ್ಟ್ರೀಕೃತ ಬ್ಯಾಂಕ್‌ಗಳು ಈ ಪಾಪರ್ ಸರ್ಕಾರಕ್ಕೆ ಸಾಲವೂ ನೀಡುತ್ತಿಲ್ಲ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ವಾಗ್ದಾಳಿ ನಡೆಸಿದರು. ರಾಜ್ಯಾದ್ಯಂತ ಮೈಕ್ರೋ ಫೈನಾನ್ಸ್‌ಗಳಿಂದ ಜನರಿಗೆ ಕಿರುಕುಳ, ಸಾವು ಪ್ರಕರಣಗಳ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಸರ್ಕಾರಕ್ಕೆ ರಾಷ್ಟ್ರೀಕೃತ ಬ್ಯಾಂಕ್‌ಗಳು ಸಾಲು ನೀಡುತ್ತಿಲ್ಲ. ಹೀಗಾಗಿ ಜನರು ಮೈಕ್ರೋ ಫೈನಾನ್ಸ್ ಗಳಲ್ಲಿ ಸಾಲ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟು ಹೋಗಿದ್ದು, ಸಿಎಂ ಸಿದ್ದರಾಮಯ್ಯ ಗೂಂಡಾ ಭಾಗ್ಯ ನೀಡಿದ್ದಾರೆ. ದಿವಾಳಿಯಾಗಿರುವ ಸರ್ಕಾರದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳ ಮಿತಿಮೀರಿದೆ. ಆರನೇ ಭಾಗ್ಯವಾಗಿ ಗೂಂಡಾ ಭಾಗ್ಯ ಸಿದ್ದರಾಮಯ್ಯ ಅವರು ಸಿಎಂ ಆಗಿ ಬಂದ ಮೇಲೆ ನೀಡಿದ್ದು, ಈಗ ಗೂಂಡಾಗಳಿಗೂ ಕೆಲಸ ಕೊಟ್ಟಿದ್ದಾರೆ ಎಂದು ಕುಟುಕಿದರು.

ಇನ್ನು ಸಿದ್ದರಾಮಯ್ಯ ಅವರ ವಿರುದ್ದದ ಮುಡಾ ಹಗರಣ ಆರೋಪ ಸಂಬಂಧವೂ ಪ್ರಸ್ತಾಪಿಸಿದ ಅಶೋಕ್, ಹಗರಣ ಕುರಿತಂತೆ ಲೋಕಾಯುಕ್ತ ಪೊಲೀಸರು ಪ್ರಾಮಾಣಿಕವಾಗಿ ತನಿಖೆ ಮಾಡಿಲ್ಲ. ಸಿಎಂ ಪರವಾಗಿ ಲೋಕಾಯುಕ್ತ ವರದಿ ಬರಲಿದೆ. ಆಗ ಅಧಿಕಾರಿಗಳು ಪ್ರಮೋಶನ್‌ಗಾಗಿ ಅವರ ಪರವಾಗಿಯೇ ರಿಪೋರ್ಟ್ ಕೊಡ್ತಾರೆ ಎಂದು ಆರೋಪ ಮಾಡಿದರು. ಅಲ್ಲದೇ ಮುಡಾ ವಿರುದ್ಧದ ಬಿಜೆಪಿಯ ಹೋರಾಟವು ಮುಂದುವರಿಯಲಿದೆ ಎಂದು ಎಚ್ಚರಿಕೆ ನೀಡಿದರು.

ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ನನ್ನ ಸ್ಪರ್ಧೆ ಖಚಿತ, ಗೆಲುವು ನಿಶ್ಚಿತ

• ಉದಯವಾಹಿನಿ, ವಿಜಯಪುರ

ನಾನು ಬಿಜೆಪಿ ರಾಜ್ಯಾಧ್ಯಕ್ಷರ ಹುದ್ದೆಗೆ ಸ್ಪರ್ಧಿಸಲು ಸಿದ್ಧನಿದ್ದೇನೆ. ನನ್ನ ಸ್ಪರ್ಧೆ ಖಚಿತವಾಗಿದ್ದು ಗೆಲುವು ಕೂಡ ಅಷ್ಟೇ ನಿಶ್ಚಿತವಾಗಿದೆ ಎಂಬುದಾಗಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದಂತೆ ಅವರು ನನ್ನ ಹೆಸರು ಬಿಜೆಪಿ ನಿಷ್ಠಾವಂತರ ಗುಂಪಿನ ಕೋರ್ ಕಮಿಟಿಯಲ್ಲಿ ಅಂತಿಮ ಆದ್ರೆ ಸ್ಪರ್ಧಿಸೋದು ಖಚಿತವಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲು ನಾನು ರೆಡಿ ಎಂಬುದಾಗಿ ತಿಳಿಸಿದರು. ನಾನು ಬಿಜೆಪಿ ಉಸ್ತುವಾರಿ ಸಭೆಗೆ ಹೋಗಿಲ್ಲ. ಅಲ್ಲಿ 600 ಶಾಸಕರ ಬೆಂಬಲ ಇದೆ. ಅಲ್ಲಿಗೆ ನಮಗೇನು ಕೆಲಸ. 600 ಶಾಸಕರು, 1,500 ಸಂಸದರು, 2000 ಎಂಎಲ್ಸಿಗಳ ಬೆಂಬಲ ಇದೆ ಎಂಬುದಾಗಿ ವ್ಯಂಗ್ಯವಾಡಿದರು. ನಾನು ಬಿಜೆಪಿ ರಾಜ್ಯಾಧ್ಯಕ್ಷರ ಹುದ್ದೆಗೆ ಸ್ಪರ್ಧಿಸೋದು ಖಚಿತ. ಅಷ್ಟೇ ಅಲ್ಲದೇ ನಾನು ಸ್ಪರ್ಧಿಸಿ ಗೆಲುವು ಕೂಡ ಸಾಧಿಸಲಿದ್ದೇನೆ ಎಂಬುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

ಸಂಗೊಳ್ಳಿ ರಾಯಣ್ಣ ಬದುಕು ಸ್ಫೂರ್ತಿದಾಯಕ: ಸಿಎಂ ಬಣ್ಣನೆ

• ಉದಯವಾಹಿನಿ, ಬೆಂಗಳೂರು

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಬದುಕು ಸ್ಫೂರ್ತಿದಾಯಕವಾಗಿದೆ. ಅವರ ಆದರ್ಶಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳುವ ಮೂಲಕ ಗೌರವ ಸಲ್ಲಿಸಬೇಕೆಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ 194ನೇ ಸ್ಮರಣೋತ್ಸವ ಅಂಗವಾಗಿ ನಗರದ ರೈಲ್ವೆ ನಿಲ್ದಾಣ ಮುಂಭಾಗ ರಾಯಣ್ಣ ಪುತ್ತಳಿಗೆ ಮಾಲಾರ್ಪಣೆ ಮಾಡಿದರು. ಕಿತ್ತೂರು ರಾಣಿಚೆನ್ನಮ್ಮನವರ ಬಲಗೈ ಬಂಟನಾಗಿ ಹೋರಾಡಿದ ಸಂಗೊಳ್ಳಿ ರಾಯಣ್ಣ, ಅಪ್ರತಿಮ ದೇಶಭಕ್ತ. ಬ್ರಿಟಿಷರ ವಿರುದ್ಧ ಸೆಣೆಸಲು ಗೆರಿಲ್ಲಾ ಯುದ್ಧತಂತ್ರಗಾರಿಕೆ ಬಳಸಿದ್ದರು.

ಭಾರತದ ಶ್ರೇಷ್ಠ ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ರಾಯಣ್ಣ, ಕನ್ನಡದ ನಾಡು, ನುಡಿ,ನೆಲ, ಜಲಗಳಿಗೆ ಅತೀವ ಗೌರವ ನೀಡುತ್ತಿದ್ದರು. ಹೀಗಾಗಿ, ಅವರ ಬದುಕು ನಮಗೆಲ್ಲ ಸ್ಫೂರ್ತಿಯಾಗಿದೆ ಎಂದರು.

ಕಲೆಯಿಂದ ನೆಮ್ಮದಿ ಸಂಬಂಧ ವೃದ್ಧಿ

ಜನ ಗಣ ಮನ

• ಉದಯವಾಹಿನಿ, ನವದೆಹಲಿ

76ನೇ ಗಣರಾಜ್ಯೋತ್ಸವ ಕರ್ತವ್ಯಪಥದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಧ್ವಜಾರೋಹಣ ನೆರವೇರಿಸಿದರು. ನಂತರ ದೇಶೀಯ ಶಸ್ತ್ರಾಸ್ತ್ರವಾದ 105 ಎಂಎಂ ಲೈಟ್ ಫೀಲ್ಡ್ ಗನ್ಸ್ ಬಳಸಿ 21 ಗನ್ ಸೆಲ್ಯೂಟ್ ಜೊತೆಗೆ ರಾಷ್ಟ್ರಗೀತೆಯನ್ನು ಮೊಳಗಿಸಲಾಯಿತು. ಈ ವೇಳೆ ರಾಷ್ಟ್ರಪತಿಗಳಿಗೆ ಪ್ರಧಾನಿ ಮೋದಿ, ಉಪರಾಷ್ಟ್ರಪತಿ ಜಗದೀಪ್ ಧನಕರ್ ಸೇರಿ ದಂತೆ ಗಣ್ಯರು ಉಪಸ್ಥಿತರಿದ್ದರು. ಸಮಾರಂಭದಲ್ಲಿ ಇಂಡೋನೇಷ್ಯಾ ಅಧ್ಯಕ್ಷ ಪ್ರಬೊವೊ ಸುಬಿಯಾಂಟೊ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಗೌರವ ವಂದನೆ ಸ್ವೀಕರಿಸುವುದರೊಂದಿಗೆ ಕರ್ತವ್ಯ ಪಥದಲ್ಲಿ 76ನೇ ಗಣ ರಾಜ್ಯೋತ್ಸವ ಪರೇಡ್ ಪ್ರಾರಂಭವಾಯಿತು. ಸಾರೆ ಜಹಾ ಸೆ ಅಚ್ಛಾ' ಹಾಡನ್ನು 300 ಕಲಾವಿದರ ತಂಡ ಸಂಗೀತ ವಾದ್ಯಗಳ ಮೂಲಕ ನುಡಿಸಿತು. ಪರೇಡ್ ಕಮಾಂಡರ್ ಲೆಫ್ಟಿನೆಂಟ್ ಜನರಲ್ ಭವ್ನಿಶ್ ಕುಮಾರ್ ಅವರು ಪರೇಡ್ ಮುನ್ನಡೆಸಿದರು.

ಪರಮವೀರ ಚಕ್ರ ಮತ್ತು ಅಶೋಕ ಚಕ್ರ ಸೇರಿದಂತೆ ಅತ್ಯುನ್ನತ ಶೌರ್ಯ ಪ್ರಶಸ್ತಿ ಪುರಸ್ಕೃತರು ಪರೇಡ್ ಕಮಾಂಡರ್ ಅನ್ನು ಅನುಸರಿಸಿದರು. ಕರ್ತವ್ಯ ಪಥದಲ್ಲಿ ಐದು ಸಾವಿರ ಕಲಾವಿದರು ತಮ್ಮ ಕಲೆ ಪ್ರದರ್ಶನ ಮಾಡಿದರು. 10 ಸಾವಿರ ವಿಶೇಷ ಅತಿಥಿಗಳು ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

ಗಮನ ಸೆಳೆ ಕರ್ನಾಟಕದ ಸ್ತಬ್ಧಚಿತ್ರ: ಗಣರಾಜ್ಯೋತ್ಸವ ಪರೇಡ್‌ನಲ್ಲಿ ಕರ್ನಾಟಕದ ಗದಗ ಜಿಲ್ಲೆಯ ಲಕ್ಕುಂಡಿ ದೇವಾಲಯದ ಸ್ತಬ್ಧಚಿತ್ರ ಎಲ್ಲಾರ ಗಮನ ಸೆಳೆಯಿತು. ಇದರೊಂದಿಗೆ ಗೋವಾ, ಗುಜರಾತ್, ಆಂಧ್ರಪ್ರದೇಶ, ಬಿಹಾರ, ಚಂಡೀಗಢ, ಹರಿಯಾಣ, ಜಾರ್ಖಂಡ್ ಮತ್ತು ಮಧ್ಯಪ್ರದೇಶ ಸೇರಿದಂತೆ 15 ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳ ಟ್ಯಾಬ್ಲೋಗಳು ಕರ್ತವ್ಯ ಪಥ ಮೆರವ ಣಿಗೆಯಲ್ಲಿ ಪ್ರದರ್ಶನ ಗೊಂಡವು. ಮೆರವಣಿಗೆಯಲ್ಲಿ ಭಾರತೀಯ ಸೇನೆ ತನ್ನ ಮಿಲಿಟರಿ ಶಕ್ತಿಯನ್ನು ಪ್ರದರ್ಶಿಸಿತು. ಬ್ರಹ್ಮೋಸ್,ಆಕಾಶ್ ಕ್ಷಿಪಣಿಗಳು,ಪಿನಾಕಾ ಮಲ್ಟಿ-ಬ್ಯಾರೆಲ್ ರಾಕೆಟ್ ಲಾಂಚರ್‌ಗಳು ಮೆರವಣಿಯಲ್ಲಿ ವಿಶೇಷ ಆಕರ್ಷಣೆಯಾಗಿದ್ದವು. 22 ಫೈಟರ್ ಜೆಟ್‌ಗಳು, 11 ವಿಮಾನಗಳು, ಏಳು ಹೆಲಿ ಕಾಪ್ಟರ್‌ಗಳನ್ನು ಒಳಗೊಂಡ ವೈಮಾನಿಕ ಪ್ರದರ್ಶನವು ಎಲ್ಲಾರ ಗಮನ ಸೆಳೆಯಿತು. ಇವುಗಳಲ್ಲಿ ರಫೇಲ್, ಸು -30, ಜಾಗ್ವಾರ್, ಸಿ -130, ಸಿ -295, ಸಿ -17, ಡಾರ್ನಿಯರ್ -228, ಎಎನ್ -31 ವಿಮಾನಗಳು ಮಿ -17 ಹೆಲಿಕಾಪ್ಟರ್‌ಗಳು ಸೇರಿದ್ದವು. ಇಂಡೋನೇಷ್ಯಾ ರಾಷ್ಟ್ರೀಯ ಸಶಸ್ತ್ರ ಪಡೆಗಳ 152 ಸಿಬ್ಬಂದಿ ಮೆರವಣಿಗೆಯಲ್ಲಿ ಭಾಗವಹಿಸಿದ್ದರು. 190 ಸಿಬ್ಬಂದಿ ಮೆರವಣಿಗೆಯಲ್ಲಿ ವಾದ್ಯ ನುಡಿಸಿದರು. ದೇಶದ ಇತಿಹಾಸದಲ್ಲಿ ಮೊದಲ ಬಾರಿಗೆ, ಕರ್ತವ್ಯ ಪಥದಲ್ಲಿ ನಡೆದ ಗಣರಾಜ್ಯೋತ್ಸವ ಮೆರ ವಣಿಗೆಯನ್ನು ಉದ್ಘಾಟಿಸಲು 100 ಮಹಿಳೆಯರು ಸಂಗೀತ ವಾದ್ಯಗಳನ್ನು ನುಡಿಸಿದ್ದು ವಿಶೇಷವಾಗಿತ್ತು. ಭೂಸೇನೆ, ನೌಕಾಪಡೆ, ವಾಯುಪಡೆಯ ಮಹಿಳಾ ಅಧಿಕಾರಿಗಳಾದ ಲೆಫ್ಟಿನೆಂಟ್ ಕರ್ನಲ್ ರವೀಂದರ್‌ಜೀತ್ ರಾಂಧವಾ, ಲೆಫ್ಟಿನೆಂಟ್ ಕಮಾಂಡರ್ ಮಣಿ ಅಗರ್ವಾಲ್, ಫ್ಲೈಟ್ ಲೆಫ್ಟಿನೆಂಟ್ ರುಚಿ ಸಹಾ ಮತ್ತು ಕ್ಯಾಪ್ಟನ್ ಸಂಧ್ಯಾ ಮಹ್ಲಾ ಇದರಲ್ಲಿ ಸೇರಿದ್ದರು. ಇದಕ್ಕೂ ಮೊದಲು ಪ್ರಧಾನಿ ನರೇಂದ್ರ ಮೋದಿಯವರು ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ತೆರಳಿ ಪುಷ್ಪಗುಚ್ಛ ಅರ್ಪಿಸಿ ಮಡಿದ ವೀರಯೋಧರಿಗೆ ಗೌರವ ಸಲ್ಲಿಸಿದರು. ಮಡಿದ ವೀರಯೋಧರಿಗೆ ಶ್ರದ್ಧಾಂಜಲಿ ಸಲ್ಲಿಸಿದ ಬಳಿಕ ಮೋದಿ ಮತ್ತು ಇತರ ಗಣ್ಯರು ಪಥಸಂಚಲನವನ್ನು ವೀಕ್ಷಿಸಲು ಕರ್ತವ್ಯ ಪಥಕ್ಕೆ ಆಗಮಿಸಿದರು.



- ದೇಶಾದ್ಯಂತ ವಿಜೃಂಭಣೆಯ 76ನೇ ಗಣರಾಜ್ಯೋತ್ಸವ ಆಚರಣೆ
- ಕರ್ತವ್ಯಪಥದಲ್ಲಿ 76ನೇ ಗಣರಾಜ್ಯೋತ್ಸವ ದಿನ ಆಚರಣೆ
- ದೇಶದ ಜನತೆಗೆ ಗಣ್ಯರಿಂದ ಗಣರಾಜ್ಯೋತ್ಸವ ದಿನದ ಶುಭ ಹಾರೈಕೆ
- ಪಿಎಂ ಮೋದಿ, ಸಿಎಂ ಸಿದ್ದರಾಮಯ್ಯ ಗಣ್ಯರಿಂದ ಶುಭಾಶಯ ಸಂದೇಶ

ಮೂಲಸೌಕರ್ಯ ಒದಗಿಸುವಲ್ಲಿ ಮುಂದೆ

ಕರ್ನಾಟಕ ಸರ್ಕಾರ 2024-25ರಲ್ಲಿ ರಾಜ್ಯದ ಹಣಕಾಸು ವ್ಯವಸ್ಥೆಯನ್ನು ಉತ್ತಮವಾಗಿ ನಿರ್ವಹಿಸಿದೆ, ರಾಜ್ಯದ ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸಿದೆ. ಡಿ. 2024 ರ ಅಂತ್ಯದ ವೇಳೆಗೆ, ರಾಜ್ಯದ ಆದಾಯ ಸಂಗ್ರಹವು 1,81,908 ಕೋಟಿಗಳಷ್ಟಿತ್ತು, ವರ್ಷದಿಂದ ವರ್ಷಕ್ಕೆ 13% ಬೆಳವಣಿಗೆಯನ್ನು ಸಾಧಿಸಿಕೊಂಡು ಬಂದಿದೆ. ರಾಜ್ಯಗಳು ಸಂಗ್ರಹಿಸಿದ ಒಟ್ಟು ಜಿಎಸ್‌ಟಿ ಆದಾಯದ ವಿಷಯದಲ್ಲಿ ಕರ್ನಾಟಕವು ದೇಶದಲ್ಲಿ ಎರಡನೇ ಸ್ಥಾನ ದಲ್ಲಿದೆ. ಸರ್ಕಾರ ನಾಡಿನ ಸಮಗ್ರ ಅಭಿವೃದ್ಧಿ, ಸಂಪತ್ತಿನ ವಿನಿಯೋಗದಲ್ಲಿ ಸಾಮಾಜಿಕ ನ್ಯಾಯವನ್ನು ಅನುಷ್ಠಾನ ಮಾಡುವಲ್ಲಿ ಮಹತ್ತರ ಪಾತ್ರವಹಿಸಿದೆ. ಆರೋಗ್ಯ, ವಿದ್ಯುತ್, ಶಿಕ್ಷಣ, ರಸ್ತೆ ಮುಂತಾದ ಮೂಲಭೂತ ಸೌಲಭ್ಯಗಳ ಒದಗಿಸುವಿಕೆಯಲ್ಲಿ ಮುಂದೆ ಇದೆ.

ಪಂಚ ಗ್ಯಾರಂಟಿ ಅನುಷ್ಠಾನ

ರಾಜ್ಯದಲ್ಲಿ ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಜಾರಿಗೆ ತರಲಾದ ''ಗೃಹಲಕ್ಷ್ಮಿ'' ಯೋಜನೆಯಡಿ, ಆಗಸ್ಟ್ 2023 ರಿಂದ ಪ್ರತಿ ಕುಟುಂಬದ ಯಜಮಾನಿಯರಿಗೆ ಮಾಸಿಕ ಎರಡು ಸಾವಿರ ರೂ ನಂತೆ ಒಟ್ಟು 35,180.20 ಕೋಟಿ ರೂ. ಆರ್ಥಿಕ ನೆರವು ನೀಡಲಾಗಿದೆ. ಗೃಹ ಜ್ಯೋತಿ ಯೋಜನೆಯಡಿ, ಪ್ರಸ್ತುತ 1.62 ಕೋಟಿ ಗ್ರಾಹಕರು ಪ್ರಯೋಜನ ಪಡೆಯುತ್ತಿದ್ದಾರೆ. ಶಕ್ತಿ ಯೋಜನೆ - ಮಹಿಳಾ ಸಬಲೀಕರಣವನ್ನು ಬಲಪಡಿಸುವತ್ತ ಸರ್ಕಾರದ ಒಂದು ಹೆಜ್ಜೆಯಾಗಿದೆ. ಯೋಜನೆಯ ಆರಂಭದಿಂದ ಈವರೆಗೆ ಒಟ್ಟು 373.27 ಕೋಟಿ ಟ್ರಿಪ್‌ಗಳಲ್ಲಿ ಫಲಾನುಭವಿಗಳು ಉಚಿತವಾಗಿ ಪ್ರಯಾಣಿಸಿದ್ದು, ಇದಕ್ಕಾಗಿ ಸರ್ಕಾರವು 9,051 ಕೋಟಿ ರೂ. ವಿನಿಯೋಗಿಸಿದೆ ಎಂದು ವಿವರಿಸಿದರು.

ಅನ್ನಭಾಗ್ಯ ಯೋಜನೆ ಜಾರಿ

ಯುವನಿಧಿ ಯೋಜನೆಯಡಿಯಲ್ಲಿ 1,24,176 ಅರ್ಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿದೆ. ಯುವನಿಧಿ ಪ್ಲಸ್ ಉಪಕ್ರಮದಡಿಯಲ್ಲಿ 25,000 ಫಲಾನುಭವಿಗಳಿಗೆ ಕೌಶಲ್ಯ ತರಬೇತಿ ನೀಡಲಾಗುವುದು. 12,000 ಅಭ್ಯರ್ಥಿಗಳಿಗೆ ಕೈಗಾರಿಕಾ ಸಂಪರ್ಕ ಕೋಶ ಮತ್ತು ಭವಿಷ್ಯದ ಕೌಶಲ್ಯಗಳ ಅಡಿಯಲ್ಲಿ ತರಬೇತಿ ನೀಡಲಾಗುತ್ತಿದೆ. ಜನರ ಹಸಿವನ್ನು ನೀಗಿಸುವುದರ ದೃಷ್ಟಿಯಿಂದ ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತರಲಾಯಿತು. ಬಿಪಿಎಲ್ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ 5 ಕೆ.ಜಿ ಅಕ್ಕಿ ನೀಡುವ ಜೊತೆಗೆ, ಹೆಚ್ಚುವರಿ 5 ಕೆಜಿ ಅಕ್ಕಿಯ ಬದಲಾಗಿ ಪ್ರತಿ ಸದಸ್ಯರಿಗೆ 170 ರೂ. ರಂತೆ ಅವರ ಬ್ಯಾಂಕ್ ಖಾತೆಗೆ ನೇರ ಹಣ ವರ್ಗಾವಣೆ ಮಾಡಲಾಗುತ್ತಿದೆ. ಜುಲೈ-2023 ರಿಂದ ಈವರೆ ಡಿಬಿಟಿ ಮೂಲಕ ವರ್ಗಾಯಿಸಲು 9,775.51 ಕೋಟಿ ರೂ. ಬಿಡುಗಡೆ ಮಾಡಲಾಗಿದೆ.

- ಗಣರಾಜ್ಯೋತ್ಸವ 2025: ಕರ್ತವ್ಯ ಪಥದಲ್ಲಿ ಧ್ವಜಾರೋಹಣ
- ನೆರವೇರಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು
- ಪಂಚ ಗ್ಯಾರಂಟಿ ಮಧ್ಯೆಯೂ ಆರ್ಥಿಕ ಪ್ರಗತಿ
- ರಾಜ್ಯ ಸರ್ಕಾರದ ಸಾಧನೆ ಶ್ಲಾಘಿಸಿದ ರಾಜ್ಯಪಾಲ ಗೆಹ್ಲೋಟ್

ಜಮೀರ್ ಅಹ್ಮದ್ ಖಾನ್ ಕಾರ್ಯಕ್ರಮದಲ್ಲಿ ಕಳಚಿ ಬಿದ್ದ ರಾಷ್ಟ್ರಧ್ವಜ

ಪುನೀತ್ ರಾಜ್ ಕುಮಾರ್ ಕ್ರೀಡಾಂಗಣದಲ್ಲಿರುವ ದೇಶದ ಎರಡನೇ ಬೃಹತ್ ಧ್ವಜಸ್ತಂಭದಿಂದ ಧ್ವಜ ಕಳಚಿ ಬಿದ್ದ ಘಟನೆ

• ಉದಯವಾಹಿನಿ, ಬೆಂಗಳೂರು

ಭಾನುವಾರ ಎಲ್ಲೆಡೆ ಗಣರಾಜ್ಯೋತ್ಸವ ನೆರವೇರಿದೆ. ಮುಂಜಾನೆಯೇ ಸರ್ಕಾರದ ವತಿಯಿಂದ ಪ್ರತಿ ಜಿಲ್ಲೆಯಲ್ಲಿ ಧ್ವಜಾರೋಹಣ ಕೂಡ ನಡೆದಿದೆ.

ಆದರೆ ಹೊಸಪೇಟೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಷ್ಟ್ರಧ್ವಜವು ಕಳಚಿ ಬಿದ್ದಿರುವ ಘಟನೆ ವರದಿಯಾಗಿದೆ. ಈ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿಗಳೂ ಆದ ಸಚಿವ ಜಮೀರ್ ಅಹ್ಮದ್ ಖಾನ್ ಕೂಡ ಇದ್ದರು ಎನ್ನಲಾಗಿದೆ. ವಿಜಯನಗರ ಜಿಲ್ಲೆಯ ಹೊಸಪೇಟೆ ನಗರದ ಪುನೀತ್ ರಾಜ್ ಕುಮಾರ್ ಕ್ರೀಡಾಂಗಣದಲ್ಲಿರುವ ದೇಶದ ಎರಡನೇ ಬೃಹತ್ ಧ್ವಜಸ್ತಂಭದಿಂದ ಧ್ವಜ ಕಳಚಿ ಬಿದ್ದ ಘಟನೆ ನಡೆದಿದೆ. ಕ್ರೀಡಾಂಗಣದಲ್ಲಿ ಗಣರಾಜ್ಯೋತ್ಸವ ಆಚರಣೆ ವೇಳೆಯೇ ಈ ಘಟನೆ ನಡೆದಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಜಮೀರ್ ಅಹ್ಮದ್ ಖಾನ್ ಅವರು ಸಾಂಕೇತಿಕವಾಗಿ ಧ್ವಜಾರೋಹಣ ನೆರ ವೇರಿಸಿದ್ದರು. ನಂತರ ಅವರು ಅವರು ಪರೇಡ್‌ನಲ್ಲಿ ಪಥಸಂಚಲನದಲ್ಲಿ ಭಾಗಿಯಾಗಿ ಗೌರವ ವಂದನೆ ಸ್ವೀಕರಿಸುತ್ತಿದ್ದ ವೇಳೆ ಧ್ವಜ ಏಕಾಏಕಿ ಕುಸಿದು ಬಿದ್ದಿದೆ. ಧ್ವಜ ದೊಡ್ಡದಾದ ಕಾರಣ ಅದು ನೇರವಾಗಿ ಸ್ತಂಭದ ಕೆಳಗೆ ಬಿತ್ತು. ಆದರೆ ಈ ವೇಳೆ ಅಲ್ಲಿ ಯಾರೂ ಇಲ್ಲದ ಕಾರಣ ಯಾವುದೇ ಅನಾಹುತಗಳು ನಡೆಯಲಿಲ್ಲ ಎನ್ನಲಾಗಿದೆ. ಬಳಿಕ ಭಾಷಣ ಮುಗಿಸಿದ ಜಮೀರ್ ಅಹ್ಮದ್ ಖಾನ್

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಹೋತನಹಳ್ಳಿಯ ಸಿದ್ಧಾರೂಢ ಮಠ

ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಹೋತನಹಳ್ಳಿ ಪುಟ್ಟ ಗ್ರಾಮ. 1877 ರಲ್ಲಿ ಸಿದ್ಧಾರೂಢ ಸ್ವಾಮಿಗಳು ಈ ಮಾರ್ಗವಾಗಿ ಸಂಚರಿಸಿ ಹುಬ್ಬಳ್ಳಿಗೆ ಹೋಗುವ ಮುಂಚೆ ಕೆಲ ದಿನ ಇಲ್ಲಿ ತಂಗಿದ್ದರು. ಹಲವು ಪವಾಡಗಳನ್ನೂ ತೋರಿದರು. ಅವರು ಕುಳಿತಿದ್ದ ಕಲ್ಲು ಸಿದ್ಧಾರೂಢರ ಎಣ್ಣೆಗಲ್ಲು ಇಂದಿಗೂ ಪೂಜೆಗೊಳ್ಳುತ್ತಿದೆ. ಶಿವನವತಾರಿ ಎಂದೇ ಪೂಜಿಸಲ್ಪಡುವ ಸಿದ್ಧಾರೂಢರ ಪಾದಸ್ಪರ್ಶದಿಂದ ಪವಿತ್ರಗೊಂಡ ಈ ಬೆಟ್ಟದಡಿಯಲ್ಲಿ ಪುಟ್ಟ ಹಂಚಿನ ಸಿದ್ಧಾರೂಢ ಮಠ ನಿರ್ಮಿತವಾಗಿತ್ತು. 2002 ರಲ್ಲಿ ಈ ಮಠಾಧೀಶರಾಗಿ ಬಂದ ಶಂಕರಾನಂದ ಸ್ವಾಮೀಜಿ ಇದೀಗ ಮಠವನ್ನು ಹೆಮ್ಮರವಾಗಿ ಬೆಳೆಸಿ ಬೆಳೆಸುತ್ತಿದ್ದಾರೆ. 17.1.2025 ರಿಂದ 24.1.2025 ರವರೆಗಿನ ಅವರ ಷಷ್ಟ್ಯಬ್ದ, ನೂತನ ರಥ, ಪುಸ್ತಕ ಲೋಕಾರ್ಪಣೆ ಸಮಾರಂಭದಲ್ಲಿ ಭಾಗಿಯಾಗಿದ್ದೆ. ಭಕ್ತರು ಮೂರು ಎಕರೆ ದಾನ ನೀಡಿದ್ದಾರೆ. ನೂತನ ಮಠ ನಿರ್ಮಾಣಗೊಂಡಿದೆ. ಭವ್ಯ ಬೃಹತ್ ಸುಂದರ ರಥ ಸಿದ್ಧಗೊಂಡಿದೆ. ಕರ್ನೂಲ್‌ನ ಬಸವರಾಜಯ್ಯನವರು ಪಂಚಲಿಂಗೇಶ್ವರ ಶನೈಶ್ಚರ ನವಗ್ರಹ ದೇವಾಲಯ ನಿರ್ಮಿಸುತ್ತಿದ್ದಾರೆ. ಸರಳ ಸಜ್ಜನ ಮೃದುಹೃದಯಿ ಸಂತ ಶಂಕರಾನಂದ ಸ್ವಾಮೀಜಿ ಜನಮನ ಗೆದ್ದಿದ್ದಾರೆ. ಊರಹೊರವಲಯದ ಕಾಡುಪ್ರದೇಶದಲ್ಲಿ ಹಾಕಿದ್ದ ವಿಶಾಲ ಪೆಂಡಾಲ್ ಸಾಕಾಗಲಿಲ್ಲ. ಕತ್ತಲಾದರೂ ಮಹಿಳೆ ಮಕ್ಕಳು ಟ್ರ್ಯಾಕ್ಟರ್ ಗಾಡಿಯಲ್ಲಿ ತಂಡೋಪತಂಡ ಬಂದು ಸೇರುತ್ತಲಿದ್ದರು. ಸಿದ್ಧಾರೂಢರು ಸ್ವಾಮಿ ವಿವೇಕಾನಂದರಿಗೆ ಹೇಳಿದ ನ ರತ್ನಮನ್ವಿಷ್ಯತಿ ಮೃಗ್ಯತೇ ಹಿ ತತ್ = ರತ್ನವು ಹುಡುಕಿ ಹೋಗದು, ಬೇಕಾದವರು ಹುಡುಕಿ ಹೋಗುತ್ತಾರೆ, ಮುಂದೆ ಸ್ವಾಮಿ ವಿವೇಕಾನಂದರು ಹೇಳಿದ ಗುಹೆಯಲ್ಲಡಗಿದ್ದರೂ ಆ ಮಹಾತ್ಮನ ಆ ಶಕ್ತಿ ಗುಹೆ ಭೇದಿಸಿ ವಿಶ್ವ ತಲುಪುವುದು ಎಂಬ ಮಾತುಗಳು ನೆನಪಿಗೆ ಬಂದವು.

ಹರಿದಾಸ ಮಂಜರಿ ಗಾಯನ

• ಉದಯವಾಹಿನಿ ಬೆಂಗಳೂರು

ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಶ್ರೀ ಪುರಂದರದಾಸರ ಆರಾಧನೋತ್ಸವದ ಅಂಗವಾಗಿ ಜನವರಿ 27, ಸೋಮವಾರ ಸಂಜೆ 6-30ಕ್ಕೆ ಹರಿದಾಸ ಮಂಜರಿ. ಗಾಯನ : ಕು|| ಸುಶ್ರಾವ್ಯ ಆಚಾರ್ಯ, ಪಿಟೀಲು : ಶ್ರೀ ಎಸ್. ಶಶಿಧರ್, ಮೃದಂಗ : ಶ್ರೀ ಶ್ರೀನಿವಾಸ್ ಅನಂತರಾಮಯ್ಯ. ಸ್ಥಳ ; ಶ್ರೀ ರಾಘವೇಂದ್ರ ಸ್ವಾಮಿಗಳ ಮಠಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003 ಸರ್ವರಿಗೂ ಆತ್ಮೀಯ ಸುಸ್ವಾಗತ

ಕಮೀಷನರ್ ಆದೇಶ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ

• ಉದಯವಾಹಿನಿ ಬೆಂಗಳೂರು

ಸೆಲೆಬ್ರೆಟಿಯಾಗಿದ್ದಂತ ನಟ ದರ್ಶನ್ ಅವರಿಗೆ ಗನ್ ಲೈಸೆನ್ಸ್ ನೀಡಲಾಗಿತ್ತು. ಆದರೇ ಜೈಲುಪಾಲಾಗಿ ಜಾಮೀನಿನ ಮೇಲೆ ಹೊರ ಬಂದ ನಂತ್ರ, ಅವರ ಗನ್ ಲೈಸೆನ್ಸ್ ರದ್ದುಗೊಳಿಸಲಾಗಿತ್ತು. ಅಲ್ಲದೇ ಹಿಂಪಡೆಯಲಾಗಿತ್ತು. ಇದೀಗ ಕಮೀಷನರ್ ಆದೇಶ ಪ್ರಶ್ನಿಸಿ ನಾಳೆ ಹೈಕೋರ್ಟ್ ಗೆ ದರ್ಶನ್ ಪರ ವಕೀಲರು ಅರ್ಜಿ ಸಲ್ಲಿಸಲಿದ್ದಾರೆ. ನಟ ದರ್ಶನ್ ಅವರಿಗೆ ನೀಡಲಾಗಿದ್ದಂತ ಗನ್ ಲೈಸೆನ್ಸ್ ಅನ್ನು ಬೆಂಗಳೂರು ನಗರ ಪೊಲೀಸ್ ಆಯುಕ್ತರು ರದ್ದುಗೊಳಿಸಿದರು. ಆ ಬಳಿಕ ನಟ ದರ್ಶನ್ ಗನ್ ಅನ್ನು ರಾಜ ರಾಜೇಶ್ವರಿ ನಗರ ಪೊಲೀಸ್ ಠಾಣೆಗೆ ಸರೆಂಡರ್ ಮಾಡಿದ್ದರು. ಇದೀಗ ನಾಳೆ ನಟ ದರ್ಶನ್ ಪರ ವಕೀಲ ಸುನೀಲ್ ಎಂಬುವರು ಕಮೀಷನರ್ ಆದೇಶ ಪ್ರಶ್ನಿಸಿ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಲಿದ್ದಾರೆ ಎಂಬುದಾಗಿ ತಿಳಿದು ಬಂದಿದೆ. ಆ ಮೂಲಕ ಗನ್ ಲೈಸೆನ್ಸ್ ರದ್ದು ವಿಚಾರವನ್ನು ಹೈಕೋರ್ಟ್ ನಲ್ಲಿ ಪ್ರಶ್ನಿಸಲಿದ್ದಾರೆ.

ಶಿವಣ್ಣನನ್ನು ನೋಡಿದ ಕೂಡಲೇ ಅಪ್ಪಾಜಿಯವರನ್ನ ನೋಡಿದ ಹಾಗಾಯ್ತು

• ಉದಯವಾಹಿನಿ ಬೆಂಗಳೂರು

ಆನಾರೋಗ್ಯದ ಚಿಕಿತ್ಸೆಗಾಗಿ ಅಮೆರಿಕಕ್ಕೆ ತೆರಳಿದ್ದ ಶಿವರಾಜ್ ಕುಮಾರ್ ಅವರು ಚಿಕಿತ್ಸೆ ಪಡೆದು ಗುಣಮುಖರಾಗಿ ಬೆಂಗಳೂರಿಗೆ ವಾಪಸ್ಸಾಗಿದ್ದಾರೆ. ವಿಮಾನ ನಿಲ್ದಾಣದಲ್ಲಿ ಸಿನಿಮಾ ಸೆಲೆಬ್ರಿಟಿಗಳು, ಆಪ್ತರು ಶಿವಣ್ಣ ಅವರನ್ನು ಸ್ವಾಗತಿಸಿದ್ದಾರೆ. ವಿಮಾನ ನಿಲ್ದಾಣದಿಂದ ಹೊರಬರುತ್ತಲೇ ಎಲ್ಲರೆಡೆ ಮುಗುಳ್ಳಗುತ್ತಾ ಕೈಬೀಸಿದ ಶಿವಣ್ಣ ತಮ್ಮ ಸ್ವಾಗತಕ್ಕೆ ಆಗಮಿಸಿದವರನ್ನು ತಬ್ಬಿ ಸಂತಸ ಪಟ್ಟರು. ವಿಮಾನ ನಿಲ್ದಾಣದ ಬಳಿಯ ಟೋಲ್ ಗೇಟ್‌ನಲ್ಲಿ ಅಭಿಮಾನಿಗಳು ಶಿವಣ್ಣನಿಗೆ ಸೇಬು ಹಣ್ಣಿನ ಹಾರ ಹಾಕಿ ಅದ್ದೂರಿಯಾಗಿ ಸ್ವಾಗತ ಮಾಡಿದ್ದಾರೆ. ಶಿವಣ್ಣ ಸಹ ಕಾರು ನಿಲ್ಲಿಸಿ ಅಭಿಮಾನಿಗಳು ಸ್ವಾಗತ ಸ್ವೀಕರಿಸಿದ್ದಾರೆ. ಸ್ವಾಗತ ಮಾಡಿದ ಅಭಿಮಾನಿಗಳಿಗೆ ಧನ್ಯವಾದ ಹೇಳಿ, ಮಾನ್ಯತಾ ಟೆಕ್ ಪಾರ್ಕ್ ನ ಮನೆಗೆ ಆಗಮಿಸಿದ್ದಾರೆ. ಇನ್ನು ಶಸ್ತ್ರ ಚಿಕಿತ್ಸೆ ಯಶಸ್ವಿಯಾದ ಬಳಿಕ ನಟ ಶಿವರಾಜ್ ಕುಮಾರ್ ಬೆಂಗಳೂರಿಗೆ ಆಗಮಿಸಿದ ವಿಷಯ ತಿಳಿದು ಸಹೋದರ ರಾಘವೇಂದ್ರ ರಾಜಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ.

ಹೂಮನಸಿನ ಅಭಿಮಾನಿಗಳಿಂದ ಶಿವಣ್ಣನಿಗೆ ಹಣ್ಣಿನ ಹಾರ

• ಉದಯವಾಹಿನಿ ಬೆಂಗಳೂರು

ಹ್ಯಾಟ್ರಿಕ್ ಹೀರೋ ಶಿವಣ್ಣ ಭಾರತಕ್ಕೆ ಮರಳಿದ್ದಾರೆ. ಕೆಐಎಎಲ್ ನಿಂದ ಹೊರಬಂದ ಶಿವಣ್ಣಗೆ ಭರ್ಜರಿ ಸ್ವಾಗತ ಕೋರಲಾಗಿದೆ. ಚಿಕಿತ್ಸೆಗಾಗಿ ಅಮೆರಿಕಕ್ಕೆ ತೆರಳಿದ್ದ ಶಿವರಾಜ್ ಕುಮಾರ್ ಅವರು ಚಿಕಿತ್ಸೆ ಪಡೆದು ಗುಣಮುಖರಾಗಿ ಬೆಂಗಳೂರಿಗೆ ವಾಪಸ್ ಬಂದಿದ್ದಾರೆ.. ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಅಭಿಮಾನಿಗಳು, ಆಪ್ತರು ಶಿವಣ್ಣ ಅವರನ್ನು ಸ್ವಾಗತಿಸಿದ್ದಾರೆ. ವಿಮಾನ ನಿಲ್ದಾಣದಿಂದ ಹೊರಬರುತ್ತಲೇ ಎಲ್ಲರೆಡೆ ಮುಗುಳ್ಳಗುತ್ತಾ ಕೈಬೀಸಿದ ಶಿವಣ್ಣ, ತಮ್ಮ ಸ್ವಾಗತಕ್ಕೆ ಆಗಮಿಸಿದವರನ್ನು ತಬ್ಬಿ ಸಂತಸ ಪಟ್ಟರು. ವಿಮಾನ ನಿಲ್ದಾಣದ ಬಳಿಯ ಟೋಲ್ ಗೇಟ್‌ನಲ್ಲಿ ಅಭಿಮಾನಿಗಳು ಶಿವಣ್ಣನಿಗೆ ಸೇಬು ಹಣ್ಣಿನ ಹಾರ ಹಾಕಿ ಅದ್ದೂರಿಯಾಗಿ ಸ್ವಾಗತ ಮಾಡಿದ್ದಾರೆ. ಶಿವಣ್ಣ ಸಹ ಕಾರು ನಿಲ್ಲಿಸಿ ಅಭಿಮಾನಿಗಳು ಸ್ವಾಗತ ಸ್ವೀಕರಿಸಿದ್ದಾರೆ. ಸ್ವಾಗತ ಮಾಡಿದ ಅಭಿಮಾನಿಗಳಿಗೆ ಧನ್ಯವಾದ ಹೇಳಿ, ಮಾನ್ಯತಾ ಟೆಕ್ ಪಾರ್ಕ್ ನ ಮನೆಯತ್ತ ಪ್ರಯಾಣ ಬೆಳೆಸಿದ್ದಾರೆ. ಮುಂದಿನ 15 ದಿನ ಕಾಲ ಶಿವಣ್ಣ ವಿಶ್ರಾಂತಿ ಪಡೆಯಲಿದ್ದಾರೆ. ಯುಗಾದಿ ನಂತರ ಶಿವಣ್ಣ ಶೂಟಿಂಗ್ ನಲ್ಲಿ ಭಾಗಿಯಾಗಲಿದ್ದಾರೆ.

ಫೆ.19ರಂದು ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ

• ಉದಯವಾಹಿನಿ ಬೆಂಗಳೂರು

ಡಿ.ಕೆಂಪಣ್ಣ ನಿಧನದಿಂದ ತೆರವಾಗಿರುವ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಫೆ.19ರಂದು ಚುನಾವಣೆ ನಿಗದಿಯಾಗಿದೆ. ಸಂಘದ ಪ್ರಭಾರ ಅಧ್ಯಕ್ಷರಾಗಿ ಜಗನ್ನಾಥ್ ಬಿ.ಕೇಗಜಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸಂಘಕ್ಕೆ ಪೂರ್ಣಕಾಲಿಕ ಅಧ್ಯಕ್ಷರನ್ನಾಗಿ ಮಾಡುವ ನಿಟ್ಟಿನಲ್ಲಿ ಚುನಾವಣೆ ನಡೆಸಲು ಕಾರ್ಯಕಾರಿ ಸಮಿತಿ ಸಭೆಯಲ್ಲಿ ಆಡಳಿತ ಮಂಡಳಿ ಸದಸ್ಯರು ಈಗಾಗಲೇ ತೀರ್ಮಾನಿಸಿದ್ದಾರೆ. ಇದು ಹಳೆಯ ಸಂಘವಾಗಿದೆ. ನೂರಾರು ಗುತ್ತಿಗೆದಾರರು ಪ್ರಮುಖ ಕಾಮಗಾರಿಗಳನ್ನು ಕಾರ್ಯನಿರ್ವಹಿಸುತ್ತಾ ಬರುತ್ತಿದ್ದಾರೆ. ಇದೀಗ ವಿವಿಧ ಇಲಾಖೆಗಳಲ್ಲಿ ಬಾಕಿ ಉಳಿಸಿಕೊಂಡಿರುವ ಕಾಮಗಾರಿ ಬಿಲ್ ಗಳಿಗೆ ಹಣ ಪಾವತಿಸುವ ಸಂಬಂಧ ಸರ್ಕಾರದ ವಿರುದ್ಧ ಹೋರಾಟ ನಡೆಸಿಕೊಂಡು ಬರುತ್ತಿದೆ. ಸಂಘಕ್ಕೆ ಪೂರ್ಣಕಾಲಿಕ ಅಧ್ಯಕ್ಷರು ಇದ್ದರೆ ಸರ್ಕಾರ ವಿರುದ್ಧ ಹೋರಾಟಕ್ಕೆ ಇನ್ನಷ್ಟು ಬಲ ಸಿಗಲಿದೆ.

ಸಂವಿಧಾನ ರಕ್ಷಣೆಗೆ, ದೇಶದ ಐಕ್ಯತೆಗೆ ನಾವು ಹೋರಾಟ ಮಾಡಬೇಕು

76ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಕೆಪಿಸಿಸಿ ಕಚೇರಿಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಧ್ವಜಾರೋಹಣ ನೆರವೇರಿಸಿದರು

• ಉದಯವಾಹಿನಿ ಬೆಂಗಳೂರು

ದೇಶದ ಸಂವಿಧಾನ ರಕ್ಷಣೆ ಹಾಗೂ ಐಕ್ಯತೆಗೆ ನಾವು ಹೋರಾಟ ಮಾಡಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕರೆ ನೀಡಿದರು.

76ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಕೆಪಿಸಿಸಿ ಕಚೇರಿಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಧ್ವಜಾರೋಹಣ ನೆರವೇರಿಸಿದರು. ನಂತರ ಮಾತನಾಡಿದ ಅವರು ಹೇಳಿದ್ದಿಷ್ಟು, 76ನೇ ಗಣರಾಜ್ಯೋತ್ಸವ ಬಹಳ ಮಹತ್ವದ್ದಾಗಿದೆ. ಸಂವಿಧಾನ ರಕ್ಷಣೆ ಹಾಗೂ ಸಂವಿಧಾನದ ಪ್ರಕಾರವಾಗಿ ನಡೆದುಕೊಳ್ಳುವುದು ಅತಿ ಮುಖ್ಯ. ಆದರೆ ಈಗಿರುವ ಕೇಂದ್ರ ಸರ್ಕಾರ ಸಂವಿಧಾನದ ಎಲ್ಲಾ ಮೌಲ್ಯಗಳನ್ನು ಮೂಲೆಗುಂಪು ಮಾಡುತ್ತಿದೆ. ಇದರಿಂದ ನಾಗರೀಕರಿಗೆ ಸಿಗಬೇಕಾದ ಮೂಲಭೂತ ಹಕ್ಕುಗಳು, ಅದರಲ್ಲೂ ಮಹಿಳೆಯರಿಗೆ ವಿಶೇಷವಾಗಿ ಸಿಗುವ ಸ್ವಾತಂತ್ರ್ಯ ಮೊಟಕುಗೊಳಿಸಲಾಗುತ್ತಿದೆ ಎಂದರು.

ದೇಶಕ್ಕೆ ಸ್ವಾತಂತ್ರ್ಯ ಹಾಗೂ ಸಂವಿಧಾನ ಸಿಕ್ಕ ನಂತರ ನಮಗೆ ವಿಶೇಷವಾದ ಸ್ಥಾನಮಾನ ಸಿಕ್ಕಿದೆ. ಇದು ಅನೇಕರಿಗೆ ಗೊತ್ತಿಲ್ಲ, ಪ್ರಜಾಪ್ರಭುತ್ವವ್ಯವಸ್ಥೆಯಲ್ಲಿ ಪ್ರತಿಯೊಬ್ಬರ ಮನೆ ಬಾಗಿಲಿಗೆ

ಉದಯವಾಹಿನಿ ಚಿತ್ರ

ಹೋಗಿ ಮತ ಕೇಳಲಾಗುತ್ತಿದೆ. ಇದು ಕಾಂಗ್ರೇಸ್ ಪಕ್ಷದ ಕೊಡುಗೆ. ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಪಂಡಿತ್ ಜವಹಾರ್ ಲಾಲ್ ನೆಹರು ಅವರ ಕೊಡುಗೆ ಎಂದರು. ಇವರುಗಳ ಕೊಡುಗೆಯಿಂದ ನಾವು ಈ ದೇಶವನ್ನು ಸ್ವಾತಂತ್ರ್ಯವಾಗಿ ಉಳಿಸಿ, ದೇಶದ ಐಕ್ಯತೆಗಾಗಿ ಹೋರಾಟ ಮಾಡುತ್ತಿದ್ದೇವೆ. ಆದರೆ ದುಃಖದ ವಿಚಾರ ಎಂದರೆ, ಅಮಿತ್ ಶಾರಂತಹ ದೇಶದ ಪ್ರಮುಖ ನಾಯಕರು ಸಂವಿಧಾನವನ್ನು ಹಿಯ್ಯಾಳಿಸುತ್ತಿದ್ದಾರೆ.

> ನಾಳೆ ಅಂಬೇಡ್ಕರ್ ಅವರ ಜನ್ಮಸ್ಥಳದಲ್ಲಿ ಲಕ್ಷಾಂತರ ಜನರನ್ನು ಸೇರಿಸಿ ದೊಡ್ಡ ಸಭೆ ನಡೆಸುತ್ತಿದ್ದು, ನಾನು ಅದರಲ್ಲಿ ಭಾಗವಹಿಸುತ್ತಿದ್ದೇನೆ. ಮೋದಿ ಹಾಗೂ ಅಮಿತ್ ಶಾ ಅವರು ದೇಶಕ್ಕೆ ಮಾಡುತ್ತಿರುವ ತೊಂದರೆ, ದೇಶದ ಸ್ವಾತಂತ್ರಕ್ಕೆ ಧಕ್ಕೆ ತರುತ್ತಿರುವುದರ ವಿರುದ್ಧ ಧ್ವನಿ ಎತ್ತಲಾಗುವುದು ಹೇಳಿದರು.

ಲಕ್ಷಾಂತರ ಜನರನ್ನು ಸೇರಿಸಿ ದೊಡ್ಡ ಸಭೆ

ಸಂವಿಧಾನ ರಚಿಸಿದವರ ಬಗ್ಗೆ ಟೀಕೆ ಮಾಡಿ ಅವರಿಗೆ ಅಗೌರವ ತೋರುತ್ತಿದ್ದಾರೆ ಎಂದು ತಿಳಿಸಿದರು.

ಪ್ರತಿಯೊಂದಕ್ಕೂ ಅಂಬೇಡ್ಕರ್ ಹೆಸರು ಜಪ ಮಾಡುತ್ತೀರಿ.

ಅದರ ಬದಲು ದೇವರ ಹೆಸರು ಜಪಿಸಿದ್ದರೆ 7 ಜನ್ಮದಲ್ಲಿ ಸ್ವರ್ಗ ಸಿಗುತ್ತಿತ್ತು ಎಂದು ಸಂಸತ್ತಿನಲ್ಲಿ ಅಮಿತ್ ಶಾ ಅವರು ಹೇಳಿದ್ದಾರೆ. ಈ ದೇಶದ ನರಕದಲ್ಲಿದ್ದಾಗ ಇವರು

> ನೆಹರೂ ಇಂದಿರಾಗಾಂಧಿ, ರಾಜೀವ್ ಗಾಂಧಿ ಅವರು ದೇಶಕ್ಕೆ ಮಾಡಿರುವುದನ್ನು ಮೋದಿ ಅವರಾಗಲಿ, ಅವರ ಜತೆಗಿರುವವರಾಗಲಿ ಮಾಡುತ್ತಿಲ್ಲ. ಅದಕ್ಕಾಗಿ ನಾವು ಹೋರಾಟ ಮಾಡಬೇಕಾಗಿದೆ ಎಂದರು.

ದೇಶಕ್ಕೆ ಸ್ವಾತಂತ್ರ್ಯ ತಂದುಕೊಡಲಿಲ್ಲ ಎಂದರು. ಮೋದಿ ಅವರು ತಮ್ಮ ಭಾಷಣದಲ್ಲಿ ದೇಶವನ್ನು ಆರ್ಥಿಕವಾಗಿ ಮೂರನೇ ಸ್ಥಾನಕ್ಕೆ ತರಲು ಶಕ್ತಿ ತುಂಬುತ್ತಿದ್ದೇನೆ ಎಂದು ಹೇಳಿದ್ದಾರೆ. ಆದರೆ ದೇಶ 5ನೇ ಸ್ಥಾನದಿಂದ ಮುಂದಕ್ಕೆ ಹೋಗಲು ಸಾಧ್ಯವಾಗುತ್ತಿಲ್ಲ. ಯುಪಿಎ ಸರ್ಕಾರದ ಶ್ರಮದಿಂದ ದೇಶವನ್ನು ಆರ್ಥಿಕವಾಗಿ ನಾಲ್ಕನೇ ಸ್ಥಾನಕ್ಕೆ ತರಲಾಗಿತ್ತು. ಆದರೆ ಈಗಿನ ಸರ್ಕಾರಕ್ಕೆ ನಾಲ್ಕನೇ ಸ್ಥಾನಕ್ಕೆ ತರಲೂ ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು. ಕೇಂದ್ರ ಸರ್ಕಾರ ದೇಶದ ಪ್ರಜೆಗಳನ್ನು ಬಹಳ ಹೀನಾಯವಾಗಿ ನೋಡುತ್ತಿದೆ. ಅತಿ ಶ್ರೀಮಂತರು ಹಾಗೂ ಪ್ರಭಾವಿ ವ್ಯಕ್ತಿಗಳಿಗೆ ಸರ್ಕಾರ ಹೆಚ್ಚಿನ ಸೌಲಭ್ಯ ನೀಡುತ್ತಿದೆ. ಬಡವರನ್ನು ಕಡೆಗಣಿಸುತ್ತಿದೆ.

ರೂ.6 ಲಕ್ಷ ಮಕ್ಕಳ ಆಟದ ನಕಲಿ ನೋಟು ನೀಡಿ ಪಂಗನಾಮ..!

• ಉದಯವಾಹಿನಿ ಬೆಂಗಳೂರು

ಬರೋಬ್ಬರಿ ರೂ.6 ಲಕ್ಷ ಮಕ್ಕಳ ಆಟದ ನಕಲಿ ನೋಟು ನೀಡಿ ವಂಚನಕನು ವ್ಯಕ್ತಿಯೋರ್ವನನ್ನು ಯಾಮಾರಿಸಿದ ಘಟನೆ ರಾಜಧಾನಿಯ ಹೈಗ್ರೌಂಡ್ಸ್ ಠಾಣಾ ವ್ಯಪ್ತಿಯಲ್ಲಿ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ.

ಆಂಧ್ರದ ಕಡಪ ಮೂಲದ ಸೈಯದ್ ಸಮೀರ್ ಎಂಬುವವರನ್ನು ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಕಾರು ಚಾಲಕನಾಗಿದ್ದ ಸೈಯದ್ ಖುರ್ಶಿ ಎಂಬಾತ ಪರಿಚಯಮಾಡಿಕೊಂಡು ಮೋಸ ಮಾಡಿ ನಾಪತ್ತೆಯಾಗಿದ್ದಾನೆ. ಸಮೀರ್ 14 ವರ್ಷಗಳಿಂದ ಕುವೈತ್‌ನಲ್ಲಿ ಕಾರು ಚಾಲಕನಾಗಿದ್ದರು. ತನ್ನ ಕುಟುಂಬ ಬೆಂಗಳೂರಿನಲ್ಲಿರುವ ಕಾರಣ ಇಲ್ಲಿಗೆ ಬಂದಿಳಿದಾಗ, ಅಂದು ಏರ್ಪೋರ್ಟ್‌ನಲ್ಲಿ ಖುರ್ಶಿ ಮತ್ತು ಸಮೀರ್ ನಡುವೆ ಪರಿಚಯವಾಗಿತ್ತು.

ಫೋನ್ ನಂಬರ್ ಸಹ ಎಕ್ಸೆಂಜ್ ಮಾಡಿ

ಉದಯವಾಹಿನಿ ಚಿತ್ರ

ಕೊಂಡಿದ್ದರು.

ಅಲ್ಲದೇ ಸಮೀರ್ ತಾನು ಬೆಂಗಳೂರಿನಲ್ಲೇ ಕಾರು ಖರೀದಿಸಿ ಇಲ್ಲೇ ಬಾಡಿಗೆ ಓಡಿಸುವುದಾಗಿ ಖುರ್ಶಿ ಬಳಿ ಹೇಳಿದ್ದನಂತೆ. ಈ ಹಿನ್ನೆಲೆಯಲ್ಲಿ ಕೆಲ ದಿನಗಳ ನಂತರ ಕಾರು ಖರೀದಿ ವಿಚಾರವಾಗಿ ಸಂಪರ್ಕಿಸಿದ್ದ ಖುರ್ಶಿ, ಸಮೀರ್ ಅವರನ್ನು ಕಡಿಮೆ ಬೆಲೆಯಲ್ಲಿ ಕಾರು ಕೊಡಿಸುವುದಾಗಿ ನಂಬಿಸಿದ್ದಾನೆ. ಅದರಂತೆಯೇ ಜ.19ರಂದು ಭೇಟಿಯಾಗಿ ರೂ. 5.40 ಲಕ್ಷ ಬ್ಯಾಂಕ್ ಖಾತೆಗೆ ವರ್ಗಾಯಿಸಿಕೊಂಡಿದ್ದ. ಕಾರು ಈ ದಿನ ಸಿಗಲು

> ಬಂಡಲ್‌ಗಳ ಮೊದಲ ಪದರಿನಲ್ಲಿ ಮೇಲೆ ಪದರಲ್ಲಿ 500 ಮುಖ ಬೆಲೆ ನೋಟುಗಳು ಮಾತ್ರ ಅಸಲಿಯಿಟ್ಟು, ಉಳಿದ್ದದ್ದು ನಕಲಿ ನೋಟುಗಳು ಇಟ್ಟು ಯಾಮಾರಿಸಿದ್ದಾನೆ ಖುರ್ಶಿ ಎಂಬುವುದು ಗೊತ್ತಾಗಿದೆ. ಬಳಿಕ ಕೂಡಲೇ ಸಮೀರ್ ದೂರು ದಾಖಲಿಸಿದ್ದಾರೆ. ಸಮೀರ್ ಪಡೆದ ನೋಟುಗಳು ನಕಲಿ ಎಂದು ಪೊಲೀಸರು ಖಚಿತಪಡಿಸಿದ್ದು, ಆರೋಪಿ ಪತ್ತೆಗೆ ಬಲೆ ಬೀಸಿದ್ದಾರೆ.

ಸಾಧ್ಯವಿಲ್ಲ. ನಾನೇ ಹೋಗಿ ಕಾರು ತರುವೆ. ಅಲ್ಲಿಯವರೆಗೆ ನೀವು ಕೊಟ್ಟ ಹಣದ ಬದಲಿಗೆ ರೂ.6 ಲಕ್ಷ ಹಣ ನಿಮ್ಮಲ್ಲೇ ಇಟ್ಟುಕೊಳ್ಳಿ ಎಂದು ಹಣದ ಬಂಡಲ್ ಅನ್ನು ಖುರ್ಶಿ ನೀಡಿದ್ದಾನೆ.

ಭೀಮ್ ಪ್ರಜಾ ಸಂಘ ಆಯೋಜಿಸಿದ ಸ್ವಾಭಿಮಾನದ ಹೋರಾಟಕ್ಕೆ ಚಾಲನೆ

• ಉದಯವಾಹಿನಿ ಬೆಂಗಳೂರು

ಬೇಡಿಕೆಯನ್ನು ಪೂರೈಸದಿದ್ದಾರೆ ಸರ್ಕಾರದ ವಿರುದ್ಧ ಬೀದರ್ ಟೂ ಬೆಂಗಳೂರು ಚಲೋ ಪದಾಯಾತ್ರಿ ಮೂಲಕ ಉಗ್ರ ಹೋರಾಟ ಮಾಡುವುದಾಗಿ ವೈಟ್ ಫೀಲ್ಡ್ ಮುರುಗೇಶ್ ಎಚ್ಚರಿಕೆ ನೀಡಿದರು.

ಚಲೋ ಪದಾಯಾತ್ರಿ ಮೂಲಕ ಉಗ್ರ ಹೋರಾಟ

ನಗರದ ಫ್ರೀಡಂ ಪಾರ್ಕ್‌ನಲ್ಲಿ ಭೀಮ್ ಪ್ರಜಾ ಸಂಘ ಆಯೋಜಿಸಿದ ಸ್ವಾಭಿಮಾನದ ಹೋರಾಟಕ್ಕೆ ಚಾಲನೆ ನೀಡಿ ಮಾತನಾಡಿದರು. ಸರ್ಕಾರದಲ್ಲೇ 200 ಮೀಟರ್ ಅಂಬೇಡ್ಕರ್ ಅವರ ಶಿಲೆ ಸ್ಥಾಪಿಸಬೇಕು ಮತ್ತು ಸರ್ಕಾರದ ಸತ್ಯ ಮೇವ ಜಯತೆ ಲೋಕದಲ್ಲಿ ಕಡ್ಡಾಯವಾಗಿ ಕನ್ನಡ ಪದ ಬಳಕೆ ಮಾಡಬೇಕೆ

ಮಂಡ್ಯ ಜಿಲ್ಲೆಯ 4.48 ಲಕ್ಷ ಮಹಿಳೆಯರಿಗೆ ಗೃಹಲಕ್ಷ್ಮಿ

ಮಹಿಳೆಯರನ್ನು ಸಬಲೀಕರಣಗೊಳಿಸುವ ಉದ್ದೇಶದಿಂದ ನಮ್ಮ ಸರ್ಕಾರವು 'ಶಕ್ತಿ ಯೋಜನೆ' ಜಾರಿ

• ಉದಯವಾಹಿನಿ, ಮಂಡ್ಯ

ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಉದ್ದೇಶದಿಂದ ನಮ್ಮ ಸರ್ಕಾರವು ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೆ ತಂದಿದ್ದು, ಜಿಲ್ಲೆಯಲ್ಲಿ ಇಲ್ಲಿಯವರೆಗೆ 4,48,525 ಮಹಿಳೆಯರಿಗೆ ತಲಾ 2 ಸಾವಿರದಂತೆ ಒಟ್ಟು ರೂ1308 ಕೋಟಿ ಪಾವತಿಸಲಾಗಿದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು. ಸರ್. ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಮಹಿಳೆಯರನ್ನು ಸಬಲೀಕರಣಗೊಳಿಸುವ ಉದ್ದೇಶದಿಂದ ನಮ್ಮ ಸರ್ಕಾರವು 'ಶಕ್ತಿ ಯೋಜನೆ' ಜಾರಿಗೆ ತಂದಿದ್ದು, ಜಿಲ್ಲೆಯಲ್ಲಿ ಇದುವರೆಗೆ ಒಟ್ಟು 10.83 ಕೋಟಿ ಟಿಕೆಟ್‌ಗಳನ್ನು ಮಹಿಳೆಯರಿಗೆ ಉಚಿತವಾಗಿ ಪ್ರಯಾಣಿಸಲು ನೀಡಿ ಒಟ್ಟು ?274 ಕೋಟಿ ವೆಚ್ಚ ಭರಿಸಲಾಗಿದೆ ಎಂದು ತಿಳಿಸಿದರು.

ಆರ್ಥಿಕ ಸಬಲೀಕರಣ, ಮಹಿಳಾ ಸಬಲೀಕರಣ, ಸಾಮಾಜಿಕ ನ್ಯಾಯ ಮತ್ತು ಸಮಾನತೆಯೊಂದಿಗೆ 5 ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸುವ ಮೂಲಕ ನುಡಿದಂತೆ

ಉದಯವಾಹಿನಿ ಚಿತ್ರ

ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿಕೆ

ನಡೆದಿದ್ದೇವೆ ಎಂಬ ಹೆಗ್ಗಳಿಕೆ ನಮ್ಮ ಸರ್ಕಾರಕ್ಕಿದೆ ಎಂದು ಹೇಳಿದರು. ಸಂವಿಧಾನದ ಆಶಯಗಳಿಗನುಗುಣವಾಗಿ ದೇಶವನ್ನು ಮುನ್ನಡೆಸಿದ. ಭಾರತದ ಹದಿನಾಲ್ಕನೇ ಪ್ರಧಾನಮಂತ್ರಿ ಮನಮೋಹನಸಿಂಗ್ ಹಾಗೂ ರಾಜಕೀಯ ಮುತ್ಸದ್ಧಿ ಎಸ್.ಎಂ. ಕೃಷ್ಣ ಅವರನ್ನು ಈ ಸಂದರ್ಭದಲ್ಲಿ ಗೌರವಪೂರ್ವಕವಾಗಿ ಸ್ಮರಿಸುತ್ತೇನೆ. ಇವರ ನಿಧನ ನಿಜಕ್ಕೂ ದೇಶಕ್ಕೆ ಹಾಗೂ ನಮ್ಮ ರಾಜ್ಯಕ್ಕೆ ತುಂಬಲಾರದ ನಷ್ಟ ಎಂದೇ ಭಾವಿಸುತ್ತೇನೆ ಎಂದರು.

'ಅಭಿವೃದ್ಧಿಗಳೇ ನಮಗೆ ಶ್ರೀರಕ್ಷೆ'

ಮಂಡ್ಯ ಜಿಲ್ಲೆಯಲ್ಲಿ ಆಗಿರುವ ಸಾಧನೆಗಳೇ ಸರ್ಕಾರದ ಯಶಸ್ಸಿನ ಕೈಗನ್ನಡಿ. ಕಣ್ಣಿಗೆ ಕಾಣುವಂಥ ಅಭಿವೃದ್ಧಿಗಳೇ ನಮಗೆ ಶ್ರೀರಕ್ಷೆ. ಅಭಿವೃದ್ಧಿಯೇ ನಮ್ಮ ಮಾತಾಗಬೇಕು ಎಂದು ನಂಬಿದ್ದೇನೆ. ಹೀಗಾಗಿ, ಜಿಲ್ಲೆಯಲ್ಲಿನ ಅಭಿವೃದ್ಧಿ ಚಿತ್ರಗಳು ಮುಂದಿನ ದಿನಗಳಲ್ಲಿ ಯಶಸ್ಸಿನ ಬಿಂದುಗಳಾಗಲಿವೆ ಎಂದು ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು.

ಕನ್ನಡ ಭವನ ನಿರ್ಮಾಣ ಕನ್ನಡ ಭವನ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಮಾಡಿರುವ ಹಿನ್ನೆಲೆಯಲ್ಲಿ ಅದರ ಸವಿ ನೆನಪಿಗಾಗಿ, ಸಮ್ಮೇಳನದಲ್ಲಿ ಉಳಿತಾಯವಾದ ಮೊತ್ತ ಹಾಗೂ ಸರ್ಕಾರದಿಂದ ವಿಶೇಷ ಅನುದಾನವನ್ನು ಪಡೆದು, ಕನ್ನಡ ಭವನ ನಿರ್ಮಾಣ ಮಾಡಬೇಕೆಂದು ತೀರ್ಮಾನಿಸಲಾಗಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದರು. ಶಾಸಕ ಪಿ.ರವಿಕುಮಾರ್, ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ನಗರಸಭೆ ಅಧ್ಯಕ್ಷ ಪ್ರಕಾಶ್, ಮುಡಾ ಅಧ್ಯಕ್ಷ ನಹೀಂ, ಜಿಲ್ಲಾಧಿಕಾರಿ ಕುಮಾರ, ಜಿಲ್ಲಾ ಪಂಚಾಯಿತಿ ಸಿಇಒ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ ಸೇರಿದಂತೆ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

ಮಂಡ್ಯದಲ್ಲಿ ನೂತನ ಸಮಗ್ರ ಕೃಷಿ ವಿಶ್ವವಿದ್ಯಾಲಯ ಸ್ಥಾಪಿಸಬೇಕೆನ್ನುವ ಬಹುದಿನಗಳ ಕನಸು ನನಸಾಗುವ ಹಂತ ತಲುಪಿದೆ. ಈ ನಿಟ್ಟಿನಲ್ಲಿ ಮಂಡ್ಯದಲ್ಲಿ ನೂತನ ಸಮಗ್ರ ಕೃಷಿ ವಿಶ್ವವಿದ್ಯಾಲಯ ಸ್ಥಾಪನೆಗೆ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ ಎಂದರು. ಪ್ರಸಕ್ತ ಸಾಲಿನಲ್ಲಿ ಮಣ್ಣು ಆರೋಗ್ಯ ಅಭಿಯಾನದಡಿ 15,000 ಮಣ್ಣು ಮಾದರಿಗಳನ್ನು ಸಂಗ್ರಹಿಸಿ, ವಿಶ್ಲೇಷಣೆ ಮಾಡಿ ಮಣ್ಣು ಆರೋಗ್ಯ ಕಾರ್ಡಗಳನ್ನು ರೈತರಿಗೆ ವಿತರಿಸಲು ಕ್ರಮವಹಿಸಲಾಗಿದ್ದು, ಜಿಲ್ಲೆಯು ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನದಲ್ಲಿದೆ ಎಂದರು.

ಭಾರತದ ಸಂವಿಧಾನ ವಿಶ್ವದಲ್ಲೇ ಶ್ರೇಷ್ಠವಾದುದು: ರಾಮಲಿಂಗಾ ರೆಡ್ಡಿ

• ಉದಯವಾಹಿನಿ ರಾಮನಗರ

ಜಿಲ್ಲಾಡಳಿತದಿಂದ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ 76ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಸಾರಿಗೆ, ಮುಜರಾಯಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ನಂತರ ಪೊಲೀಸರು, ಗೃಹರಕ್ಷಕ ದಳ ಹಾಗೂ ವಿದ್ಯಾರ್ಥಿ ಕೆಡೆಟ್ ಗಳಿಂದ ಗೌರವ ವಂದನೆ ಸ್ವೀಕರಿಸಿ, ಸಂದೇಶ ನೀಡಿದರು.

ಬಳಿಕ ಮಾತನಾಡಿದ ಅವರು, 1947ರ ಆಗಸ್ಟ್ 15 ರಂದು ದೇಶವು ಸ್ವಾತಂತ್ರ್ಯ ಪಡೆದುಕೊಳ್ಳುವ ಮೂಲಕ ದಾಸ್ಯದ ಸಂಕೋಲೆಯನ್ನು ಕಳಚಿಕೊಂಡಿತು. ಬಳಿಕ, 1950 ಜನವರಿ 26 ಭಾರತೀಯರಿಗೆ ಮಹತ್ವದ ದಿನ. ಅಂದು ಈ ದೇಶದ ರಾಷ್ಟ್ರೀಯ ಗ್ರಂಥ ಹಾಗೂ ಪ್ರಜಾಪ್ರಭುತ್ವದ ಆತ್ಮವಾದ ಸಂವಿಧಾನದ ಜಾರಿಯಾದ ದಿನವಾಗಿದೆ ಎಂದರು. ದೇಶದ ಇತಿಹಾಸವನ್ನು ಅವಲೋಕಿಸಿದಾಗ ಸಾಂಸ್ಕೃತಿಕವಾಗಿ ನಮ್ಮ ದೇಶವನ್ನು ಒಂದುಗೂಡಿಸಿದ್ದು ಮಹಾಕಾವ್ಯಗಳಾದ ರಾಮಾಯಣ ಮತ್ತು ಮಹಾಭಾರತ, ರಾಮಾಯಣವು ಉತ್ತರದ

ಉದಯವಾಹಿನಿ ಚಿತ್ರ

ಆಯೋಧ್ಯದಿಂದ ದಕ್ಷಿಣದ ಶ್ರೀಲಂಕದವರೆಗೂ ಮಹಾಭಾರತವು ಈಗಿನ ಅಫ್ಘಾನಿಸ್ಥಾನದಿಂದ ಹಸ್ತಿನಾಪುರ ಅಂದರೆ ದೆಹಲಿ ಮೂಲಕ ಉತ್ತರ-ಪೂರ್ವದ ಮಣಿಪುರದವರವಿಗೂ ಬೆಸೆದಿರುವುದು ಕಂಡು ಬರುತ್ತದೆ ಎಂದು ಹೇಳಿದರು.

ಸ್ವಾತಂತ್ರ್ಯ ಬಂದಾಗ ಭಾರತ ದೇಶವು 562ಕ್ಕೂ ಹೆಚ್ಚಿನ ಸಂಸ್ಥಾನಗಳಾಗಿ ಹರಿದು ಹಂಚಿ ಹೋಗಿತ್ತು ದೇಶವನ್ನು ಒಂದುಗೂಡಿಸಿ ಏಕತೆ ಮತ್ತು ಅಖಂಡತೆಯನ್ನು ಸ್ಥಾಪಿಸುವಲ್ಲಿ ಮಹಾತ್ಮ ಗಾಂಧಿ ನಿರ್ಣಾಯಕ ಪಾತ್ರ ವಹಿಸಿದರು. ಸುಮಾರು 33 ವರ್ಷ 1915 ರಿಂದ 1948ರವರೆಗೆ ದೇಶದ ಉದ್ದ-ಅಗಲಕ್ಕೂ ಓಡಾಡಿದರು. ಅಹಿಂಸೆ ಮೂಲಕ ಹೋರಾಟ ಮಾಡಿ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟರು ಎಂದರು. ಸ್ವಾತಂತ್ರ ಬಂದಾಗ ಶೇ 12ರಷ್ಟಿದ್ದ ಶಿಕ್ಷಣ ಈಗ ಶೇ 80ಕ್ಕೆ ಏರಿಕೆಯಾಗಿದೆ. ಅದಕ್ಕೆ ನಮ್ಮ ಸಂವಿಧಾನ ಕಾರಣ. ಅದರ ಆಶಯದಂತೆ ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ತತ್ವದಡಿ ಸಮ ಸಮಾಜ ನಿರ್ಮಾಣದ ದಾರಿಗಳನ್ನು ಬಲಪಡಿಸಲು ನಾವೆಲ್ಲರೂ ಕಟಿಬದ್ಧರಾಗಬೇಕು ಎಂದು ಹೇಳಿದರು.

ನಂತರ ಡಾ. ಬಿ.ಆರ್. ಅಂಬೇಡ್ಕರ್ ಅವರ ಅಧ್ಯಕ್ಷತೆಯ ಸಂವಿಧಾನ ರಚನಾ ಸಮಿತಿಯ 2 ವರ್ಷ 11 ತಿಂಗಳು 18 ದಿನ ಶ್ರಮ ವಹಿಸಿ ವಿಶ್ವ ಶ್ರೇಷ್ಠ ಸಂವಿಧಾನವನ್ನು ರಚಿಸಿತು. 1949ರ ನ. 26ರಂದು ಸಂಸತ್ತಿನಲ್ಲಿ , 1950 2. 2600 . 144 ಜನಸಂಖ್ಯೆಯ ಅತಿದೊಡ್ಡ ಪ್ರಜಾಪ್ರಭುತ್ವ ದೇಶ ನಮ್ಮದು. ಈ ಪ್ರಜಾಪ್ರಭುತ್ವವನ್ನು ಕಾಪಾಡಿಕೊಂಡು ಬರಲು ನಮ್ಮ ಸಂವಿಧಾನವೇ ಕಾರಣ ಎಂದು ತಿಳಿಸಿದರು.

ತೋಮಿಯರ್ ಪಾಳ್ಯ ಹಾಲು ಉತ್ಪಾದಕರ ಸಹಕಾರ ಸಂಘದ

• ಉದಯವಾಹಿನಿ ಹನೂರು

ತಾಲ್ಲೂಕಿನ ತೋಮಿಯರ್ ಪಾಳ್ಯ ಹಾಲು ಉತ್ಪಾದಕರ ಸಹಕಾರ ಸಂಘದ 5 ವರ್ಷಗಳ ನಿರ್ದೇಶಕರುಗಳ ಸ್ಥಾನಕ್ಕೆ ಚುನಾವಣೆ ನಡೆಯಿತು. ನೂತನ ನಿರ್ದೇಶಕರುಗಳಾಗಿ ಚಾರ್ಲಸ್ ಸಗಾಯರಾಜ್, ಪತ್ತಿನಾಥನ್, ಮುದಲೈ ಮುತ್ತು, ಸಗಾಯರಾಜ್, ನಾಚಿಮುತ್ತು, ವೃಗುಲಾ ಮೇರಿ, ಪಾಸ್ಕಾಮೇರಿ, ವೇಲು ಮುರುಗನ್, ಜ್ಞಾನಪ್ರಕಾಶಂ, ಶ್ರೀನಿವಾಸ ಪ್ರತಿಸ್ಪರ್ಧಿ ತಂಡದ ವಿರುದ್ಧ ಜಯ ಸಾಧಿಸಿದರು.

ವಿಜೇತರ ಸಂಭ್ರಮ: ಚುನಾವಣೆ ಫಲಿತಾಂಶದ ಬಳಿಕ ವಿಜೇತರು ಹಾಗೂ ಬೆಂಬಲಿಗರು ಪಟಾಕಿ ಹೊಡೆದು, ಹೂವಿನ ಹಾರ ಹಾಕಿ ಸಂಭ್ರಮಿಸಿದರು. ಚುನಾವಣೆ ಅಧಿಕಾರಿಯಾಗಿ ನಾಗೇಶ್ ಕರ್ತವ್ಯ ನಿರ್ವಹಿಸಿದರು. ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಹನೂರು ಪೊಲೀಸ್ ಠಾಣೆಯ ಸಬ್ ಇನ್‌ಸ್ಪೆಕ್ಟರ್ ಮಂಜುನಾಥ್ ಪ್ರಸಾದ್ ನೇತೃತ್ವದಲ್ಲಿ ಡಿ. ಆರ್. ವಾಹನದ ಪೊಲೀಸ್ ತಂಡ ಬಿಗಿ ಬಂದು ಬಸ್ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು.

ಉದಯವಾಹಿನಿ ಚಿತ್ರ

ನಿರ್ದೇಶಕರುಗಳ ಸ್ಥಾನಕ್ಕೆ ಚುನಾವಣೆ

ವಿಜೇತರನ್ನು ಮುಖಂಡರುಗಳಾದ ಸೋಸಿಯಪ್ಪನ್, ಮಣಿಗಾರ್ ಪ್ರಸಾದ್, ಸೆಲ್ವಮುತ್ತು, ರಾಮಸ್ವಾಮಿ, ರಾಜೇಂದ್ರ, ಮಾದುಸ್ವಾಮಿ, ಅಶೋಕ್, ಅರುಣ್, ಅಪ್ಪನ್ ನಾಗರಾಜು, ತೋಮಿಯರ್ ಪಾಳ್ಯ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ಶೇಶುಬಾಲನ್ ಅಭಿನಂದಿಸಿದರು.

ವಿಶಿಷ್ಟ ಕಾರ್ಯಕ್ರಮಗಳೊಂದಿಗೆ ಅರ್ಥಪೂರ್ಣವಾಗಿ ನಡೆದ ರಾಷ್ಟ್ರೀಯ ಮತದಾರರ ದಿನಾಚರಣೆ

• ಉದಯವಾಹಿನಿ ಚಾಮರಾಜನಗರ

ಮತದಾತರಿಗೆ ವ್ಯವಸ್ಥಿತ ಜಾಗೃತಿ, ಸುಭ್ರದ್ರ ಪ್ರಜಾಪ್ರಭುತ್ವ ದೇಶ ನಿರ್ಮಾಣ ಹಾಗೂ ಮತದಾರತರ ಪಟ್ಟಿಗೆ ಗರಿಷ್ಠ ದಾಖಲಾತಿ ಆಶಯದೊಂದಿಗೆ 'ರಾಷ್ಟ್ರೀಯ ಮತದಾರರ ದಿನಾಚರಣೆ'ಯನ್ನು ನಗರದಲ್ಲಿಂದು ಹಲವು ವಿಶಿಷ್ಟ ಕಾರ್ಯಕ್ರಮಗಳೊಂದಿಗೆ ಬಹಳ ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮತದಾರರ ದಿನ ಆಚರಣೆ ಕಾರ್ಯಕ್ರಮದಲ್ಲಿ ಗಣ್ಯರು, ಅಧಿಕಾರಿಗಳು ಮತ್ತು ವಿವಿಧ ಶಾಲಾ-ಕಾಲೇಜು

ಉದಯವಾಹಿನಿ ಚಿತ್ರ

ವಿದ್ಯಾರ್ಥಿಗಳು ಮಾನವ ಸರಪಳಿ ರಚಿಸಿ, ಕೇಸರಿ ಬಿಳಿ ಹಸಿರು ಬಣ್ಣದ ಬಲೂನ್‌ಗಳನ್ನು ಆಕಾಶಕ್ಕೆ ಹಾರಿಬಿಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ದೊರೆಯಿತು.

ಜಿಲ್ಲಾ ಪ್ರಧಾನ ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ, ಜಿಲ್ಲಾಧಿಕಾರಿ ಶಿಲ್ಪಾ ನಾಗ್. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಹಾಗೂ ಇತರೆ ಗಣ್ಯರು ಹಾಜರಿದ್ದ ಕಾರ್ಯಕ್ರಮದಲ್ಲಿ ನಗರದ ಸರ್ಕಾರಿ ಶಾಲೆಯ 3ನೇ ತರಗತಿ ವಿದ್ಯಾರ್ಥಿನಿ ನುಸಾಫಾತೀಮಾ ಖಾನ್ ಅವರು ಅಚ್ಚುಕಟ್ಟಾಗಿ ಸಂವಿಧಾನದ ಪ್ರತಿಜ್ಞಾವಿಧಿ ಬೋಧಿಸಿದ್ದು ವಿಶೇಷವಾಗಿತ್ತು.

ಬಳಿಕ ಜಿಲ್ಲಾ ಪ್ರಧಾನ ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್. ಭಾರತಿ ಅವರು ಮತದಾನ ನಮ್ಮ ಹಕ್ಕು, ಮತದಾನ ಬಿಟ್ಟರೆ ಇನ್ನೊಂದಿಲ್ಲ, ನೈತಿಕ ಮತದಾನ ಮಾಡಿ, ಮತದಾನ ಮಾಡಿ ಉತ್ತಮ ವ್ಯಕ್ತಿಯನ್ನು ಆಯ್ಕೆ ಮಾಡಿ ಸೇರಿದಂತೆ ಮತದಾನದ ಅರಿವು ಮೂಡಿಸುವ ಇತರೆ ವಿವಿಧ ಬಣ್ಣದ ಸ್ಟಿಕ್ಕರಗಳನ್ನು ವೃಕ್ಷಕ್ಕೆ ಅಳವಡಿಸಿ ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಪ್ರಧಾನ ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ಮತದಾನದ ಮಹತ್ವ ಕುರಿತು ಪ್ರತಿಯೊಬ್ಬರಿಗೂ ಅರಿವು ಮೂಡಿಸಲು ಕಾರ್ಯಕ್ರಮ ಉತ್ತಮ ವೇದಿಕೆಯಾಗಲಿದೆ. ಸದೃಢ ದೇಶ ನಿರ್ಮಾಣಕ್ಕೂ ಇದು ನೆರವಾಗಬೇಕು. ಪ್ರಜಾಪ್ರಭುತ್ವದ ಸುಭದ್ರತೆಗಾಗಿ ಉತ್ತಮ ವ್ಯಕ್ತಿಯನ್ನು ಆಯ್ಕೆ ಮಾಡಲು ಮತದಾರರು ಮುಂದಾಗಬೇಕು. ನೈತಿಕ ಮತದಾನವನ್ನು ಪ್ರೋತ್ಸಾಹಿಸಬೇಕು ಎಂದರು.

ಎನ್‌ಪಿಎಸ್ ವಿರೋಧಿಸಿ ಅಂಚೆ ಪತ್ರ ಚಳವಳಿ

• ಉದಯವಾಹಿನಿ ಶ್ರೀರಂಗಪಟ್ಟಣ

ಹೊಸ ಪಿಂಚಣಿ ಯೋಜನೆ (ಎನ್‌ಪಿಎಸ್) ವಿರೋಧಿಸಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಪಟ್ಟಣದ ಪ್ರಧಾನ ಅಂಚೆ ಕಚೇರಿ ಬಳಿ ಶುಕ್ರವಾರ ಅಂಚೆ ಪತ್ರ ಚಳವಳಿ ನಡೆಸಿದರು. ಮುಖ್ಯಮಂತ್ರಿಗೆ ಅಂಚೆ ಪತ್ರಗಳನ್ನು ಕಳುಹಿಸಿದರು. 'ಹೊಸ ಪಿಂಚಣಿ ಯೋಜನೆ ಅಸಮಂಜಸವಾಗಿದೆ.

ಉದಯವಾಹಿನಿ ಚಿತ್ರ

ಈ ಹಿಂದೆ ಇದ್ದ ಪಿಂಚಣಿ ಯೋಜನೆಯನ್ನೇ (ಒಪಿಎಸ್) ಮುಂದುವರಿಸಬೇಕು. ಈ ಬೇಡಿಕೆಗಾಗಿ ಸಾಂಕೇತಿಕವಾಗಿ ಪತ್ರ ಚಳವಳಿ ನಡೆಸುತ್ತಿದ್ದೇವೆ. ನಮ್ಮ ಬೇಡಿಕೆ ಈಡೇರದಿದ್ದರೆ ತೀವ್ರ ಸ್ವರೂಪದ ಚಳವಳಿ ರೂಪಿಸಲಾಗುವುದು' ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ಎನ್. ಲೋಕೇಶ್ ಎಚ್ಚರಿಸಿದರು. ವಿದ್ಯಾ ಇಲಾಖಾ ನೌಕರರ ಸಹಕಾರ ಸಂಘದ ಅಧ್ಯಕ್ಷ ಟಿ.ಪಿ. ಕುಮಾರ್ ಮಾತನಾಡಿ, 'ಹೊಸ ಪಿಂಚಣಿ ಯೋಜನೆಗೆ ಪರಿಶೀಲನೆ ಹಂತದಲ್ಲೇ ವಿರೋಧ ವ್ಯಕ್ತಪಡಿಸಲಾಗಿತ್ತು. ಆದರೂ ಅದನ್ನು ಜಾರಿ ಮಾಡುವ ಪ್ರಯತ್ನ ನಡೆಯುತ್ತಿದೆ. ಶಿಕ್ಷಕರ ಹಿತಕ್ಕೆ ವಿರುದ್ಧವಾಗಿರುವ ಈ ಯೋಜನೆಯನ್ನು ಒಪ್ಪಲು ಸಾಧ್ಯವೇ ಇಲ್ಲ' ಎಂದರು.

ಛಲ ಬಿಡದೆ ಸಾಧಿಸಿ ತೋರಿಸಿ: ಎನ್.ಆರ್.ನಾರಾಯಣಮೂರ್ತಿ

• ಉದಯವಾಹಿನಿ ತುಮಕೂರು

'ಜೀವನದಲ್ಲಿ ಛಲ ಬಿಡದೆ ಏನನ್ನಾದರೂ ಸಾಧಿಸಿ ತೋರಿಸಬೇಕು. ಇಲ್ಲವಾದರೆ ನಿಮಗೂ, ಪ್ರಾಣಿಗಳಿಗೂ ಯಾವುದೇ ವ್ಯತ್ಯಾಸ ಇರುವುದಿಲ್ಲ' ಎಂದು ಇನ್ಫೋಸಿಸ್ ಸಹ ಸಂಸ್ಥಾಪಕ ಎನ್.ಆರ್.ನಾರಾಯಣಮೂರ್ತಿ ಯುವ ಸಮೂಹಕ್ಕೆ ಸಲಹೆ ನೀಡಿದರು.

ತುಮಕೂರು ವಿಶ್ವವಿದ್ಯಾಲಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ಪ್ರೇರಣಾ ಉಪನ್ಯಾಸ ಮಾಲಿಕೆ' ಕಾರ್ಯಕ್ರಮದಲ್ಲಿ ಮಾತನಾಡಿದರು. ಎಲ್ಲ ರೀತಿಯ ಅವಕಾಶಗಳು ಸಿಗುತ್ತಿವೆ. ಶಿಕ್ಷಣ ಸೇರಿದಂತೆ ಸಾಧನೆಗೆ ಅಗತ್ಯ ಮಾರ್ಗಗಳು ತೆರೆದುಕೊಂಡಿವೆ. ಸಿಕ್ಕ ಅವಕಾಶಗಳನ್ನು ಬಳಸಿಕೊಂಡು ದೇಶವನ್ನು ಉನ್ನತ ಸ್ಥಾನಕ್ಕೆ ತೆಗೆದುಕೊಂಡು ಹೋಗುವ ಪ್ರಯತ್ನ ಮಾಡಬೇಕು. ಆದರೆ ಸಾಕಷ್ಟು ಮಂದಿ ಸಿಕ್ಕ ಅವಕಾಶಗಳನ್ನು ಸಮರ್ಥವಾಗಿ ಬಳಸಿಕೊಳ್ಳದಿರುವುದು ದುರದೃಷ್ಟಕರ ಎಂದು ವಿಷಾದಿಸಿದರು.

ಸ್ವಾತಂತ್ರ ಬಂದ ಏಳು ದಶಕಗಳಲ್ಲಿ ಭಾರತ ಸಾಕಷ್ಟು ಸಾಧನೆ ಮಾಡಿದೆ ಎಂಬ ಹಮ್ಮೆ ಇದೆ. ಹಲವು ಸಮಸ್ಯೆಗಳನ್ನು ಎದುರಿಸಿ

ಉದಯವಾಹಿನಿ ಚಿತ್ರ

ದೇಶ ಮುನ್ನಡೆದಿದೆ. ಶಿಕ್ಷಣ, ಆರೋಗ್ಯ, ವಸತಿ ಸೇರಿದಂತೆ ಹಲವು ಸೌಲಭ್ಯಗಳು ಸಿಕ್ಕಿವೆ. ಜೀವನ ಮಟ್ಟ ಸುಧಾರಿಸಿದೆ. ಆದರೆ ಇನ್ನೂ ದೇಶದಲ್ಲಿ ಶೇ 60ರಷ್ಟು ಜನರಿಗೆ ಉಚಿತವಾಗಿ ಪಡಿತರ ನೀಡಲಾಗುತ್ತಿದೆ. ಉಚಿತವಾಗಿ ಬಸ್ ಪ್ರಯಾಣ ವ್ಯವಸ್ಥೆ ಕಲ್ಪಿಸಲಾಗಿದೆ. ಉಚಿತವಾಗಿ ಸೌಲಭ್ಯ, ಕೊಡುವುದನ್ನು ಟೀಕಿಸುತ್ತಿಲ್ಲ. ಇಷ್ಟು ವರ್ಷಗಳ ಸುಧೀರ್ಘ ಅವಧಿಯಲ್ಲಿ ಏನು ಸಾಧನೆ ಮಾಡಿದ್ದೇವೆ ಎಂಬ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ ಎಂದು ಹೇಳಿದರು. ಸಮಸ್ಯೆಗಳನ್ನು ಮೆಟ್ಟಿನಿಂತು, ಎದುರುಗೊಳ್ಳುವ ಸವಾಲು ಯುವ ಸಮುದಾಯದ ಮೇಲಿದೆ. ಕಠಿಣ ಪರಿಶ್ರಮ, ಉನ್ನತ ಧ್ಯೆಯೋದ್ದೇಶ, ಶಿಸ್ತು, ಬದ್ಧತೆಯಿಂದ

ಅಂತರಾಳದಿಂದ... EDITORIAL

ಮುಡಾ ಹಗರಣ: ಇಲಿ ಹಿಡಿಯಲೆಂದೇ ಗುಡ್ಡ ಅಗೆಯಲಾಯಿತೆ?

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಲೋಕಾಯುಕ್ತರಿಂದ ಕ್ಲೀನ್ ಚಿಟ್ ಸಿಕ್ಕಿರುವ ಬಗ್ಗೆ ವದಂತಿಗಳು ಹರಡಿವೆ. ಪ್ರಕರಣದಲ್ಲಿ ಮುಡಾ ಅಧಿಕಾರಿಗಳನ್ನೇ ಆರೋಪಿ ಸ್ಥಾನದಲ್ಲಿ ನಿಲ್ಲಿಸಲಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಂಚಿಕೆ ಸಂದರ್ಭದಲ್ಲಿ ಪ್ರಭಾವ ಬೀರಿದ್ದಾರೆ ಎನ್ನುವುದನ್ನು ಲೋಕಾಯುಕ್ತ ವರದಿ ಎತ್ತಿ ಹಿಡಿದಿಲ್ಲ ಎನ್ನಲಾಗುತ್ತಿದೆ. ಈ ವದಂತಿ ಹೊರ ಬೀಳುತ್ತಿದ್ದಂತೆಯೇ ಇದರ ವಿರುದ್ಧ ಬಿಜೆಪಿಯ ನಾಯಕರು ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸುತ್ತಿದ್ದಾರೆ. ಲೋಕಾಯುಕ್ತವನ್ನು ಬಳಸಿ ಮುಡಾ ಪ್ರಕರಣವನ್ನು ಮುಚ್ಚಿ ಹಾಕಲು ಪ್ರಯತ್ನಿಸಲಾಗುತ್ತಿದೆ ಎಂದು ಅವರು ಆರೋಪಿಸುತ್ತಿದ್ದಾರೆ. ಆದರೆ ವರದಿ ಇನ್ನೂ ನ್ಯಾಯಾಲಯಕ್ಕೆ ಸಲ್ಲಿಕೆಯಾಗಿಲ್ಲ, ಅದಕ್ಕೂ ಮೊದಲು ಮಾಧ್ಯಮಗಳಿಗೆ ಹೇಗೆ ಸೋರಿಕೆಯಾಯಿತು ಮತ್ತು ಅದರ ಆಧಾರದಲ್ಲೇ ಬಿಜೆಪಿ ನಾಯಕರು ಮತ್ತೆ ಬೀದಿ ರಂಪ ಶುರು ಹಚ್ಚಿರುವುದು ಎಷ್ಟು ಸರಿ ಎನ್ನುವ ಪ್ರಶ್ನೆ ಎದ್ದಿದೆ. ಮುಡಾ ಹಗರಣದ ತನಿಖೆ ಯಾವ ಹಾದಿಯಲ್ಲಿ ಸಾಗಿ, ಎಲ್ಲಿ ಮುಕ್ತಾಯಗೊಳ್ಳುತ್ತದೆ ಎನ್ನುವುದು ಯಾರೂ ಊಹಿಸಬಹುದಾಗಿತ್ತು. ಮುಡಾ ಹಗರಣಕ್ಕೆ ಸಂಬಂಧಿಸಿ ಸಿದ್ದರಾಮಯ್ಯ ವಿರುದ್ಧ ಪ್ರತಿಭಟನೆ ನಡೆಸುತ್ತಿರುವುದನ್ನು ಸ್ವತಃ ಬಿಜೆಪಿಯೊಳಗಿರುವ ಒಂದು ಗುಂಪು ವಿರೋಧಿಸಿತ್ತು. ಆರೋಪವು ಆಂದೋಲನ ರೂಪಿಸುವಷ್ಟು ಗಂಭೀರವಾದುದಲ್ಲ ಎನ್ನುವುದು ಅವರ ಅಭಿಪ್ರಾಯವಾಗಿತ್ತು. ಪಡೆದ ನಿವೇಶನವನ್ನು ಸಿದ್ದರಾಮಯ್ಯ ಕುಟುಂಬ ಮರಳಿಸಿದ ಬಳಿಕ, ಹಗರಣದಲ್ಲಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸುವ ಒತ್ತಾಯಕ್ಕೆ ಅರ್ಥವೂ ಇರಲಿಲ್ಲ, ಸಿದ್ದರಾಮಯ್ಯ ಸರಕಾರದ ವಿರುದ್ಧ ಆಂದೋಲನ ರೂಪಿಸಲು ವಿರೋಧ ಪಕ್ಷಗಳ ಕೈಯಲ್ಲಿ ಬೇರೆ ಅಸ್ತ್ರಗಳು ಇಲ್ಲದೇ ಇರುವುದರಿಂದ, ಈ ಮುಡಾ ಎನ್ನುವ ಮೊಂಡು ಕತ್ತಿಯನ್ನು ಕೆಳಗಿಡುವ ಸ್ಥಿತಿಯಲ್ಲಿ ಬಿಜೆಪಿ ನಾಯಕರೂ ಇದ್ದಿರಲಿಲ್ಲ, ಈ ಹಿಂದೆ ಸಂತೋಷ್ ಹೆಗ್ಡೆ ನೇತೃತ್ವದಲ್ಲಿ ಹೊರ ಬಿದ್ದ ಗಣಿ ಭ್ರಷ್ಟಾಚಾರ ವರದಿ ಅಂತಿಮವಾಗಿ ಯಡಿಯೂರಪ್ಪ ಅವರ ರಾಜೀನಾಮೆಯೊಂದಿಗೆ ಮುಕ್ತಾಯಗೊಂಡಿತ್ತು. ಅಷ್ಟೇ ಗಂಭೀರವಾದ ಪ್ರಕರಣ ಇದು ಆಗಿದ್ದಿದ್ದರೆ, ಬಿಜೆಪಿ ಇಷ್ಟೆಲ್ಲ ಒದ್ದಾಟ ನಡೆಸುವ ಅಗತ್ಯ ಇದ್ದಿರಲಿಲ್ಲ. ಮುಖ್ಯವಾಗಿ ನಿವೇಶನ ಹಂಚಿಕೆಯ ಸಂದರ್ಭದಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿರಲಿಲ್ಲ ಎನ್ನುವುದು ಸ್ವತಃ ಬಿಜೆಪಿ ನಾಯಕರಿಗೂ ಗೊತ್ತಿರುವ ವಿಷಯ. ಬಿಜೆಪಿ ಸರಕಾರ ಅಸ್ತಿತ್ವದಲ್ಲಿದ್ದಾಗ ಈ ಹಗರಣ ನಡೆದಿದೆ. ಕಾನೂನು ಉಲ್ಲಂಘಿಸಿ ನಿವೇಶನಗಳನ್ನು ನೀಡಲಾಗಿದೆಯಾದರೆ, ಅದರಲ್ಲಿ ಅಧಿಕಾರಿಗಳ ಪಾತ್ರ ಪ್ರಮುಖವಾದದ್ದು ಮತ್ತು ಈ ಸಂದರ್ಭದಲ್ಲಿ ಕೇವಲ ಸಿದ್ದರಾಮಯ್ಯ ಕುಟುಂಬ ಮಾತ್ರ ನಿವೇಶನವನ್ನು ಪಡೆದಿರಲಿಲ್ಲ. ಲೋಕಾಯುಕ್ತ ವರದಿ ಸಲ್ಲಿಕೆಯಾದ ಬಳಿಕವಷ್ಟೇ ಈ ಅಕ್ರಮಗಳಲ್ಲಿ ಪಾಲುಗೊಂಡ ಇನ್ನಿತರರ ಹೆಸರುಗಳು ಬಹಿರಂಗವಾಗುವ ಸಾಧ್ಯತೆಗಳಿವೆ. ಲೋಕಾಯುಕ್ತ ವರದಿ ನ್ಯಾಯಾಲಯಕ್ಕೆ ಸಲ್ಲಿಕೆಯಾಗುವ ಮೊದಲೇ ಮುಡಾ ಪ್ರಕರಣವನ್ನು ಮುಚ್ಚಿ ಹಾಕಲು ಪ್ರಯತ್ನಿಸಲಾಗಿದೆ ಎನ್ನುವ ಬಿಜೆಪಿ ಆರೋಪ ಸಮರ್ಥನೀಯವಲ್ಲ. ''ಸಿಬಿಐ ತನಿಖೆಯಾಗಬೇಕು ಎಂದು ಬಿಜೆಪಿ ನಾಯಕರು ಒತ್ತಾಯಿಸುತ್ತಿದ್ದಾರೆ. ಸಿಬಿಐ ಕೇಂದ್ರ ಸರಕಾರದ ಹಿಡಿತದಲ್ಲಿರುವುದು ಮತ್ತು ಈ ತನಿಖಾ ಸಂಸ್ಥೆಯನ್ನು ತನ್ನ ರಾಜಕೀಯ ಸೇಡಿಗಾಗಿ ಕೇಂದ್ರ ಸರಕಾರ ಬಳಸಿಕೊಳ್ಳುತ್ತಿರುವುದು ಈಗಾಗಲೇ ಚರ್ಚೆಯಲ್ಲಿರುವಾಗ, ಸಿಬಿಐಯಿಂದ ಪಾರದರ್ಶಕ ತನಿಖೆ ನಡೆಯುತ್ತದೆ ಎನ್ನುವುದನ್ನು ಕಾಂಗ್ರೇಸ್ ಪಕ್ಷ ಯಾಕೆ ಒಪ್ಪಿಕೊಳ್ಳಬೇಕು? 2013-2018ರ ಅವಧಿಯಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಸಿದ್ದರಾಮಯ್ಯ ಅವರು ಅಧಿಕಾರ ದುರ್ಬಳಕೆ ಮಾಡಿಕೊಂಡು 1.30 ಕೋಟಿ ರೂ. ಕಿಕ್‌ಬ್ಯಾಕ್ ಪಡೆದು ಓರ್ವರನ್ನು ನಾಮನಿರ್ದೇಶನ ಮಾಡಿದ್ದಾರೆ ಎಂದು ಬಿಜೆಪಿ ಮುಖಂಡನೊಬ್ಬ ಆರೋಪಿಸಿ ದೂರು ಸಲ್ಲಿಸಿದ್ದರು. ಇದನ್ನು ಕೂಡ ಲೋಕಾಯುಕ್ತ ಪೊಲೀಸರು ತನಿಖೆ ನಡೆಸಿ, ಅವರಿಗೆ ಕ್ಲೀನ್ ಚಿಟ್ ನೀಡಿದ್ದಾರೆ. ಲೋಕಾಯುಕ್ತ ಪೊಲೀಸರು ಸಲ್ಲಿಸಿರುವ ಬಿ ರಿಪೋರ್ಟ್‌ನ್ನು ಜನಪ್ರತಿನಿಧಿಗಳ ನ್ಯಾಯಾಲಯ ಅಂಗೀಕರಿಸಿದೆ. ಬಿಜೆಪಿ ಬೇಕಾದರೆ, ಈ ವರದಿಯನ್ನೂ ಅಲ್ಲಗಳೆಯಬಹುದು. ಅಷ್ಟೇ ಏಕೆ, ತಮ್ಮ ಮೂಗಿನ ನೇರಕ್ಕೆ ಹೊರ ಬೀಳದೆ ಇರುವ ಯಾವುದೇ ವರದಿಗಳನ್ನು ಬಿಜೆಪಿ ಒಪ್ಪಿಕೊಳ್ಳುವ ಸಾಧ್ಯತೆಗಳು ಕಡಿಮೆ. ಕನಿಷ್ಠ ಹಗರಣದ ಗಂಭೀರತೆಯನ್ನು ನಾಡಿನ ಜನತೆಗಾದರೂ ಮನವರಿಕೆ ಮಾಡಲು ಬಿಜೆಪಿ ಯಶಸ್ವಿಯಾಗಿದೆಯೆ ಎಂದರೆ ಅದೂ ಇಲ್ಲ. ವಿರೋಧ ಪಕ್ಷಗಳು ಇರುವುದು ಆಡಳಿತ ಪಕ್ಷದ ತಪ್ಪುಗಳನ್ನು ಗುರುತಿಸಿ ಅವುಗಳನ್ನು ಜನತೆಯ ಮುಂದೆ ಇಡುವುದಕ್ಕೆ ಎನ್ನುವುದರ ಬಗ್ಗೆ ಎರಡು ಮಾತಿಲ್ಲ. ಆದರೆ, ಒಬ್ಬ ಮುಖ್ಯಮಂತ್ರಿಯ ಬಗ್ಗೆ ಆರೋಪಗಳನ್ನು ಮಾಡಿ, ಅವರನ್ನು ರಾಜೀನಾಮೆಗೆ ಒತ್ತಾಯಿಸುವ ಸಂದರ್ಭದಲ್ಲಿ ಅದಕ್ಕೆ ಸಂಬಂಧಿಸಿದ ಅರ್ಹ ದಾಖಲೆಗಳು ವಿರೋಧ ಪಕ್ಷದ ಬಳಿ ಇರಬೇಕಾಗಿತ್ತು. ತನ್ನ ಆರೋಪಗಳನ್ನು ನಿರಾಕರಿಸುವ ದಾಖಲೆಗಳನ್ನು ಸಿದ್ದರಾಮಯ್ಯ ಅವರು ಎರಡೆರಡು ಬಾರಿ ಪತ್ರಿಕಾಗೋಷ್ಠಿ ನಡೆಸಿ ಜನರ ಮುಂದಿಟ್ಟಿದ್ದಾರೆ. ಅಷ್ಟೇ ಅಲ್ಲ, ಬಿಜೆಪಿಯ ಅಧಿಕಾರಾವಧಿಯಲ್ಲಿ ನಡೆದ ಇಂತಹ ಪ್ರಕರಣಗಳನ್ನೂ ಮುಂದಿಟ್ಟಿದ್ದಾರೆ. ಅವುಗಳಿಗೂ ಬಿಜೆಪಿ ಸ್ಪಷ್ಟಿಕರಣ ನೀಡಿಲ್ಲ. ಹೀಗಿರುವಾಗ, ಲೋಕಾಯುಕ್ತ ವರದಿಯನ್ನು ಒಪ್ಪಿಕೊಳ್ಳುವುದಿಲ್ಲ ಎನ್ನುವ ಬಿಜೆಪಿಯ ಮೊಂಡುತನಕ್ಕೆ ಇಷ್ಟಕ್ಕೂ ಮುಡಾ ಹಗರಣಕ್ಕೆ ಹೋಲಿಸಿದರೆ ಕೊರೋನ ಕಾಲದಲ್ಲಿ ಬಿಜೆಪಿ ಸರಕಾರದ ಅವಧಿಯಲ್ಲಿ ನಡೆದ ಹಗರಣ ನಾಡು ಬೆಚ್ಚಿ ಬೀಳಿಸುವಂತಹದು.

ಲೋಕಾಯುಕ್ತ ತನಿಖೆಯ ಗತಿಯ ಬಗ್ಗೆ ಬಿಜೆಪಿಗೆ ಅರಿವಿರುವುದರಿಂದಲೇ, ಅನಗತ್ಯವಾಗಿ ಈ.ಡಿ ಮೂಗು ತೂರಿಸುವ ಅನಿವಾರ್ಯ ಸೃಷ್ಟಿಯಾಯಿತು. ಸ್ವಯಂ ಪ್ರೇರಿತವಾಗಿ ಈ.ಡಿ ತನಿಖೆ ನಡೆಸಿದ್ದೇ ಅಲ್ಲದೆ, ವರದಿಯನ್ನು ಲೋಕಾಯುಕ್ತದೊಂದಿಗೆ ಹಂಚಿಕೊಂಡಿತು. ಅಂದರೆ, ಲೋಕಾಯುಕ್ತ ತನಿಖೆಯ ಮೇಲೆ ಪ್ರಭಾವ ಬೀರಲು ಯತ್ನಿಸಿತು. ಹಗರಣದ ಗಂಭೀರತೆಯ ಬಗ್ಗೆ ಬಿಜೆಪಿಗೆ ನಿಜಕ್ಕೂ ಭರವಸೆಯಿದ್ದದ್ದೇ ಆದರೆ, ಅದು ಲೋಕಾಯುಕ್ತ ತನಿಖೆ ಮುಗಿಯುವವರೆಗೆ ಕಾಯಬೇಕಾಗಿತ್ತು. ತನಿಖೆ ನಡೆಯುತ್ತಿರುವ ಸಂದರ್ಭದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿದ್ದಲ್ಲದೆ, ತನಿಖೆಯ ಗತಿಯನ್ನು ಬದಲಾಯಿಸಲು ಈ.ಡಿಯನ್ನು ದುರುಪಯೋಗಪಡಿಸಿಕೊಂಡಿರುವುದರಲ್ಲೇ ಬಿಜೆಪಿಯ ಒಟ್ಟು ಹತಾಶೆಯನ್ನು ಗುರುತಿಸಬಹುದು.

• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಆಮೇಲೆ ದಶರಥರಾಯನು ತನ್ನ ಆಸ್ಥಾನಮಂಟಪದಲ್ಲಿದ್ದ ಸಮಸ್ತ ಪ್ರಜೆಗಳನ್ನೂ ಸಂಬೋಧಿಸಿ ಭೌರೀಧ್ವನಿಯಂತೆ ಗಂಭೀರವೂ ರಾಜಲಕ್ಷಣಯುಕ್ತವೂ ಆದ ಸ್ವರದಿಂದ ಹೀಗೆಂದನು : ★ ಎಲೈ ಪ್ರಜೆಗಳಿರಾ, ನಮ್ಮ ವಂಶದ ಪೂರ್ವದ ನೃಪಾಲರು ಮಕ್ಕಳನ್ನು ಪರಿಪಾಲಿಸುವಂತೆ ತಮ್ಮ ಪ್ರಜೆಗಳನ್ನು ರಕ್ಷಿಸುತ್ತಿದ್ದರು. ನಾನೂ ಈ ರಾಜ್ಯಕ್ಕೆ ಶ್ರೇಯಸ್ಸುಂಟಾಗುವಂತೆ ಇಕ್ಷ್ವಾಕು ಮೊದಲಾದ ರಾಯರ ಹಾಗೆಯೇ ಅಧಿಕವಾದ ಯತ್ನವನ್ನು ಮಾಡುತ್ತ, ನಮ್ಮ ಪೂರ್ವದ ನೃಪಾಲರಂತೆ ಲೇಶಮಾತ್ರವಾದರೂ ಧರ್ಮವನ್ನು ಮೀರದೆ ನನ್ನ ಶಕ್ತಾನುಸಾರವಾಗಿ ರಕ್ಷಿಸುತ್ತಿದ್ದೇನೆ. ಸಕಲಲೋಕಗಳಿಗೂ ಹಿತವನ್ನು ಬಯಸುವ ಈ ನನ್ನ ಶರೀರವು ಬೆಳ್ಕೊಡೆಯ ನೆಳಲಿನಲ್ಲಿ ವಾರ್ಧಕ್ಯವನ್ನೆ ದಿತು. ನಾನು ಅನೇಕ ಸಾವಿರ ವರುಷಗಳು ಬದುಕಿದೆನು. ಈಗ ನನ್ನ ಶರೀರಕ್ಕೆ ವಿಶ್ರಾಂತಿಯನ್ನು ಬಯಸುತ್ತಲಿದ್ದೇನೆ. ಸಜ್ಜನರಾದ ನರೇಂದ್ರನಿಂದ ಧರಿಸಲ್ಪಟ್ಟು ಮಷ್ಟರಾಯರಿಂದ ಧರಿಸಲಶಕ್ಯವಾಗಿ ಮಹತ್ತಾದ ಈ ಭೂಮಿಯ ಭಾರವನ್ನು ಪ್ರಜೆಗಳ ಹಿತಾರ್ಥವಾಗಿ ನನ್ನ ಕುಮಾರನಾದ ಶ್ರೀರಾಮನಲ್ಲಿರಿಸಿ ಭಾರವನ್ನು ಪರಿಹರಿಸಿಕೊಂಡು ಸುಖದಿಂದಿರ ಬೇಕೆಂದು ಬಯಸುತ್ತೇನೆ. ಶ್ರೀರಾಮನು ನನಗಿಂತಲೂ ಅಧಿಕವಾದ ಸದ್ಗುಣಗಳುಳ್ಳವನು. ಪರಾಕ್ರಮದಲ್ಲಿ ದೇವೇಂದ್ರನಿಗೆ ಸಮಾನನು. ಸಮಸ್ತ ಶತ್ರುರಾಯರ ದುರ್ಗಗಳನ್ನು ಜಯಿಸ ಬಲ್ಲವನು. ಪುಷ್ಯನಕ್ಷತ್ರದೊಡನೆ ಕೂಡಿದ ಚಂದ್ರನಂತಿರುವವನು. ಅತ್ಯಂತ ಧರ್ಮಿಷ್ಟನಾದ ಶ್ರೀರಾಮನಿಗೆ ಯುವರಾಜಪಟ್ಟವನ್ನು ಕಟ್ಟಬೇಕೆಂದು ಮನಸ್ಸಿನಲ್ಲಿ ಯೋಚಿಸಿದ್ದೇನೆ. ಅವನು ನಿಮಗೆ ಸಮ್ಮತನಾದವನು. ಶಾಶ್ವತವಾದ ತೇಜಸ್ಸುಳ್ಳವನು. ಮೂರು ಲೋಕಗಳನ್ನೂ ರಕ್ಷಿಸಲು ಶಕ್ತನು. ಆದಕಾರಣ ನಿಮಗೆಲ್ಲರಿಗೂ ಶ್ರೇಯಸ್ಸಾಗಬೇಕೆಂದು ಸಮಸ್ತ ಭೂಭಾರವನ್ನು ಶ್ರೀರಾಮನಲ್ಲಿರಿಸಿ ನಾನು ಪ್ರಯಾಸವಿಲ್ಲದೆ ಸುಖವಾಗಿರುತ್ತೇನೆ. ಶ್ರೀರಾಮನು ನಿಮಗೆಲ್ಲರಿಗೂ ರಾಜನಾಗಲಿ. ಈ ವಿಷಯವು ನಿಮಗೆಲ್ಲರಿಗೂ ಸಮ್ಮತವಾದರೆ ನನ್ನ ಮನೋರಥವು ಸಿದ್ಧಿಸುವುದು. ನನಗೆ ಇದೇ ಸೂಕ್ತವಾಗಿ ತೋರುತ್ತದೆ. ನಿಮಗೂ ಒಳ್ಳೆಯದೆಂದು ತೋರಿದರೆ ಸಮ್ಮತಿಸಬಹುದು. ಪರಸ್ಪರ ಆಲೋಚಿಸಿ ಮುಂದಿನ ಕರ್ತವ್ಯವನ್ನು ತಿಳುಹಿಸಿ ಎಂದು ನುಡಿದನು. ಅದನ್ನು ಕೇಳಿ, ಗುಡುಗುತ್ತಾ ಮಳೆಗರೆಯುತ್ತಿರುವ ಮೋಡಗಳ ಗರ್ಜನೆಗಳನ್ನು ಕೇಳಿ ನವಿಲುಗಳು ಆನಂದದಿಂದ ಪ್ರತಿಧ್ವನಿ ಮಾಡುವ ಹಾಗೆ, ಅಲ್ಲಿದ್ದ ಜನಸಮೂಹವು ಆನಂದದಿಂದ ಆಸ್ಥಾನಮಂಟಪದಲ್ಲಿ ಕೋಲಾಹಲಧ್ವನಿಯನ್ನು ಹುಟ್ಟಿಸಿತು. ಜಟಿ ದಶರಥರಾಯನ ಧರ್ಮಾರ್ಥಸಹಿತವಾದ ಅಭಿಪ್ರಾಯವನ್ನು ತಿಳಿದು ಸಮಸ್ತ ಬ್ರಾಹ್ಮಣರೂ ಪುರಜನರೂ ಏಕವಾಕ್ಯತೆಯಿಂದ ವೃದ್ಧನಾದ ದಶರಥರಾಯನನ್ನು ಕುರಿತು ಮಹಾರಾಜ, ನೀನು ಅನೇಕ ಸಾವಿರ ವರುಷಗಳು ಬದುಕಿ ಬಹುವೃದ್ಧನಾದೆ. ನಾವು ವರಾಕ್ರಮಿಯಾದ ಶ್ರೀರಾಮನು ವಟ್ಟಾಭಿಷಿಕ್ತನಾಗಿ ಗಜಾರೂಢನಾಗಿ ಬಿಳೀಸತ್ತಿಗೆಯ ನೆಳಲಿನಲ್ಲಿ ಬರುವುದನ್ನು ನೋಡಲಪೇಕ್ಷಿಸುತ್ತೇವೆ. ನೀನು ಆತನಿಗೆ ಯುವರಾಜಪಟ್ಟವನ್ನು ಕಟ್ಟು, ಕಾಲವಿಳಂಬವನ್ನು ಮಾಡಬೇಡ ಎಂದು ನುಡಿದರು.

ಮುಂದುವರಿಯುವುದು...

105 ಮಾರಾಟ ಸಂಸ್ಥೆಗಳು ಭಾಗಿ, 185 ಕೋಟಿ ರೂ. ಒಪ್ಪಂದ

ರೈತರ ಶ್ರಮವನ್ನು ಗೌರವಿಸಲು ಮತ್ತು ಪ್ರೋತ್ಸಾಹಿಸಲು ಈ ಮೇಳವು ವೇದಿಕೆಯನ್ನು ಒದಗಿಸಿತು. ಇದಲ್ಲದೆ, ರಾಜ್ಯ ಸರ್ಕಾರವು ಎಲ್ಲಾ ರೀತಿಯ ಸಿರಿಧಾನ್ಯಗಳನ್ನು ಬೆಂಬಲ ಬೆಲೆಯೊಂದಿಗೆ ಖರೀದಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದೆ. ಸಾವಯವ ಮತ್ತು ಸಿರಿಧಾನ್ಯಗಳು ಆರೋಗ್ಯ ಪ್ರಯೋಜನಗಳನ್ನು ಹೊಂದಿದ್ದು, ದೈನಂದಿನ ಆಹಾರದಲ್ಲಿ ಅವುಗಳನ್ನು ಅಳವಡಿಸಿಕೊಳ್ಳಬೇಕು

ಸಾವಯವ ಸಿರಿಧಾನ್ಯ ಮೇಳ

• ಉದಯವಾಹಿನಿ ಬೆಂಗಳೂರು

ಕಳೆದ 3 ದಿನಗಳಿಂದ ಅರಮನೆ ಮೈದಾನದಲ್ಲಿ ನಡೆದ ಅಂತರಾಷ್ಟ್ರೀಯ ವಾಣಿಜ್ಯ ಸಾವಯವ ಮತ್ತು ಸಿರಿಧಾನ್ಯ ಮೇಳಕ್ಕೆ ಶನಿವಾರ ತೆರೆ ಬಿದ್ದಿದ್ದು, ಉತ್ಪಾದಕರು ಮತ್ತು ಮಾರಟಗಾರರ ನಡುವೆ ಒಟ್ಟಾರೆ 185 ಕೋಟಿ ರೂ. ಮೌಲ್ಯದ ಒಪ್ಪಂದಗಳು ಏರ್ಪಟ್ಟಿವೆ ಎಂದು ತಿಳಿದುಬಂದಿದೆ.

ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಕೃಷಿ ಸಚಿವ ಚಲುವರಾಯಸ್ವಾಮಿಯವರು, ಮೂರು ದಿನಗಳ ಕಾಲ ನಡೆದ ಅಂತಾರಾಷ್ಟ್ರೀಯ ಸಾವಯವ, ಸಿರಿಧಾನ್ಯ ವಾಣಿಜ್ಯ ಮೇಳ ಅತ್ಯಂತ ಯಶಸ್ವಿಯಾಗಿದೆ. ಹಿಂದಿಗಿಂತಲೂ ಈ ಬಾರಿಯ ಮೇಳ ಅತ್ಯಂತ ವಿಶಿಷ್ಟ ಪೂರ್ಣವಾಗಿ ಆಯೋಜನೆಗೊಂಡಿದ್ದು ಜನಮೆಚ್ಚುಗೆಗೆ ಪಾತ್ರವಾಗಿದೆ.

ಈ ಬಾರಿಯ ಮೇಳದಲ್ಲಿ ಒಟ್ಟಾರೆ 185 ಬಿ2ಬಿ ಸಭೆಗಳಲ್ಲಿ 194 ಉತ್ಪಾದಕರು, 105 , 185.41 ರೂ. ಗಳ ಒಪ್ಪಂದ ಏರ್ಪಟ್ಟಿದೆ.

ಮೇಳದ ಸ್ಟಾಲ್‌ಗಳಲ್ಲಿ ನಿರೀಕ್ಷೆಗೂ ಮೀರಿ ವ್ಯಾಪಾರ ವಹಿವಾಟು ನಡೆದಿದೆ. ಈ ವರ್ಷ ಅಂದಾಜು ಒಟ್ಟಾರೆ 3 ಲಕ್ಷ ಮಂದಿ ಮೇಳಕ್ಕೆ ಆಗಮಿಸಿ ವೀಕ್ಷಿಸಿ ಖರೀದಿಸಿದ್ದಾರೆಂದು ಹೇಳಿದರು.

ದೇಶದ 25 ರಾಜ್ಯಗಳು, 5 ರಾಜ್ಯಗಳ ಕೃಷಿ ಸಚಿವರು ಮೇಳದಲ್ಲಿ ಭಾಗವಹಿಸಿದ್ದು, ಸಾರ್ವಕಾಲಿಕ ದಾಖಲೆಯಾಗಿದೆ. ಇತರ ರಾಜ್ಯಗಳು ಕರ್ನಾಟಕದ ಈ ಅಂತಾರಾಷ್ಟ್ರೀಯ ಮೇಳಕ್ಕೆ ಆಗಮಿಸಿ ಅಧ್ಯಯನ ನಡೆಸಿದ್ದು, ಇದೇ ಮಾದರಿ ಇರಿಸಿಕೊಂಡು ತಮ್ಮ ರಾಜ್ಯದಲ್ಲಿಯೂ ಸಿರಿಧಾನ್ಯ ಮೇಳ ಆಯೋಜಿಸುವುದಾಗಿ ಹೇಳಿದ್ದಾರೆ. ಇದು ನಮಗೆ ಹೆಮ್ಮೆ ತಂದಿದೆ. ದೇಸಿ ಪೆವಿಲಿಯನ್ ಕೂಡ ಎಲ್ಲರ ಆಕರ್ಷಣೆ ಪಡೆದಿದೆ ಎಂದು ತಿಳಿಸಿದರು. ರೈತರು ಸಬಲರಾದಾಗ ದೇಶವು ಸುಭದ್ರವಾಗುತ್ತದೆ ಮತ್ತು ಹಳ್ಳಿಗಳು ಅಭಿವೃದ್ಧಿ ಹೊಂದುತ್ತವೆ. ಕೃಷಿ ಕ್ಷೇತ್ರದ ಬಲವರ್ಧನೆಗೆ ಸರ್ಕಾರ ಶ್ರಮಿಸಲಿದೆ.

ಅಯೋಧ್ಯೆಯಲ್ಲಿ ಬಾಲರಾಮ ಪ್ರತಿಷ್ಠಾಪನೆಯ ವಾರ್ಷಿಕೋತ್ಸವ

• ಉದಯವಾಹಿನಿ ಬೆಂಗಳೂರು

ಶಿವಮೊಗ್ಗ: ಶ್ರೀರಾಮನ ಆದರ್ಶ ಸರ್ವಕಾಲಕ್ಕೂ ಪ್ರಸ್ತುತ. ಈತ ಮನುಷ್ಯನೊಬ್ಬ ತಾನು ಬದುಕುವ ರೀತಿಯಿಂದಲೇ ದೇವನಾಗಲು ಸಾಧ್ಯ ಎಂದು ತೋರಿಸಿಕೊಟ್ಟ ಮಹಾತ್ಮ. ರಾಮನೆಂದರೆ ಬದುಕು ಹಾಗೂ ಭಾವನೆಗಳ ಸಂಘರ್ಷ. ಈತನ ಜೀವನವು ಸತ್ಯ, ಕರ್ತವ್ಯ ಮತ್ತು ಸದ್ಗುಣಗಳಿಗೆ ಸಾಕ್ಷಿಯಾಗಿದೆ ಎಂದು ಗುಂಡಪ್ಪ ಶೆಡ್, ಮಲ್ಲೇಶ್ವರ ನಗರ ಹಾಗೂ ರಾಮ್‌ರಾವ್ ಬಡಾವಣೆಯ ನಿವಾಸಿಗಳ ಸಂಘದ ಅಧ್ಯಕ್ಷ ಜೋಡಿಯಾಕ್ ಪ್ರಕಾಶ್ ಪ್ರತಿಪಾದಿಸಿದರು.

ಗುಂಡಪ್ಪ ಶೆಡ್, ಮಲ್ಲೇಶ್ವರ ನಗರ ಹಾಗೂ ರಾಮ್‌ರಾವ್ ಬಡಾವಣೆಯ ನಿವಾಸಿಗಳ ಸಂಘದ ವತಿಯಿಂದ ಅಯೋಧ್ಯೆಯಲ್ಲಿ ಬಾಲರಾಮನ ಪ್ರಾಣ ಪ್ರತಿಷ್ಠಾಪನೆಯ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ನಗರದ ಗುಂಡಪ್ಪ ಶೆಡ್‌ನ ಮುಸ್ಸಂಜೆ ಉದ್ಯಾನವನದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ 'ನುಡಿ ಮನ ರಾಮ ನಾಮ ಒಮ್ಮೆ' ಎಂಬ ಶ್ರೀರಾಮನ ತತ್ವಾಧಾರಿತ ಗೀತ ನೃತ್ಯ ಕಥನ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಸದಾಚಾರದ ಮೂರ್ತರೂಪದಂತಿದ್ದ ಧರ್ಮ ಪರಿಪಾಲಕ ಶ್ರೀರಾಮನ ಉದಾತ್ತ ಆದರ್ಶಗಳನ್ನು ಪ್ರಜೆಗಳು ನಂಬಿದ್ದರು. ಇದರಿಂದಾಗಿಯೇ ರಾಮ ರಾಜ್ಯ ಸುಖೀ ರಾಜ್ಯವಾಗಿತ್ತು. ಸಾಮಾನ್ಯ ಮನುಷ್ಯ ಹೇಗೆ ಬದುಕಬೇಕೆಂಬುವುದಕ್ಕೆ ಶ್ರೀರಾಮ ಮಾದರಿ. ಈತ ಎಂದೆಂದಿಗೂ ಅನುಕರಣೀಯ ವ್ಯಕ್ತಿ ಎಂದರು.

ಆಧುನಿಕ ಜೀವನದ ಭರಾಟೆಯಲ್ಲಿ ಆದರ್ಶ ಗುಣಗಳನ್ನು ತಿಳಿಸುವ, ಜೀವನಕ್ಕೆ ಮಾರ್ಗದರ್ಶನ ನೀಡುವವರು ಅಗತ್ಯ. ಶ್ರೀರಾಮನ ಆದರ್ಶ ವ್ಯಕ್ತಿತ್ವ ಹಾಗೂ ಗುಣಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಡೆದರೆ ನಮ್ಮ ಜೀವನ ಸಾರ್ಥಕವಾಗುತ್ತದೆ ಎಂದು ಹೇಳಿದರು. ಶ್ರೀ ಶಾರದಾ

ಎಲ್ಲಾರೂ ಸಂವಿಧಾನ ಓದಿ: ತಹಶೀಲ್ದಾರ್ ಕಲಗೌಡ ಪಾಟೀಲ

ಕಂದಾಯ ಇಲಾಖೆಗಳ ದಾಖಲೆಗಳನ್ನು ಅಪ್‌ಲೋಡ್ ಮಾಡುತ್ತಿರುವಲ್ಲಿ ಹುಬ್ಬಳ್ಳಿ ತಾಲ್ಲೂಕು ರಾಜ್ಯದಲ್ಲಿಯೇ ಮೊದಲ ಸ್ಥಾನ

• ಉದಯವಾಹಿನಿ ಹುಬ್ಬಳ್ಳಿ

ಕಂದಾಯ ಇಲಾಖೆಯ ದಾಖಲೆಗಳು ಸಾರ್ವಜನಿಕರಿಗೆ ದೋಷವಿಲ್ಲದೆ, ಸುಲಭವಾಗಿ ಸಿಗುವಂತೆ ಮಾಡಲು ಸರ್ಕಾರ ಗಣಕೀಕರಣಕ್ಕೆ ಮುಂದಾಗಿದ್ದು, ಹುಬ್ಬಳ್ಳಿ ತಾಲ್ಲೂಕಿನಲ್ಲಿ ಈಗಾಗಲೇ 1.22 ಲಕ್ಷ ದಾಖಲೆಗಳನ್ನು ಗಣಕೀಕರಣ ಮಾಡಲಾಗಿದೆ' ಎಂದು ತಹಶೀಲ್ದಾರ್ ಕಲಗೌಡ ಪಾಟೀಲ ತಿಳಿಸಿದರು.

ನಗರದ ನೆಹರೂ ಮೈದಾನದಲ್ಲಿ ತಾಲ್ಲೂಕಾಡಳಿತ ಭಾನುವಾರ ಹಮ್ಮಿಕೊಂಡಿದ್ದ ಗಣರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. 'ಕಂದಾಯ ಇಲಾಖೆಗಳ ದಾಖಲೆಗಳನ್ನು ಅಪ್‌ಲೋಡ್ ಮಾಡುತ್ತಿರುವಲ್ಲಿ ಹುಬ್ಬಳ್ಳಿ ತಾಲ್ಲೂಕು ರಾಜ್ಯದಲ್ಲಿಯೇ ಮೊದಲ ಸ್ಥಾನದಲ್ಲಿದೆ. ತಾಲ್ಲೂಕಿನಲ್ಲಿ ಒಟ್ಟು 1.37 ಲಕ್ಷ ದಾಖಲೆಗಳಿದ್ದು, ಹಂತಹಂತವಾಗಿ ಗಣಕೀಕರಣ ಮಾಡಲಾಗುತ್ತಿದೆ ಎಂದರು.

'ರೈತರಿಗೆ ಬೆಳೆ ವಿಮೆ, ಬೆಳೆ ಪರಿಹಾರ, ಕೃಷಿಸಾಲ ಸುಲಭವಾಗಿ ಪಡೆಯಲು ಪಹಣಿ ಪತ್ರಿಕೆಗೆ ಆಧಾರ ಜೋಡಣೆ ಕಡ್ಡಾಯವಾಗಿದ್ದು, ಹುಬ್ಬಳ್ಳಿ ನಗರ ತಾಲ್ಲೂಕು ಶೇ 97.57 ರಷ್ಟು ಪ್ರಗತಿ ಸಾಧಿಸಿದೆ. ನಮ್ಮ ಹೊಲ ನಮ್ಮ ದಾರಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ.

'ಡಾ.ಬಿ.ಆರ್. ಅಂಬೇಡ್ಕರ್ ಅವರು ಸಶಕ್ತ ಸಂವಿಧಾನ ರಚಿಸಿದ್ದರಿಂದ ಎಲ್ಲಾರೂ ಮುಕ್ತವಾಗಿ ಸ್ವಾತಂತ್ರ್ಯ ಅನುಭವಿಸಲು ಸಾಧ್ಯವಾಗಿದೆ. ಜಗತ್ತಿಗೇ ಮಾದಿಯಾದ ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರ ನಮ್ಮದಾಗಿದೆ. ಸ್ವಾತಂತ್ರ್ಯ ದೊರೆತ ಸಂದರ್ಭದಲ್ಲಿ ವಿದೇಶಗರು ಭಾರತವನ್ನು ಹೇಗೆ ನೋಡುತ್ತಿದ್ದರು, ಈಗ ಭಾರತವನ್ನು ಹೇಗೆ ನೋಡುತ್ತಿದ್ದಾರೆ ಎಂದು ವಿಮರ್ಶಿಸಬೇಕಿದೆ. ಯುವಕರಿಗೆ, ಮಹಿಳೆಯರಿಗೆ ರಾಜಕೀಯ ಸೇರಿದಂತೆ ಎಲ್ಲಾ ವರ್ಗದಲ್ಲೂ ಮೀಸಲಾತಿ ನೀಡಿ ಪ್ರಗತಿಗೆ ಮುನ್ನುಡಿ ಬರೆಯಲಾಗಿದೆ
-ಮಹೇಶ ಟೆಂಗಿನಕಾಯಿ, ಶಾಸಕ

ಮುಂಗಾರು ಹಂಗಾಮಿನಲ್ಲಿ ಬೆಳೆಹಾನಿಯಾದ 37,753 ರೈತರಿಗೆ 2 ಕೋಟಿ ಪರಿಹಾರ ನೀಡಲಾಗಿದೆ ಎಂದು ಹೇಳಿದರು.

ವಿವಿಧ ಶಾಲೆಯ ಮಕ್ಕಳು ದೇಶಭಕ್ತಿ ಸಾರುವ ನೃತ್ಯ ಪ್ರದರ್ಶಿಸಿದರು. ಪೊಲೀಸ್, ಗೃಹರಕ್ಷಕ, ಎನ್‌ಸಿಸಿ ವಿದ್ಯಾರ್ಥಿಗಳು ಪಥ ಸಂಚಲನ ನಡೆಸಿದರು. ತಹಶೀಲ್ದಾರ್ ಗೌರವ ವಂದನೆ ಸ್ವೀಕರಿಸಿದರು. ಶಹರ ಬಿಇಒ ಚನ್ನಪ್ಪಗೌಡ, ಗ್ರಾಮೀಣ ಬಿಇಒ ಉಮೇಶ ಬೊಮ್ಮಕ್ಕನವರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಉದಯವಾಹಿನಿ ಚಿತ್ರ

ಮಹಾನಗರ ಪಾಲಿಕೆ ಅಭಿವೃದ್ಧಿಯತ್ತ

ಈದ್ಗಾ ಮೈದಾನ ನಗರದ ಈದ್ಗಾಮೈದಾನದಲ್ಲಿ ಧ್ವಜಾರೋಹಣ ನೆರವೇರಿಸಿ , ಮಾತನಾಡಿದ ಪಾಲಿಕೆ ಆಯುಕ್ತ ಈಶ್ವರ ಉಳ್ಳಾಗಡ್ಡಿ. ಎಲ್ಲಾ ಜನ ಪ್ರತಿನಿಧೀಗಳ ಸಹಕಾರದಿಂ

ದಾಗಿ ಹುಬ್ಬಳ್ಳಿ-ಧಾರವಾಡ ಮಹಾನಗರ ಅಭಿವೃದ್ಧಿಯತ್ತ ಸಾಗುತ್ತಿದೆ. 15ನೇ ಹಣಕಾಸು ಯೋಜನೆಯಡಿ 42 ಕೋಟಿ ಅನುದಾನ ದೊರಕಿದ್ದು, ವಿವಿಧ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ. ಪಾಲಿಕೆಯ ಸಾಮಾನ್ಯ ನಿಧಿಯಿಂದ ಪ್ರತಿ ವಾರ್ಡ್ ಅಭಿವೃದ್ಧಿಗೆ ತಲಾ 1 ಕೋಟಿ ಅನುದಾನ ನೀಡಲಾಗಿದೆ. ಪೌರಕಾರ್ಮಿಕ ಕಲ್ಯಾಣ ಯೋಜನೆಯಡಿ 25 ಕೋಟಿ ವೆಚ್ಚದಲ್ಲಿ 320 ಮನೆಗಳನ್ನು ನಿರ್ಮಿಸುತ್ತಿದ್ದು, ಈಗಾಗಲೇ 224 ಮನೆಗಳು ನಿರ್ಮಾಣವಾಗಿವೆ. ಕೆರೆ ಅಭಿವೃದ್ಧಿ, ಗ್ಯಾಸ್ ಚಿತಾಗಾರ, ಘನತ್ಯಾಜ್ಯ ನಿರ್ವಹಣಾ ಘಟಕಗಳಿಗೆ ತಡೆಗೋಡೆ, ಪಾರ್ಕಿಂಗ್ ವ್ಯವಸ್ಥೆ, ಪಾಲಿಕೆ ಕೇಂದ್ರ ಕಚೇರಿಯಲ್ಲಿ ನೂತನ ಸಭಾಭವನ ನಿರ್ಮಾಣ, ಆಸ್ತಿ ತೆರಿಗೆ ಸಂಗ್ರಹ, ಇ-ಸ್ವತ್ತು ಮೇಳದಂಥ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ' ಎಂದರು.

ಮೇಯರ್ ರಾಮಪ್ಪ ಬಡಿಗೇರ, ಶಾಸಕ ಮಹೇಶ ಟೆಂಗಿನಕಾಯಿ. ಪಾಳಿಕೆ ಸದಸ್ಯರು, ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

2023ನೇ ಸಾಲಿನಲ್ಲಿ ಪಾಲಿಕೆಯಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದ ವಿವಿಧ ವಿಭಾಗದ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗೆ ಅತ್ಯುತ್ತಮ ಸೇವಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪಾಲಿಕೆ ಮುಖ್ಯ ವೈದ್ಯಾಧಿಕಾರಿ ಶ್ರೀಧರ ದಂಡಪ್ಪನವರ, ಪದ್ಮಾವತಿ ತಂಬಗಿ, ದೀಪಿಕಾ, ನವೀನ ಹಿರೇಮಠ, ಎ.ಒ. ಬೆಳಗಾಂವಕರ, ಜಿ.ಬಿ. ರಾಮಾದತ್ತ, ಮಂಜುನಾಥ ಬಿ., ಪ್ರಿಯಾಂಕಾ ಎ.ಇ. ಬೊಮ್ಮಲಿಂಗೇಶ, ರಾಜೇಶ, ಶ್ರೀಧರ ಟಿ.ಎನ್., ರಮೇಶ ನೂಲ್ಕಿ, ಉಮೇಶ ಸವಣೂರು, ಫಿರೋಜ್ ಸೇರಿದಂತೆ 15 ಮಂದಿಗೆ ಪ್ರಮಾಣಪತ್ರ ಮತ್ತು ಪಾರಿತೋಷಕ ನೀಡಲಾಯಿತು.

ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರ

ಮಹಾನಗರ ಪಾಲಿಕೆ ಆವರಣ ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರ ನಮ್ಮದಾಗಿದ್ದು ಅದಕ್ಕೆ ಸಂವಿಧಾನವೇ ಆಧಾರಸ್ತಂಭವಾಗಿದೆ' ಎಂದು ಮೇಯರ್ ರಾಮಪ್ಪ ಬಡಿಗೇರ ಹೇಳಿದರು. ಹುಬ್ಬಳ್ಳಿ ಪಾಲಿಕೆ ಆವರಣದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, 'ಹು-ಧಾ ಮಹಾನಗರ ಪಾಲಿಕೆ ಅಭಿವೃದ್ಧಿಯತ್ತ ಸಾಗುತ್ತಿದ್ದು, ಇದಕ್ಕೆ ಎಲ್ಲಾ ಅಧಿಕಾರಿಗಳ, ಜನಪ್ರತಿನಿಧಿಗಳ ಹಾಗೂ ಸಾರ್ವಜನಿಕರ ಸಹಕಾರ ಕಾರಣವಾಗಿದೆ' ಎಂದರು.

ವಿಶ್ವದ ಅತ್ಯಂತ ದೊಡ್ಡ ಸಂವಿಧಾನ ನಮ್ಮದಾಗಿದೆ

• ಉದಯವಾಹಿನಿ ಕೆಂಭಾವಿ

ಪಟ್ಟಣದ ಡಾ.ಬಿ ಆರ್ ಅಂಬೇಡ್ಕರ್ ಚೌಕದಲ್ಲಿ 76 ನೇ ಗಣರಾಜ್ಯೋತ್ಸವ ಆಚರಿಸಲಾಯಿತು. ಧ್ವಜಾರೋಹಣವನ್ನು ಶಿವಪ್ಪ ಕಂಬಾರ ನೆರವೇರಿಸಿದರು. ಅಯ್ಯಪ್ಪ ಮಾಳಳ್ಳಿಕರ್ ಡಾ. ಬಿ ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದರು.

ನಂತರ ಮಾತನಾಡಿದ ಮಾಳಪ್ಪ ರಾಜಪುರ್ ನಮ್ಮ ಭಾರತ ಸಂವಿಧಾನವು ವಿಶ್ವದ ದೊಡ್ಡ ಸಂವಿಧಾನವಾಗಿದೆ, ಜನವರಿ 26 1950 ರಂದು ನಮ್ಮ ದೇಶ ಪ್ರಜಾಪ್ರಭುತ್ವ ರಾಷ್ಟ್ರವಾಯಿತು. ಅಂತಿಮವಾಗಿ ಎರಡೂವರೆ ವರ್ಷ ಗಳ ನಂತರ ಜನವರಿ 26, 1950 ರಂದು ಭಾರತೀಯ ಸಂವಿಧಾನವು ಜಾರಿಗೆ ಬಂದಾಗ ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರಗಳಲ್ಲಿ ಒಂದಾಗಿದೆ. ಭಾರತವನ್ನು ಸಾರ್ವಭೌಮ, ಸಮಾಜವಾದಿ, ಜಾತ್ಯತೀತ, ಪ್ರಜಾಸತ್ತಾತ್ಮಕ ಗಣರಾಜ್ಯ ಎಂದು ಘೋಷಿಸಿದ ದಿನ.

ಮತ್ತು ಈ ದಿನವನ್ನು ಗೌರವಿಸಲು, ಭಾರತೀಯ ಗಣ ರಾಜ್ಯೋತ್ಸವವನ್ನು ಪ್ರತಿ ವರ್ಷ ಜನವರಿ 26 ರಂದು ದೇಶದಾದ್ಯಂತ ಅತ್ಯಂತ ಉತ್ಸಾಹದಿಂದ ಆಚರಿಸುತ್ತೇವೆ ಎಂದರು.


ಉದಯವಾಹಿನಿ ಚಿತ್ರ

ಭಾರತವು ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ

ಈ ಸಂದರ್ಭದಲ್ಲಿ ತಿಪ್ಪಣ್ಣ ಅಮರಖೇಡ, ಶಿವಶರಣಪ್ಪ ಮಾಳಳ್ಳಿಕರ್, ತಿಪ್ಪಣ್ಣ ಅಗ್ನಿ ,ರಮೇಶ್ ಕೊಡಗಾನೂರ, ಬಾಬು ಅರಳಗುಂಡಗಿ, ಪರಶುರಾಮ್ ಕಡಕೋಳ,ಸಿದ್ದಾರ್ಥ್ ಮಾಳಳ್ಳಿಕರ, ಮಲ್ಲಿಕಾರ್ಜುನ ಬಾವಿಮನಿ,ಮಡಿವಾಳಪ್ಪ ಅನ್ನೂರ್, ಸುದೀಪ್ ಬಸರಿಗಿಡ, ಇತರರು ಇದ್ದರು.

ಸಂವಿಧಾನ ಸಮಿತಿಗೆ ಡಾ.ಅಂಬೇಡ್ಕರ್ ನೇಮಕಕ್ಕೆ ಅಡ್ಡಿ: ಶಾಸಕ

• ಉದಯವಾಹಿನಿ ಕುಷ್ಟಗಿ

ಪ್ರಪಂಚದಲ್ಲಿಯೇ ಶ್ರೇಷ್ಠ ಸಂವಿಧಾನ ನೀಡಿದ ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ಸಂವಿಧಾನ ರಚನಾ ಸಮಿತಿಯ ನೇಮಕಕ್ಕೆ ಅಡ್ಡಿಪಡಿಸಿದವರೇ ಈಗ ಸಂವಿಧಾನ ಅಪಾಯದಲ್ಲಿದೆ ಎಂದು ಕೆಲವರು ಹೇಳುತ್ತಿರುವುದು ವಿಪರ್ಯಾಸವಾಗಿದೆ' ಎಂದು ವಿಧಾನಸಭೆ ಪ್ರತಿಪಕ್ಷದ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ ಪರೋಕ್ಷವಾಗಿ ಕಾಂಗ್ರೇಸ್ ವಿರುದ್ಧ ಹರಿಹಾಯ್ದರು.

ಪಟ್ಟಣದಲ್ಲಿ ತಾಲ್ಲೂಕು ಆಡಳಿತ ಏರ್ಪಡಿಸಿದ್ದ 76ನೇ ಗಣರಾಜ್ಯೋತ್ಸವದ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂವಿಧಾನಕ್ಕೆ ಅನೇಕ ಬಾರಿ ತಿದ್ದುಪಡಿ ತರಲಾಗಿದ್ದರೂ ಅವುಗಳಲ್ಲಿ ಪ್ರಜೆಗಳ ಹಿತ ಅಡಗಿತ್ತು. ಆದರೆ ಕೆಲ ವ್ಯಕ್ತಿಗಳು ತಮ್ಮ ಸ್ವಾರ್ಥ ಸಾಧನೆಗಾಗಿಯೇ ಸಂವಿಧಾನಕ್ಕೆ ಅನೇಕ ಬಾರಿ ತಿದ್ದುಪಡಿ ತಂದಿದ್ದಾರೆ' ಎಂದು ಕಾಂಗ್ರೆಸ್ ಪಕ್ಷದ ಹೆಸರು ಪ್ರಸ್ತಾಪಿಸದೆ ಟೀಕಾಪ್ರಹಾರ ನಡೆಸಿದರು.

ರಾಷ್ಟ್ರಧ್ವಜಾರೋಹಣ ನೆರವೇರಿಸಿ ತಹಶೀಲ್ದಾರ್ ಅಶೋಕ ಶಿಗ್ಗಾವಿ ಮಾತನಾಡಿದರು. ಪುರಸಭೆ ಅಧ್ಯಕ್ಷ ಮಹಾಂತೇಶ ಕಲಭಾವಿ, ಉಪಾಧ್ಯಕ್ಷೆ ನಹಿನಾಬೇಗಂ ಮುಲ್ಲಾ, ಸದಸ್ಯರಾದ ಕಲ್ಲೇಶ ತಾಳದ, ಜಯತೀರ್ಥ ಆಚಾರ, ತಾಲ್ಲೂಕು ಪಂಚಾಯಿತಿ ಇಒ ಪಂಪಾಪತಿ ಹಿರೇಮಠ, ಕ್ಷೇತ್ರ ಶಿಕ್ಷಣಾಧಿಕಾರಿ ಸುರೇಂದ್ರ ಕಾಂಬಳೆ, ಸಬ್ ಇನ್‌ಸ್ಪೆಕ್ಟರ್ ಹನುಮಂತಪ್ಪ ತಳವಾರ, ಪೀಕಾರ್ಡ್ ಬ್ಯಾಂಕ್ ಅಧ್ಯಕ್ಷ ಮಹಾಲಿಂಗಪ್ಪ ದೋಟಿಹಾಳ, ಸಿಡಿಪಿಒ ಯಲ್ಲಮ್ಮ ಹಂಡಿ, ರಾಜು ನರಸಪ್ಪ, ಎಸ್.ವಿ. ಡಾಣಿ, ದೈಹಿಕ ಪರಿವೀಕ್ಷಣಾಧಿಕಾರಿ ಸರಸ್ವತಿ ಇದ್ದರು.

ಉದಯವಾಹಿನಿ ಚಿತ್ರ

ಸಮಾನತೆ, ಜಾತ್ಯತೀತತೆ ನೆರಳಿನಲ್ಲಿ ಬದುಕುತ್ತಿರುವ ನಮಗೆ ಸಂವಿಧಾನದ ಮೂಲಕ ಡಾ.ಅಂಬೇಡ್ಕರ್ ದೊಡ್ಡ ಶಕ್ತಿ ತುಂಬಿದ್ದಾರೆ. ಒಂದೊಮ್ಮೆ ಅವರು ರಚನಾ ಸಮಿತಿ ಅಧ್ಯಕ್ಷರಾಗದೇ ಹೋಗಿದ್ದರೆ ಮಾದರಿ ಸಂವಿಧಾನ ದೊರೆಯದೆ ಸಮಾನತೆ ಕನಸಿನ ಮಾತಾಗುತ್ತಿತ್ತು. ದೇಶದಲ್ಲಿ ಮನಸ್ಸಿಗೆ ತೋಚಿದಂತೆ ಮಾತನಾಡುವ ಮೂಲಕ ಅನೇಕರು ಸಂವಿಧಾನ ನೀಡಿರುವ ಅಭಿವ್ಯಕ್ತಿ ಸ್ವಾತಂತ್ರ್ಯ ದುರ್ಬಳಕೆ ಮಾಡಿಕೊಳ್ಳುತ್ತಿರುವುದು ಕಂಡುಬರುತ್ತಿದೆ -ದೊಡ್ಡನಗೌಡ ಪಾಟೀಲ

• ಉದಯವಾಹಿನಿ ಶಿವಮೊಗ್ಗ

ಮಕ್ಕಳಿಗೆ ಸಂವಿಧಾನದ ಮಹತ್ವ ತಿಳಿಸಲು ಪ್ರತಿದಿನ ಶಾಲೆಯಲ್ಲಿ ಸಂವಿಧಾನ ಪೀಠಿಕೆ ಓದುವ ಪರಿಪಾಠ

ಬಾಬಾ ಸಾಹೇಬ್ ಅಂಬೇಡ್ಕರರ ಆಶಯದಂತೆ ಸ್ವಾತಂತ್ರ್ಯ, ಸಮಾನತೆ ಮತ್ತು ಸೌಹಾರ್ದತೆ ಸೇರಿದಂತೆ ಸಾಮಾಜಿಕ ನ್ಯಾಯದ ಪರಿಕಲ್ಪನೆಯನ್ನು ಸಾಕಾರಗೊಳಿಸುವುದರ ಪ್ರತೀಕವಾಗಿ ಸಂವಿಧಾನದ ಪೀಠಿಕೆಯನ್ನು ಇಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಏಕಕಾಲದಲ್ಲಿ ಲೋಕಾರ್ಪಣೆಗೊಳಿಸಲಾಗುತ್ತಿರುವುದು ಹರ್ಷದ ಸಂಗತಿ ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಅವರು ಹೇಳಿದರು.

ಅವರು ಗಣರಾಜ್ಯ ದಿನವಾದ ಇಂದು ನಗರದ ಅಲ್ಲಮಪ್ರಭು ಉದ್ಯಾನವನದಲ್ಲಿ ಸಂವಿಧಾನದ ಪೀಠಿಕೆಯನ್ನು ಸಾಮೂಹಿಕವಾಗಿ ವಾಚಿಸುವ ಮೂಲಕ ಲೋಕಾರ್ಪಣೆಗೊಳಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದರು. ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ದೇಶಕ್ಕೆ ಭೇಟಿ ನೀಡಿದ ನೂರನೇ ವರ್ಷಾಚರಣೆಯ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಹಲವು ವಿಶಿಷ್ಟ ಕಾರ್ಯಕ್ರಮಗಳನ್ನು ರೂಪಿಸಿದೆ.

ಅದರ ಭಾಗವಾಗಿ 2025ರ ಅಕ್ಟೋಬರ್ 2ರಿಂದ 2026ರ ಅಕ್ಟೋಬರ್ ಮಾಹೆಯವರೆಗೆ ಗಾಂಧೀ ಭಾರತ ಹೆಸರಿನಲ್ಲಿ ವರ್ಷಪೂರ್ತಿ ಕಾರ್ಯಕ್ರಮಗಳನ್ನು ನಡೆಸಲಿದೆ ಎಂದರು. 2023ರ ಸೆಪ್ಟೆಂಬರ್ 5ರಿಂದ ಇಂದಿನವರೆಗೆ ರಾಜ್ಯದ ಎಲ್ಲಾ ಶಾಲೆಗಳ ಸುಮಾರು 1.08 ಕೋಟಿ ವಿದ್ಯಾರ್ಥಿಗಳು ಪ್ರತಿದಿನ ಶಾಲೆಯಲ್ಲಿ ಸಂವಿಧಾನದ ಪೀಠಿಕೆಯನ್ನು ಓದುವ ಪರಿಪಾಠ ಆರಂಭಿಸಲಾಗಿದೆ. ಈ ಮೂಲಕ ಮಕ್ಕಳಿಗೆ ಸಂವಿಧಾನದ ಮಹತ್ವ ತಿಳಿಸಲಾಗುತ್ತಿದೆ ಎಂದ ಅವರು, ಪೀಠಿಕೆಯನ್ನು ಅರ್ಥೈಸಿಕೊಂಡು ಅನುಸರಿಸುವ ಅಗತ್ಯವಿದೆ ಎಂದವರು ನುಡಿದರು.

ಗ್ಯಾರೆಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದಿಂದಾಗಿ ಸಾಮಾಜಿಕ ಆರ್ಥಿಕ ಸಮಾನತೆಗೆ ಸಹಕಾರಿಯಾಗಿದೆ ಎಂದ ಅವರು, ಸರ್ಕಾರದ ವತಿಯಿಂದ ಇನ್ನಷ್ಟು ರಚನಾತ್ಮಕ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಕ್ಕೆ ತರುವ ಉದ್ದೇಶ ಹೊಂದಲಾಗಿದೆ ಎಂದರು. ಮೈಕ್ರೋ ಫೈನಾನ್ಸ್ ಮೀಟರ್ ಬಡ್ಡಿದಂಧೆ ನಿಯಂತ್ರಣಕ್ಕೆ ಈಗಾಗಲೇ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಮಹತ್ವದ ಸಭೆಯನ್ನು ನಡೆಸಲಾಗಿದ್ದು, ಈ ಪಿಡುಗಿನ ಸಮಗ್ರ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ -ಎಸ್.ಮಧು ಬಂಗಾರಪ್ಪ , ಜಿಲ್ಲಾ ಉಸ್ತುವಾರಿ ಸಚಿವ

ಗಮನ ಸೆಳೆದ ಮಕ್ಕಳ ಸಂತೆ, ಗಣಿತ- ವಿಜ್ಞಾನ ವಿಷಯ ಪ್ರದರ್ಶನ

• ಉದಯವಾಹಿನಿ ಹಿರಿಯೂರು

ತಾಲ್ಲೂಕಿನ ಗೊಲ್ಲಹಳ್ಳಿಯಲ್ಲಿರುವ ಜೆಟ್ ಗ್ರಾಮೀಣ ಶಿಕ್ಷಣ ಸಂಸ್ಥೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಮಕ್ಕಳ ಸಂತೆ ಹಾಗೂ ಗಣಿತ, ವಿಜ್ಞಾನ, ಸಮಾಜಶಾಸ್ತ್ರ ವಿಷಯ ಪ್ರದರ್ಶನವನ್ನು ಗ್ರಾಮದ ರೈತರು ಹಾಗೂ ಪೋಷಕರು ಉದ್ಘಾಟಿಸಿದರು.

ಹಿರಿಯೂರು, ಚಳ್ಳಕೆರೆ, ಚಿತ್ರದುರ್ಗ ತಾಲ್ಲೂಕುಗಳ ಅಂದಾಜು 60 ಗ್ರಾಮಗಳ 800ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸಂತೆಯಲ್ಲಿ ವಹಿವಾಟು ನಡೆಸಿ, ಗಣನೀಯ ಲಾಭ ಗಳಿಸಿದ್ದಲ್ಲದೆ, ವ್ಯವಹಾರದ ಬಗ್ಗೆ ಅರಿವು ಪಡೆದರು. ವಿವಿಧ ಹಣ್ಣು, ತರಕಾರಿಗಳು, ಸಿದ್ಧಪಡಿಸಿದ ತಿನಿಸುಗಳನ್ನು ವಿದ್ಯಾರ್ಥಿಗಳು ಮಾರಾಟ ಮಾಡುವ ಮೂಲಕ ರೈತರು ಹಾಗೂ ಪೋಷಕರ ಗಮನ ಸೆಳೆದರು.

ವಿದ್ಯಾರ್ಥಿಗಳೇ ನಡೆಸಿದ ಕ್ಯಾಂಟೀನ್‌ನಲ್ಲಿ ದೋಸೆ ಕ್ಯಾಂಪ್ ಎಲ್ಲಾರನ್ನು ಆಕರ್ಷಿಸಿತು. ದೋಸೆ ಮಾರಾಟ ಒಂದರಿಂದಲೇ ಅಂದಾಜು10,000 ವಹಿವಾಟು ನಡೆಸುವ ಮೂಲಕ ಗಮನ ಸೆಳೆದರು. ಸಂತೆಮೇಳದ ಜೊತೆಗೆ ಗಣಿತ, ವಿಜ್ಞಾನ ಮತ್ತು ಸಮಾಜಶಾಸ್ತ್ರ, ವಿಷಯಗಳ ಪ್ರದರ್ಶನವನ್ನು ಏರ್ಪಡಿಸಲಾಗಿತ್ತು. ವಿದ್ಯಾರ್ಥಿಗಳು ತಮ್ಮ ಪಠ್ಯಪುಸ್ತಕಗಳನ್ನು ಆಧರಿಸಿ ಅನೇಕ ಸ್ತಬ್ಧ ಚಿತ್ರಗಳು ಹಾಗೂ ಪ್ರಾತ್ಯಕ್ಷಿಕೆಗಳನ್ನು ಸಿದ್ಧಪಡಿಸಿದ್ದರು. ಕೊನೆಯಲ್ಲಿ ಪಠ್ಯ ವಿಷಯಗಳ ಆಧಾರಿತ ವಿವಿಧ ಕಾರ್ಯಕ್ರಮಗಳನ್ನು ವಿದ್ಯಾರ್ಥಿಗಳು ನಡೆಸಿಕೊಟ್ಟರು. ಜಾಗೃತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಚಂದ್ರಶೇಖರ ಬೆಳಗೆರೆ, ಕಾರ್ಯದರ್ಶಿ ಗಿರಿಜಾ, ಪ್ರಾಂಶುಪಾಲ ಷಣ್ಮುಗ ಸುಂದರಂ, ಹಿರಿಯ ಶಿಕ್ಷಕರಾದ ರಾಜೇಶ್ವರಿ, ರೂಪ, ಸುಧಾ, ಆನಂದ ಪಾಲ್ಗೊಂಡಿದ್ದರು.

ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಸಂವಿಧಾನದಿಂದ ನಮಗೆಲ್ಲ ಹಕ್ಕುಗಳು ಸಿಕ್ಕಿವೆ: ಜಮಖಂಡಿ

ವಿಶ್ವದಲ್ಲೇ ದೊಡ್ಡದಾದ ಸಂವಿಧಾನ ಭಾರತ ದೇಶದ ಸಂವಿಧಾನ ನಮಗೆಲ್ಲ ಮೂಲಭೂತ ಹಕ್ಕುಗಳನ್ನು ಸಂವಿಧಾನದಿಂದಲೇ ಸಿಕ್ಕಿದೆ ಎಂದು ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಹೇಳಿದರು.

ಪಟ್ಟಣದ ಹೊರ ವಲಯದಲ್ಲಿರುವ ತಾಲ್ಲೂಕಾ ಕ್ರೀಡಾಂಗಣದಲ್ಲಿ ತಾಲ್ಲೂಕಾಡಳಿತ ವತಿಯಿಂದ ಹಮ್ಮಿಕೊಂಡಿದ್ದ 76ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಮಹಾತ್ಮ ಗಾಂಧೀಜಿ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜಿಸಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು,ಭಾರತದ ಸಂವಿಧಾನವು 1950 ಜನವರಿ 26ರಂದು ಜಾರಿಗೆ ಬಂದಿತ್ತು.

1947 ಆಗಸ್ಟ್ 15ರಂದು ಬ್ರಿಟಿಷ್ ರ ಆಳ್ವಿಕೆಯ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	07:30 ರಿಂದ 09:00
ಗುಳಿಕ ಕಾಲ	ಮಧ್ಯಾಹ್ನ	01:30 ರಿಂದ 03:00
ಯಮಗಂಡ ಕಾಲ	ಬೆಳಿಗ್ಗೆ	10:30 ರಿಂದ 12:00

ಮೇಷ ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಆದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ.

ವೃಷಭ ಸ್ನೇಹಿತರು ಮತ್ತು ಸಂಬಂಧಿಗಳು ಹೆಚ್ಚು ಸಮಯ ಕೇಳಿದರೂ ಈ ಜಗತ್ತಿನ ಬಾಗಿಲುಗಳನ್ನು ಮುಚ್ಚಿ ನಿಮಗೆ ನೀವೇ ಒಳ್ಳೆಯ ವೈಭೋಗ ನೀಡಿಕೊಳ್ಳುವುದೊಳ್ಳೆಯದು.

ಮಿಥುನ ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧಗಳನ್ನು ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ.

ಕರ್ಕಾಟಕ ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ.

ಸಿಂಹ ನಿಮ್ಮ ಭಾವನೆಗಳನ್ನು ನಿಯಂತ್ರಿಸಲು ನಿಮಗೆ ಕಷ್ಟವಾಗಬಹುದು – ನಿಮ್ಮ ಅಸಾಮಾನ್ಯ ವರ್ತನೆ ನಿಮ್ಮ ಸುತ್ತಲಿನ ಜನರನ್ನು ಗೊಂದಲದಲ್ಲಿ ಕೆಡವಬಹುದು ಮತ್ತು ನಿಮ್ಮನ್ನು ನಿರಾಸೆಗೊಳಿಸಬಹುದು.

ಕನ್ಯಾ ನಿಮ್ಮ ಮನಸ್ಸಿನಲ್ಲಿ ಸಕಾರಾತ್ಮಕ ಆಲೋಚನೆಗಳನ್ನು ತನ್ನಿ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡು ಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ.

ತುಲಾ ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ಮನೆಯಲ್ಲಿನ ಪರಿಸ್ಥಿತಿಗಳಿಂದ ನಿಮಗೆ ಅಸಮಾಧಾನ ಉಂಟಾಗಬಹುದು.

ವೃಶ್ಚಿಕ ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು.

ಧನಸ್ಸು ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

ಮಕರ ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು.

ಕುಂಭ ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು.

ಮೀನ ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.

ಮೇಟಿಕುರ್ಕಿ ಬಳಿ ಕೈಗಾರಿಕಾ ಕಾರಿಡಾರ್ ಸ್ಥಾಪನೆ: ಸಚಿವ ಡಿ.ಸುಧಾಕರ್

ದುಡಿಯುವ ಕೈಗಳಿಗೆ ಕೆಲಸವೂ ಗ್ಯಾರಂಟಿ, 76ನೇ ಗಣರಾಜ್ಯೋತ್ಸವದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಆಶಯ

• ಉದಯವಾಹಿನಿ ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಮೇಟಿಕುರ್ಕಿ ಗ್ರಾಮದ ಬಳಿ ಕೈಗಾರಿಕಾ ಕಾರಿಡಾರ್ ಸ್ಥಾಪನೆಯಾಗಲಿದ್ದು, ಇದರಿಂದ ಉತ್ಪಾದನೆ ಕ್ಷೇತ್ರದಲ್ಲಿ ಮಹತ್ವದ ಸಾಧನೆಯಾಗಲಿದ್ದು, ದುಡಿಯುವ ಕೈಗಳಿಗೆ ಕೆಲಸವೂ ಸಹ ಗ್ಯಾರಂಟಿಯಾಗುತ್ತದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಆಶಯ ವ್ಯಕ್ತಪಡಿಸಿದರು.

ನಗರದ ಸರ್ಕಾರಿ ವಿಜ್ಞಾನ ಕಾಲೇಜು ಪಕ್ಕದ ಮುರುಘ ರಾಜೇಂದ್ರ ಕ್ರೀಡಾಂಗಣದಲ್ಲಿ ಭಾನುವಾರ 76ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಗಣರಾಜ್ಯೋತ್ಸವ ಸಂದೇಶ ನೀಡಿದರು.

ದಾವಣಗೆರೆ–ತುಮಕೂರು ನಡುವಿನ ನೇರ ರೈಲು ಮಾರ್ಗದ ನಿರ್ಮಾಣಕ್ಕೆ 1000 ಎಕರೆಗೂ ಹೆಚ್ಚು ಜಮೀನನ್ನು ಸ್ವಾಧೀನಪಡಿಸಿಕೊಂಡು, ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ರೈಲ್ವೆ ಅಭಿವೃದ್ಧಿ ಕಾಮಗಾರಿ ಚಾಲನೆಯಲ್ಲಿದೆ ಎಂದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ರಾಜ್ಯದ ಜನರ ಜೀವನ ಮಟ್ಟ ಸುಧಾರಿಸಿವೆ. ಬಡವರು ಸಮಾನತೆಯಿಂದ ತಲೆ ಎತ್ತಿ ಬದುಕುವ ಅವಕಾಶ ಕಲ್ಪಿಸಿವೆ. ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯ ಅರ್ಹ ಕುಟುಂಬಗಳಿಗೆ ತಲಾ 5 ಕೆ.ಜಿ. ಅಕ್ಕಿ ಮತ್ತು ರೂ.170/– ನೀಡಲಾಗುತ್ತಿದೆ. ಇದಕ್ಕಾಗಿ ಪ್ರತಿ ತಿಂಗಳು ರೂ.20.96 ಕೋಟಿ ಫಲಾನುಭವಿಗಳ ಖಾತೆಗೆ ನೇರವಾಗಿ ಸಂದಾಯ ಮಾಡಲಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯ 3,95,471 ಮಹಿಳೆಯರ ಬ್ಯಾಂಕ್ ಖಾತೆಗೆ ಪ್ರತಿ ತಿಂಗಳು ರೂ.2000/–ವರ್ಗಾವಣೆ ಮಾಡಲಾಗಿದೆ. ಶಕ್ತಿ ಯೋಜನೆಯಡಿ ಸಾರಿಗೆ ನಿಗಮದ ಬಸ್ಸುಗಳಲ್ಲಿ ಪ್ರತಿದಿನ ಸರಾಸರಿ 65 ಸಾವಿರ ಮಹಿಳೆಯರು ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ. ಇದಕ್ಕಾಗಿ ನಿಗಮಕ್ಕೆ ರೂ.138 ಕೋಟಿ ಪಾವತಿಸಲಾಗಿರುತ್ತದೆ.

ಮನೆ ಮನೆಗೆ ನೀರಿನ ಸಂಪರ್ಕ

ಗ್ರಾಮೀಣ ಭಾಗದ ಜನರ ಕುಡಿಯುವ ನೀರಿಗಾಗಿ ಮನೆ ಮನೆಗೆ ನೀರಿನ ಸಂಪರ್ಕ ಜಲ ಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ವಿವಿಧ ಹಂತಗಳಲ್ಲಿ ಸುಮಾರು 392.79 ಕೋಟಿಗಳ ವೆಚ್ಚದಲ್ಲಿ ಕಾಮಗಾರಿಗಳನ್ನು ಚಾಲನೆಯಲ್ಲಿರುತ್ತವೆ. ಚಿತ್ರದುರ್ಗ ಜಿಲ್ಲೆಯು ಅಭಿವೃದ್ಧಿಯ ಹಾದಿಯಲ್ಲಿಯೂ ಸಹ ಮುಂದಿದೆ ಎಂದು ಹೇಳಿದರು.

ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ಪದವೀಧರರು ಮತ್ತು ಡಿಪ್ಲೊಮೊ ಪಾಸಾದವರಿಗೆ ಒಟ್ಟು ರೂ.7.86 ಕೋಟಿ ಸಂದಾಯ ಮಾಡಲಾಗಿದೆ. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ ಇದುವರೆಗೂ 3,78,084 ಫಲಾನುಭವಿಗಳು ನೊಂದಣಿಯಾಗಿದ್ದು, ರೂ.234 ಕೋಟಿ ಸರ್ಕಾರದಿಂದ ಭರಿಸಲಾಗಿರುತ್ತದೆ ಎಂದು ಹೇಳಿದರು.

1947ರಲ್ಲಿ ಸ್ವಾತಂತ್ರ್ಯ ದೊರಕಿತು. ಆದರೆ ದೇಶವನ್ನು ಮುನ್ನೆಡೆಸುವ ನೀತಿ ನಿಯಮಗಳನ್ನು, ಸಮಾನ ಹಕ್ಕುಗಳನ್ನು ಪ್ರತಿಪಾದಿಸುವ ಸಂವಿಧಾನವೊಂದು ಬೇಕಿತ್ತು. ಅದಕ್ಕಾಗಿ ರಾಷ್ಟ್ರಪತಿ ಬಾಬು ರಾಜೇಂದ್ರ ಪ್ರಸಾದ್ ರವರು ಡಾ.ಅಂಬೇಡ್ಕರ್‌ರವರ ಅಧ್ಯಕ್ಷತೆಯಲ್ಲಿ 7 ಜನ ಸದಸ್ಯರ ಸಮಿತಿಯನ್ನು ನೇಮಕ ಮಾಡಿತು. ಅದರಲ್ಲಿ ನಮ್ಮ ಜಿಲ್ಲೆಯ ಮಾಜಿ ಮುಖ್ಯಮಂತ್ರಿ ದಿವಂಗತ ಎಸ್. ನಿಜಲಿಂಗಪ್ಪನವರು ಇದ್ದರೆಂಬುದು ಹೆಮ್ಮೆಯ ವಿಷಯ ಎಂದರು.

ಸಂವಿಧಾನ ರಾಷ್ಟ್ರ ಮುನ್ನಡೆಸುವ ಕಾನೂನು ದೀವಿಗೆ ಅಷ್ಟೇ ಅಲ್ಲ, ಮಾನವೀಯ ಮೌಲ್ಯಗಳ ಸಂಕಥನವೂ ಆಗಿದೆ. ವ್ಯಕ್ತಿಯೊಬ್ಬ ತನ್ನ ಅನನ್ಯತೆಯನ್ನು ಉಳಿಸಿಕೊಂಡು ಎಲ್ಲರೊಳಗೊಂದಾಗಿ ಬದುಕುವ

ಉದಯವಾಹಿನಿ ಚಿತ್ರ

ಹೊಸದುರ್ಗ ತಾಲ್ಲೂಕಿನಲ್ಲಿ ವಾಣಿ ವಿಲಾಸಸಾಗರ ಜಲಾಶಯದಿಂದ ಮುಳುಗಡೆಯಾಗುವ ಜಮೀನು ಪ್ರದೇಶಗಳನ್ನು ತಡೆಯುವ ಸಲುವಾಗಿ ರೂ.124 ಕೋಟಿಗಳ ಅನುದಾನ, ಜಲಾಶಯದ ಕಾಲುವೆಗಳ ಆಧುನೀಕರಣಕ್ಕಾಗಿ ರೂ.1274 ಕೋಟಿಗಳ ವೆಚ್ಚದಲ್ಲಿ ಯೋಜನೆಯನ್ನು ಸಹ ಸಿದ್ದಪಡಿಸಲಾಗುತ್ತದೆ
–ಡಿ.ಸುಧಾಕರ್, ಸಚಿವ

ಅಪೂರ್ವ ಅವಕಾಶವಾಗಿದೆ. ಸಮಾಜದ ತಳವರ್ಗದ ಮನುಷ್ಯನಿಗೂ ಧ್ವನಿಯಾಗಿ ಸಮತೆ, ಮಮತೆ, ಮಾನವೀಯತೆ ಭ್ರಾತೃತ್ವದ ನೆಲೆಗಟ್ಟಿನಲ್ಲಿ ರೂಪುಗೊಂಡಿರುವ ಇದು ಭಾರತೀಯರ ಪಾಲಿಗೆ ಒಂದು ಕಾವ್ಯವೂ, ಧರ್ಮವೂ, ಜೀವನ ವಿಧಾನವೂ, ಕರ್ತವ್ಯ ಪಥವೂ ಆಗಿ ವರ್ಗಾತೀತ, ಜಾತ್ಯತೀತ, ಧರ್ಮಾತೀತವಾಗಿ ಎಲ್ಲರ ಹಕ್ಕುಗಳನ್ನು ರಕ್ಷಣೆ ಮಾಡುವ ಕರ್ತವ್ಯಗಳನ್ನು ಬೋಧಿಸುತ್ತದೆ ಎಂದು ಸಚಿವ ಡಿ.ಸುಧಾಕರ್ ತಿಳಿಸಿದರು.

ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ: ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆಗೈದ ಚಳ್ಳಕೆರೆ ಪದವಿ ಪೂರ್ವ ಕಾಲೇಜು ಉಪನ್ಯಾಸಕ ಬಿ.ನಾಗರಾಜ್, ಹಿರಿಯೂರು ಪೊಲೀಸ್ ಠಾಣೆ ಸಿ.ಪಿ.ಸಿ ಬಿ.ವೈ.ಸಿದ್ಧಲಿಂಗೇಶ್ವರ, ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆ ಪೊಲೀಸ್ ನಿರೀಕ್ಷಕ ಮುದ್ದುರಾಜ್, ನಾಯಕನಹಟ್ಟಿ ಪೊಲೀಸ್ ನಿರೀಕ್ಷಕ ಶಿವಕುಮಾರ್, ಹೊಳಲ್ಕೆರೆ ಕರಗುಂಟೆ ಗ್ರಾಮ ಆಡಳಿತಾಧಿಕಾರಿ ತಿಪ್ಪೇಸ್ವಾಮಿ, ಮೊಳಕಾಲ್ಮೂರು ಮುರಡಿ ಗ್ರಾಮ ಆಡಳಿತಾಧಿಕಾರಿ ರತ್ನಮ್ಮ, ವಿಕಲಚೇತನರ ಅಭಿವೃದ್ಧಿಗಾಗಿ ಶ್ರಮಿಸಿದ ಶಿಕ್ಷಣ ಇಲಾಖೆಯ ಬಿ.ಐ.ಇ.ಆರ್.ಟಿ ರಾಜೀವ್, ಎ.ಪಿ.ಡಿ ಸರ್ಕಾರೇತರ ಸಂಸ್ಥೆಯ ನಂದಿನಿ, ವಿಜ್ಞಾನ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿಶ್ವ ಮಾನವ ವಿಜ್ಞಾನ ಕಾಲೇಜಿನ ಪ್ರಾಂಶುಪಾಲೆ ಹೆಚ್.ಆರ್. ಸುಧಾ, ಕ್ರೀಡೆಯಲ್ಲಿ ಸಾಧನೆ ಮಾಡಿದ ಅಥ್ಲಿಟ್ ನೌಮನ್ ಅಹಮ್ಮದ್ ಷರೀಫ್, ಪ್ಯಾರ ಅಥ್ಲಿಟ್ ಶ್ರೀ ಹರಿ, ಮೊಳಕಾಲ್ಮೂರು ಆಸ್ಪತ್ರೆ ಪ್ರಸೂತಿ ತಜ್ಞ ಡಾ.ಮಂಜುನಾಥ್ ಅವರಿಗೆ ಗಣರಾಜ್ಯೋತ್ಸವ ಶುಭ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಜಲಾಶಯದ ಕಾಲುವೆಗಳ ಆಧುನೀಕರಣ

ಆಕರ್ಷಕ ಪಥ ಸಂಚಲನ: ಗಣರಾಜ್ಯೋತ್ಸವ ಅಂಗವಾಗಿ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಈ ಬಾರಿ ಪರೇಡ್ ಕಮಾಂಡರ್ ಜಿಲ್ಲಾ ಸಶಸ್ತ್ರ ಪೊಲೀಸ್ ಪಡೆಯ ಆರ್‌ಐ ಎಸ್.ಎಸ್.ಯುವರಾಜ್ ಅವರ ಮುಂದಾಳತ್ವದಲ್ಲಿ ಒಟ್ಟು 25 ತಂಡಗಳಿಂದ ಆಕರ್ಷಕ ಪಥಸಂಚಲನ ಜರುಗಿತು. ಆರೆಸ್‌ಐ ವರಣ್ ನೇತೃತ್ವದಲ್ಲಿ ಸಶಸ್ತ್ರ ಮೀಸಲು ಪಡೆ ತುಕಡಿ, ಪಿಎಸ್‌ಐ ಸುರೇಶ್ ನೇತೃತ್ವದಲ್ಲಿ ನಾಗರೀಕ ಪೊಲೀಸ್ ತುಕಡಿ, ಪ್ರಹ್ಲಾದ್ ನೇತೃತ್ವದಲ್ಲಿ ಗೃಹ ರಕ್ಷಕ ದಳ, ವಸಂತ ಕುಮಾರ್ ನೇತೃತ್ವದಲ್ಲಿ ಅರಣ್ಯ ಇಲಾಖೆ ತುಕಡಿ, ಸರ್ಕಾರಿ ವಿಜ್ಞಾನ ಕಾಲೇಜು ಎನ್‌ಸಿಸಿ, ಸಂತ ಜೋಸೆಫರ ಕಾನ್ವೆಂಟ್ ಪ್ರೌಢಶಾಲೆಯ ಎನ್‌ಸಿಸಿ ಮತ್ತು ಗೈಡ್ಸ್ ತಂಡ, ವಿದ್ಯಾ ವಿಕಾಸ ಆಂಗ್ಲ ಪ್ರೌಢಶಾಲೆ, ವಿದ್ಯಾ ವಿಕಾಸ ಆಂಗ್ಲ ಪ್ರೌಢಶಾಲೆ, ಗೂಳಯ್ಯನಹಟ್ಟಿ ಮೊರಾರ್ಜಿ ದೇಸಾಯಿ ದೇಸಾಯಿ ಬಾಲಕಿಯರು ಹಾಗೂ ಬಾಲಕರ ತಂಡ, ಪಾರ್ಶ್ವನಾಥ, ಎಸ್‌ಜೆಎಂ ಆಂಗ್ಲಪ್ರೌಢಶಾಲೆ, ವಾಸವಿ ಪ್ರೌಢಶಾಲೆ, ಕ್ರೈಸೆಂಟ್ ಪ್ರೌಢಶಾಲೆ ಹಾಗೂ ತರಳುಬಾಳು ಪ್ರೌಢಶಾಲೆ ವಿದ್ಯಾರ್ಥಿಗಳು ಆಕರ್ಷಕ ಪಥ ಸಂಚಲನ ನಡೆಸಿ ಗಮನ ಸೆಳೆದರು.

ಪಥ ಸಂಚಲನಕ್ಕೆ ಬ್ಯಾಂಡ್ ಮಾಸ್ಟರ್ ತಿಪ್ಪೇಶ್ ನಾಯ್ಕ್ ನೇತೃತ್ವದ ಪೊಲೀಸ್ ಬ್ಯಾಂಡ್ ಹಾಗೂ ಅಜಯ್ ನೇತೃತ್ವದ ಸಂತ ಜೋಸೆಫರ ಕಾನ್ವೆಂಟ್ ಕನ್ನಡ ಹಿರಿಯ ಪ್ರಾಥಮಿಕ ಶಾಲೆ, ಡಾನ್ ಬಾಸ್ಕೋ ಪ್ರೌಢಶಾಲೆಯ ಚಂದನಾ ನಾರಾಯಣ್ ಮತ್ತು ಪಲ್ಲಕ್ ಸಮೀರ್, ಅಗಸನಕಲ್ಲು ಸರ್ಕಾರಿ ಪ್ರೌಢಶಾಲೆಯ ಯಶ್ವಂತ್ ನೇತೃತ್ವದ ಬ್ಯಾಂಡ್ ವಾದ್ಯವೃಂದ ಸಾಥ್ ನೀಡಿತು.

ಮನಸೂರೆಗೊಂಡ ಸಾಂಸ್ಕೃತಿಕ ಕಾರ್ಯಕ್ರಮಗಳು: ಗಣರಾಜ್ಯೋತ್ಸವದ ಅಂಗವಾಗಿ ವಿವಿಧ ಶಾಲೆ, ಕಾಲೇಜುಗಳ ವಿದ್ಯಾರ್ಥಿಗಳಿಂದ ದೇಶ ಭಕ್ತಿ ಬಿಂಬಿಸುವ ನೃತ್ಯ ರೂಪಕಗಳನ್ನು ಪ್ರಸ್ತುತ ಪಡಿಸಿದರು. ಚಿತ್ರದುರ್ಗ ನಗರದ ನ್ಯಾಷನಲ್ ಪ್ರೌಢಾಲೆ ಹಾಗೂ ಎಸ್‌ಆರೆಸ್ ಪ್ರೌಢಶಾಲೆಯ ವಿದ್ಯಾರ್ಥಿಗಳು, ಡಾನ್‌ಬಾಸ್ಕೋ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳ ಆಕರ್ಷಕ ನೃತ್ಯರೂಪಕ ನೋಡುಗರ ಮನಸೂರೆಗೊಂಡಿತು.

ಕಾರ್ಯಕ್ರಮದಲ್ಲಿ ಗೋವಿಂದ ಎಂ.ಕಾರಜೋಳ, ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಶಿವಣ್ಣ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ತಹಶೀಲ್ದಾರ್ ಡಾ.ನಾಗವೇಣಿ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

ಮಹಾನಾಯಕ ಡಾ.ಬಿಆರ್ ಅಂಬೇಡ್ಕರ್ ಅವರ ಮೂರ್ತಿ ಮುಂದೆ 76ನೇ ಗಣರಾಜ್ಯೋತ್ಸವ ಆಚರಣೆ

• ಉದಯವಾಹಿನಿ ಕೆಂಭಾವಿ

ಪಟ್ಟಣದ ಮಹಾನಾಯಕ ಡಾ.ಬಿಆರ್ ಅಂಬೇಡ್ಕರ್ ಅವರ ಮೂರ್ತಿ ಮುಂದೆ 76ನೇ ಗಣರಾಜ್ಯೋತ್ಸವವನ್ನು ಆಚರಣೆ ಮಾಡಲಾಯಿತು, ಬಾಬಾ ಸಾಹೇಬ್ ಡಾ. ಬಿಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವುದರ ಜೊತೆಗೆ ಧ್ವಜಾರೋಹಣವನ್ನು ಬಾಲಕೃಷ್ಣ KBJNL ಅವರು ನೆರವೇರಿಸಿದರ.

ಈ ಸಂದರ್ಭದಲ್ಲಿ ನೀಲಮ್ಮ ಬಿ ಮಲ್ಲೆ ಅವರು ನಮ್ಮ ದೇಶದ ಗಣರಾಜ್ಯೋತ್ಸವವನ್ನು ಹಬ್ಬವಾಗಿ ಆಚರಣೆ ಮಾಡಲು ತುಂಬಾ ಖುಷಿಯಾದ ವಿಷಯ ಮತ್ತು ನಮ್ಮ ಸಂವಿಧಾನವನ್ನು ಜಾರಿಗೆ ಬಂದ ದಿನವನ್ನು ಆಚರಣೆ ಮಾಡುವುದೇ ಒಂದು ಹೆಮ್ಮೆಯ ವಿಷಯವಾಗಿದೆ ಯಾಕೆಂದ್ರೆ 108 ಜಾತಿ ಧರ್ಮ ಆಚರಣೆವುಳ್ಳ ದೇಶವಾಗಿದೆ ಸೌಹಾರ್ದತೆಯಿಂದ ಬಾಳುವ ದೇಶ ಏಕೈಕ ದೇಶ ಎಂದರೆ ಅದು ನಮ್ಮ ಭಾರತ ದೇಶ ನಮ್ಮ ಭಾರತದ ಸಂವಿಧಾನ ನೆಮ್ಮದಿಯಿಂದ ಬಾಳುವುದಕ್ಕೆ ಅವಕಾಶ ಮಾಡಿ ಕೊಟ್ಟಿರುತ್ತದೆ ಈ ಸವಿಧಾನ ದಿನದಂದು ಗಣರಾಜ್ಯೋತ್ಸವ ದಿನದಂದು

ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ನೆನಪು ಮಾಡಿಕೊಳ್ಳಬೇಕು ನಾವೆಲ್ಲರೂ ಏಕೆಂದರೆ ಅವರು ಮಾಡಿರುವ ತ್ಯಾಗ ನಾವು ಯಾರು ಮರೆಯಲಾರದಾಗಿ ಉಳಿದಿರುತ್ತದೆ ಎಂದು ಹೇಳಿದರು.

ಶಿವಶರಣಪ್ಪ ಮಾಲಹಳ್ಳಿಕರ್ ಮಲ್ಲಿಕಾರ್ಜುನ ಖರ್ಗೆ ಶಿಕ್ಷಕರು, ಚಂದಪ್ಪ ಮಾಳಳ್ಳಿಕರ್, ಮರೆಪ್ಪ ಮಾಲಹಳ್ಳಿ, ಶಿವಶರಣಪ್ಪ ವಾಡಿ, ದೇವಿದ್ರಪ್ಪ ವಠಾರ, ಧರ್ಮಣ್ಣ ಪತ್ತಾ ್ಯಪುರ, ಬಸವಣ್ಣಪ್ಪ ಆರ್ ಮಾಳಳ್ಳಿಕರ್, ಹುಚ್ಚಪ್ಪ ಕಟ್ಟಿಮನಿ, ತಿಪ್ಪಣ್ಣ ಅಂಬರಕಡ, ಅಯ್ಯಣ ಮಾಳಳ್ಳಿಕರ್, ಮಾಳಪ್ಪ ರಾಜಾಪುರ, ಗುತ್ತಪ್ಪ ಮುದ್ದುನೂರ, ಇತರರು ಇದ್ದರು.

ಮುಂದಿನ ಅಧಿವೇಶನದಲ್ಲಿ 'ಮೈಕ್ರೋ ಫೈನಾನ್ಸ್' ಕಿರುಕುಳ ತಡೆಗೆ ಮಸೂದೆ ಮಂಡನೆ : ರಾಜಣ್ಣ

• ಉದಯವಾಹಿನಿ ಹಾಸನ

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಸಿಬ್ಬಂದಿಗಳ ಕಿರುಕುಳದಿಂದ ಅದೆಷ್ಟೋ ಜಿಲ್ಲೆಗಳಲ್ಲಿ ಜನರು ಊರು ತೊರೆದಿದ್ದಾರೆ. ಅಲ್ಲದೆ ಇದುವರೆಗೂ ರಾಜ್ಯದಲ್ಲಿ ಹಲವು ಜನರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಈ ವಿಚಾರವಾಗಿ ನಿನ್ನೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ ನಡೆಸಿ ಮೈಕ್ರೋ ಫೈನಾನ್ಸ್‌ಗಳಿಗೆ ಖಡಕ್ ಸೂಚನೆ

ವಿಶ್ವದ ಎತ್ತರದ ರೈಲ್ವೆ ಸೇತುವೆ ಮೇಲೆ ವಂದೇ ಭಾರತ್ ರೈಲು ಸಂಚಾರ ಯಶಸ್ವಿ

★ ಜಮ್ಮು ಭಾಗದ ಶ್ರೀಮಾತಾ ವೈಷ್ಣೋದೇವಿ ಕಾತ್ರಾ ನಿಲ್ದಾಣದಿಂದ ಶ್ರೀನಗರಕ್ಕೆ ರೈಲು ಸಂಚಾರ

ಶ್ರೀನಗರ: ಜಗತ್ತಿನ ಅತಿ ಎತ್ತರದ ಚೆನಾಬ್ ರೈಲ್ವೆ ಸೇತುವೆ ಮೇಲೆ ವಂದೇ ಭಾರತ್ ರೈಲು ಪ್ರಯೋಗಾರ್ಥ ಸಂಚಾರವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಆ ಮೂಲಕ ಜಮ್ಮು ಹಾಗೂ ಕಾಶ್ಮೀರದ ನಡುವೆ ನೇರ ರೈಲು ಸಂಪರ್ಕ ಪೂರ್ಣಗೊಂಡಿದೆ.

ಜಮ್ಮು ಭಾಗದ ಶ್ರೀಮಾತಾ ವೈಷ್ಣೋದೇವಿ ಕಾತ್ರಾ ನಿಲ್ದಾಣದಿಂದ ಹೊರಟ ವಂದೇ ಭಾರತ್ ರೈಲು ಚೆನಾಬ್ ನದಿಗೆ ನಿರ್ಮಿಸಲಾದ 1.35 ಕಿ.ಮೀ ಉದ್ದ, 353 ಮೀ. ಎತ್ತರದ ಕಾಮನ ಬಿಲ್ಲುಆಕೃತಿಯ ಸೇತುವೆ ಮುಖಾಂತರ ಹಾದು ಶನಿವಾರ ಬೆಳಗ್ಗೆ 11.30ಕ್ಕೆ ಶ್ರೀನಗರ ತಲುಪಿತು. ರೈಲಿನಲ್ಲಿಆಗಮಿಸಿದ ರೈಲ್ವೆ ಇಲಾಖೆ ಅಧಿಕಾರಿಗಳಿಗೆ ಹೂಗುಚ್ಚ ನೀಡುವ ಮೂಲಕ ರೈಲ್ವೆಸಿಬ್ಬಂದಿ ಬರಮಾಡಿಕೊಂಡರು.

ಬಳಿಕ ಬುಡ್ಗಾಂಗೆ ಪ್ರಯಾಣ ಬೆಳೆಸಿದ ರೈಲು ಪ್ರಾಯೋಗಿಕ ಪರೀಕ್ಷೆ ಪೂರ್ಣಗೊಳಿಸಿತು. ಇತ್ತೀಚೆಗೆ ಗುಜರಾತ್ ವಿಶ್ವವಿದ್ಯಾಲಯದ ಮೈದಾನದಲ್ಲಿನಡೆದ ಹಿಂದೂ ಆಧ್ಯಾತ್ಮಿಕ ಸೇವಾ ಮೇಳವನ್ನು ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ಹಿಂದೂಗಳು ತಮ್ಮ ಗುರುತನ್ನು

ಜಮ್ಮು - ಕಾಶ್ಮೀರದ ನೇರ ರೈಲು ಪೂರ್ಣ

ಬಹಿರಂಗಪಡಿಸಲು ಹಿಂದೇಟು ಹಾಕುತ್ತಿದ್ದ ಕಾಲವೊಂದಿತ್ತು. ಆದರೆ, ಕಳೆದ ಹತ್ತು ವರ್ಷಗಳಲ್ಲಿ ಪರಿಸ್ಥಿತಿ ಬದಲಾಗಿದೆ. ಈಗ 370 ನೇ ವಿಧಿ ಅನ್ವಯ ಜಮ್ಮು ಮತ್ತು ಕಾಶ್ಮೀರಕ್ಕೆ ನೀಡಲಾಗಿದ್ದ ವಿಶೇಷ ಸ್ಥಾನಮಾನ ಹಿಂಪಡೆಯಲಾಗಿದೆ. ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ, ತ್ರಿವಳಿ ತಲಾಕ್ ರದ್ದತಿ, ಏಕರೂಪ ನಾಗರಿಕ ಸಂಹಿತೆ (ಯುಸಿಸಿ) ಜಾರಿ ಸೇರಿದಂತೆ ಬಹುತೇಕ ಎಲ್ಲಾ ಬಾಕಿ ಕೆಲಸಗಳು ಪೂರ್ಣಗೊಂಡಿವೆ,'' ಎಂದು ಹೇಳಿದ್ದಾರೆ. ''ದೇಶದಲ್ಲಿ70 ವರ್ಷಗಳ ಕಾಲ ಆಡಳಿತ ನಡೆಸಿದ್ದ ಯಾವುದೇ ಸರಕಾರಗಳು ಜಾರಿ ಮಾಡದಂತಹ ಹಲವು ಕಾರ್ಯಕ್ರಮಗಳನ್ನು ಮೋದಿ ಅವರು ಕೇವಲ 10 ವರ್ಷಗಳಲ್ಲಿಅನುಷ್ಠಾನಗೊಳಿಸಿದ್ದಾರೆ. ತಮ್ಮ ಮೂರನೇ ಅಧಿಕಾರಾವಧಿಯಲ್ಲಿಯೂ ಅದೇ ಹಾದಿಯಲ್ಲಿಮುಂದುವರಿಯಲಿದ್ದಾರೆ, ಎಂದು ಶಾ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

- ಜಗತ್ತಿನ ಅತಿ ಎತ್ತರದ ಚೆನಾಬ್ ರೈಲ್ವೆ ಸೇತುವೆ ಮೇಲೆ ವಂದೇ ಭಾರತ್ ರೈಲು ಪ್ರಯೋಗಾರ್ಥ ಸಂಚಾರ ಯಶಸ್ವಿ.
- ಜಮ್ಮು ಹಾಗೂ ಕಾಶ್ಮೀರದ ನಡುವೆ ನೇರ ರೈಲು ಸಂಪರ್ಕ ಪೂರ್ಣ.
- ಜಮ್ಮು ಭಾಗದ ಶ್ರೀಮಾತಾ ವೈಷ್ಣೋದೇವಿ ಕಾತ್ರಾ ನಿಲ್ದಾಣದಿಂದ ಶ್ರೀನಗರಕ್ಕೆ ರೈಲು.

ಚಳಿಗಾಲಕ್ಕಾಗಿ ವಿಶೇಷವಾಗಿ ರಚನೆ

ಚಳಿಗಾಳದಲ್ಲಿ ಹೆಚ್ಚಿನ ಹಿಮಪಾತವಾಗುವ ಹಿನ್ನೆಲೆಯಲ್ಲಿಸಂಚಾರಕ್ಕೆ ಅಡ್ಡಿಯಾಗದಂತೆ ವಂದೇ ಭಾರತ್ ರೈಲು ವಿನ್ಯಾಸಗೊಳಿಸಲಾಗಿದೆ. ಹವಾಮಾನಕ್ಕೆ ಅನುಗುಣವಾಗಿ ರೈಲಿಗೆ ವಿಶೇಷ ವೈಶಿಷ್ಟ್ಯ ತಂತ್ರಜ್ಞಾನ ಅಳವಡಿಸಲಾಗಿದ್ದು, ಹೀಟಿಂಗ್ ತಂತ್ರಜ್ಞಾನದಿಂದ ಹಿಮಾಪಾತದ ವೇಳೆ ದಟ್ಟ ಮಂಜು ಸ್ವಯಂಚಾಲಿತವಾಗಿ ಕರಗುತ್ತದೆ. ಪೈಲಟ್ ಮುಂಭಾಗದ ಗಾಜಿನ ಮೇಲೆ ಬೀಳುವ ಹಿಮವನ್ನು ತೆರವುಗೊಳಿಸಲು ಸ್ವಯಂಚಾಲಿನ ವಿಂಡ್‌ಶೀಲ್ಡ್ ಅಳವಡಿಸಲಾಗಿದೆ. ರೈಲ್ವೆ ಸುರಕ್ಷತಾ ಆಯುಕ್ತರು ಸಮ್ಮತಿ ನೀಡಿದ ಬಳಿಕ ಚೆನಾಬ್ ಸೇತುವೆ ಮೇಲೆ ರೈಲ್ವೆ ಸಂಚಾರ ಆರಂಭವಾಗಲಿದೆ.

ಎಲ್ಲಾ ಸೈದ್ಧಾಂತಿಕ ಕಾರ್ಯ ಪೂರ್ಣ

ಸಂವಿಧಾನದ 370ನೇ ವಿಧಿ ಅನ್ವಯ ಜಮ್ಮು ಮತ್ತು ಕಾಶ್ಮೀರಕ್ಕೆ ನೀಡಲಾಗಿದ್ದ ವಿಶೇಷ ಸ್ಥಾನಮಾನ ಹಿಂಪಡೆದಿರುವುದು ಸೇರಿದಂತೆ ಕಳೆದ 10 ವರ್ಷಗಳಲ್ಲಿ ಎಲ್ಲಾ ಸೈದ್ಧಾಂತಿಕ ಕಾರ್ಯಗಳನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರಕಾರವು ಪೂರ್ಣಗೊಳಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಸುಡಾನ್ ಆಸ್ಪತ್ರೆ ಮೇಲೆ ದಾಳಿ, 70 ಜನರ ದುರ್ಮರಣ

ದುಬೈ: ಸುಡಾನ್‌ನ ಮುತ್ತಿಗೆಗೆ ಒಳಗಾದ ಎಲ್ ಫಾಶರ್ ನಗರದಲ್ಲಿನ ಏಕೈಕ ಕ್ರಿಯಾತ್ಮಕ ಆಸ್ಪತ್ರೆಯ ಮೇಲೆ ನಡೆದ ದಾಳಿಯಲ್ಲಿ ಸುಮಾರು 70 ಜನರು ಸಾವನ್ನಪ್ಪಿದ್ದಾರೆ ಎಂದು ವಿಶ್ವ ಆರೋಗ್ಯ ಸಂಸ್ಥೆಯ ಮುಖ್ಯಸ್ಥರು ತಿಳಿಸಿದ್ದಾರೆ. ಸಂಸ್ಥೆಯ ಮಹಾನಿರ್ದೇಶಕ ಟೆಡ್ರೊಸ್ ಅಧಾನೊಮ್ ಘೆಬ್ರೆಯೆಸಸ್ ಸಾಮಾಜಿಕ ವೇದಿಕೆ ಎಕ್ಸ್‌ನ ಪೋಸ್ಟ್‌ನಲ್ಲಿ ಈ ಅಂಕಿ ಅಂಶವನ್ನು ನೀಡಿದ್ದಾರೆ.

ಉತ್ತರ ಡಾರ್ಫರ್ ಪ್ರಾಂತ್ಯದ ರಾಜಧಾನಿಯಲ್ಲಿ ಅಧಿಕಾರಿಗಳು ಮತ್ತು ಇತರರು ಶನಿವಾರ ಇದೇ ಅಂಕಿಅಂಶವನ್ನು ಉಲ್ಲೇಖಿಸಿದ್ದಾರೆ, ಆದರೆ ಘೆಬ್ರೆಯೆಸಸ್ ಅಪಘಾತದ ಸಂಖ್ಯೆಯನ್ನು ಒದಗಿಸುವ ಮೊದಲ ಅಂತರರಾಷ್ಟ್ರೀಯ ಮೂಲವಾಗಿದೆ.

ಸುಡಾನ್‌ನ ಎಲ್ ಫಾಶರ್‌ನಲ್ಲಿರುವ ಸೌದಿ ಆಸ್ಪತ್ರೆಯ ಮೇಲೆ ನಡೆದ ಭಯಾನಕ ದಾಳಿಯು 19 ಗಾಯಗಳಿಗೆ ಕಾರಣವಾಯಿತು ಮತ್ತು ರೋಗಿಗಳು

ಮತ್ತು ಸಹಚರರಲ್ಲಿ 70 ಸಾವುಗಳಿಗೆ ಕಾರಣವಾಯಿತು ಎಂದು ಅವರು ಬರೆದಿದ್ದಾರೆ. ದಾಳಿಯ ಸಮಯದಲ್ಲಿ ಆಸ್ಪತ್ರೆಯು ರೋಗಿಗಳಿಂದ ತುಂಬಿ ತುಳುಕುತ್ತಿತ್ತು.

ದಾಳಿಯನ್ನು ಪ್ರಾರಂಭಿಸಿದವರು ಯಾರು ಎಂದು ಅವರು ಗುರುತಿಸಲಿಲ್ಲ, ಆದರೂ ಸ್ಥಳೀಯ ಅಧಿಕಾರಿಗಳು ದಾಳಿಗೆ ಬಂಡುಕೋರ ಕ್ಷಿಪ್ರ ಬೆಂಬಲ ಪಡೆಯನ್ನು ದೂಷಿಸಿದ್ದಾರೆ.

ಆರ್‌ಎಸ್‌ಎಫ್ ಈ ಆರೋಪವನ್ನು ತಕ್ಷಣವೇ ಅಂಗೀಕರಿಸಲಿಲ್ಲ, ಆದರೆ ಇತ್ತೀಚಿನ ದಿನಗಳಲ್ಲಿ ಎಲ್ ಫಾಶರ್‌ಗೆ ಬೆದರಿಕೆ ಹಾಕುತ್ತಿದೆ ಎಂದು ವರದಿಯಾಗಿದೆ.

30 ಉಗ್ರರನ್ನು ಹತ್ಯೆ ಮಾಡಿದ ಪಾಕ್ ಸೇನೆ

ಪೇಶಾವರ: ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ನಡೆದ ಮೂರು ಪ್ರತ್ಯೇಕ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯಲ್ಲಿ 30 ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದೆ ಎಂದು ಸೇನೆ ತಿಳಿಸಿದೆ. ಲಕ್ಕಿ ಮಾರ್ವತ್, ಕರಕ್ ಮತ್ತು ಖೈಬರ್ ಜಿಲ್ಲೆಗಳಲ್ಲಿ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳನ್ನು ನಡೆಸಲಾಯಿತು.

ಲಕ್ಕಿ ಮಾರ್ವತ್ ಜಿಲ್ಲೆಯಲ್ಲಿ 18 ಭಯೋತ್ಪಾದಕರನ್ನು ನರಕಕ್ಕೆ ಕಳುಹಿಸಿದರೆ, ಎಂಟು ಮಂದಿ ಕರಕ್‌ನಲ್ಲಿ ಕೊಲ್ಲಲ್ಪಟ್ಟರು ಎಂದು ಸೇನೆಯು ಹೇಳಿಕೆಯಲ್ಲಿ ತಿಳಿಸಿದೆ. ಲಕ್ಕಿ ಮಾರ್ವತ್ ಎನ್‌ಕೌಂಟರ್‌ನಲ್ಲಿ ಆರು ಭಯೋತ್ಪಾದಕರು ಗಾಯಗೊಂಡಿದ್ದಾರೆ ಎಂದು ಮಿಲಿಟರಿ ತಿಳಿಸಿದೆ.

ಖೈಬರ್ ಜಿಲ್ಲೆಯ ಬಾಗ್ ಪ್ರದೇಶದಲ್ಲಿ ನಡೆದ ಮತ್ತೊಂದು ಎನ್‌ಕೌಂಟರ್‌ನಲ್ಲಿ ಭದ್ರತಾ ಪಡೆಗಳು ರಿಂಗ್ ನಾಯಕರಾದ ಅಜೀಜ್ ಉರ್ ರೆಹಮಾನ್ ಅಕಾ ಕ್ವಾರಿ ಇಸಾಯಿಲ್ ಮತ್ತು ಮುಖ್ಲಿಸ್ ಸೇರಿದಂತೆ ನಾಲ್ವರು ಭಯೋತ್ಪಾದಕರನ್ನು

ಹೊಡೆದುರುಳಿಸಿದ್ದು, ಇಬ್ಬರು ಭಯೋತ್ಪಾದಕರು ಗಾಯಗೊಂಡಿದ್ದಾರೆ ಎಂದು ಅದು ಹೇಳಿದೆ.

ಅಧ್ಯಕ್ಷ ಜರ್ದಾರಿ ಅವರು 30 ಭಯೋತ್ಪಾದಕರ ಹತ್ಯೆಯನ್ನು ಮಹತ್ವದ ಸಾಧನೆ ಎಂದು ಶ್ಲಾಘಿಸಿದರು ಮತ್ತು ಭಯೋತ್ಪಾದನೆಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವವರೆಗೆ ಭದ್ರತಾ ಪಡೆಗಳ ಕಾರ್ಯಾಚರಣೆಯನ್ನು ಮುಂದುವರಿಸಲಾಗುವುದು ಎಂದು ಪುನರುಚ್ಚರಿಸಿದರು. ಪ್ರಧಾನಿ ಶೆಹಬಾಜ್ ಅವರು ಭದ್ರತಾ ಪಡೆಗಳಿಗೆ ರಾಷ್ಟ್ರದ ಅಚಲ

ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯಲ್ಲಿ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿಕೆ ತಿಳಿಸಿದೆ. ಅಧ್ಯಕ್ಷ ಆಸಿಫ್ ಅಲಿ ಜರ್ದಾರಿ ಮತ್ತು ಪ್ರಧಾನಿ ಶೆಹಬಾಜ್ ಷರೀಫ್ ಪ್ರತ್ಯೇಕ ಹೇಳಿಕೆಗಳಲ್ಲಿ ಲಕ್ಕಿ ಮಾರ್ವತ್, ಕರಕ್ ಮತ್ತು ಖೈಬರ್ ಜಿಲ್ಲೆಗಳಲ್ಲಿ ತಮ ಯಶಸ್ವಿ ಕಾರ್ಯಾಚರಣೆಗಾಗಿ ಭದ್ರತಾ ಪಡೆಗಳನ್ನು ಶ್ಲಾಘಿಸಿದ್ದಾರೆ.

ಬೆಂಬಲವನ್ನು ಪುನರುಚ್ಚರಿಸಿದರು, ಎಲ್ಲಾ ರೀತಿಯ ಭಯೋ ತ್ಪಾದನೆಯನ್ನು ನಿರ್ಮೂಲನೆ ಮಾಡಲು ಪಾಕಿ ಸ್ತಾನವು ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಒತ್ತಿ ಹೇಳಿದರು.

ದ್ವೇಷಪೂರಿತ ಅಜೆಂಡಾದಿಂದ ಬಿಜೆಪಿ ಸಮಾಜವನ್ನು ವಿಭಜಿಸುತ್ತಿದೆ

ನವದೆಹಲಿ: ಬಿಜೆಪಿ ನೇತೃತ್ವದ ಕೇಂದ್ರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ಧಾರ್ಮಿಕ ಮೂಲಭೂತವಾದದಲ್ಲಿ ಮುಳುಗಿರುವ ದ್ವೇಷಪೂರಿತ ಅಜೆಂಡಾವು ಕಳೆದ 10 ವರ್ಷಗಳಿಂದ ಸಮಾಜವನ್ನು ವಿಭಜಿಸಲು ಪ್ರಯತ್ನಿಸುತ್ತಿದೆ ಮತ್ತು ಪ್ರತಿ ಪವಿತ್ರ ಸಂವಿಧಾನದ ತತ್ವವನ್ನು ಸರ್ವಾಧಿಕಾರಿ ಆಡಳಿತದಿಂದ ತುಂಡುಗಳಾಗಿ ಚೂರುಚೂರು ಮಾಡಲಾಗುತ್ತಿದೆ ಎಂದಿದ್ದಾರೆ.

ಕೇಂದ್ರದ ವಿರುದ್ಧ ತೀವ್ರ ವಾಗ್ದಾಳಿ

ಆಡಳಿತಾರೂಢ ಭಾರತೀಯ ಜನತಾ ಪಕ್ಷವು ಹಿಂದುಳಿದ ಯುವಕರನ್ನು ರಾಷ್ಟ್ರೀಯತೆ ಮತ್ತು ಧಾರ್ಮಿಕ ಪಾರಮ್ಯದ ಧ್ವಜವನ್ನು ಹಿಡಿಯುವಂತೆ ಮಾಡುವ ಮೂಲಕ ಹುಸಿ-ರಾಷ್ಟ್ರೀಯತೆಯನ್ನು ಅಭ್ಯಾಸ ಮಾಡಿಸುತ್ತಿದೆ, ಆದರೆ ಅವರಿಗೆ ಉದ್ಯೋಗವನ್ನು ಪಡೆಯಲು ಏನನ್ನೂ ಮಾಡುತ್ತಿಲ್ಲ ಎಂದು ತಿಳಿಸಿದ್ದಾರೆ. 76 ನೇ ಗಣರಾಜ್ಯೋತ್ಸವದಂದು ರಾಷ್ಟ್ರಕ್ಕೆ ನೀಡಿದ ಸಂದೇಶದಲ್ಲಿ, ಖರ್ಗೆ ಅವರು ಸಂವಿಧಾನದ ವಿಚಾರಗಳು ಮತ್ತು ಆದರ್ಶಗಳಾದ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವವನ್ನು ಜನರು ಸಂರಕ್ಷಿಸಲು ಮತ್ತು ರಕ್ಷಿಸಲು ಇದು ಸುಸಮಯವಾಗಿದೆ ಎಂದು ಹೇಳಿದರು. ಆಡಳಿತ ಪಕ್ಷವು ದಶಕಗಳಿಂದ ಎಚ್ಚರಿಕೆಯಿಂದ ನಿರ್ಮಿಸಲಾದ ಭಾರತದ ಸಂಸ್ಥೆಗಳ ನಿರಂತರ ಅವನತಿಯನ್ನು ಬಿಚ್ಚಿಟ್ಟಿದೆ ಎಂದು ಕಾಂಗ್ರೇಸ್ ಮುಖ್ಯಸ್ಥರು ಆರೋಪಿಸಿದ್ದಾರೆ. ಸ್ವಾಯತ್ತ ಸಂಸ್ಥೆಗಳಲ್ಲಿ ರಾಜಕೀಯ ಹಸ್ತಕ್ಷೇಪವು ರೂಢಿಯಾಗಿದೆ. ಅವರ ಸ್ವಾತಂತ್ರ್ಯದ ಮೇಲೆ ಹಿಡಿತ ಸಾಧಿಸುವುದು ಅಧಿಕಾರದ ಗುಣವಾಗಿ ನೋಡಲಾಗುತ್ತಿದೆ. ಫೆಡರಲಿಸಂ ಅನ್ನು ಪ್ರತಿದಿನವೂ ತುಳಿಯಲಾಗುತ್ತಿದೆ ಮತ್ತು ಪ್ರತಿಪಕ್ಷಗಳ ಆಡಳಿತದ ರಾಜ್ಯಗಳ ಹಕ್ಕುಗಳನ್ನು ಮೊಟಕುಗೊಳಿಸಲಾಗುತ್ತಿದೆ ಎಂದು ಅವರು ಹೇಳಿದರು.

ನಮ ಸಂಸ್ಥಾಪಕರು ಪ್ರತಿಪಾದಿಸಿದ ಮೌಲ್ಯಗಳನ್ನು ನಾವು ಎತ್ತಿಹಿಡಿಯುತ್ತೇವೆ. ಸಂವಿಧಾನವನ್ನು ರಕ್ಷಿಸಲು ಎಲ್ಲಾ ತ್ಯಾಗಕ್ಕೂ ಸಿದ್ಧರಾಗಿರಿ. ಇದು ನಮ ಪೂರ್ವಜರಿಗೆ ನಿಜವಾದ ಗೌರವವಾಗಿದೆ ಎಂದು ಖರ್ಗೆ ಹೇಳಿದರು. ಸಂವಿಧಾನದ ಮೇಲೆ ದೇಶವು ಹೇಗೆ ನಿರಂತರ ದಾಳಿಗಳಿಗೆ ಸಾಕ್ಷಿಯಾಗುತ್ತಿದೆ ಎಂಬುದನ್ನು ಪ್ರತಿಬಿಂಬಿಸಲು ಇದು ಸಮಯವಾಗಿದೆ ಎಂದು ಅವರು ಹೇಳಿದರು.

ಆಡಳಿತ ಸರ್ಕಾರದ ದಬ್ಬಾಳಿಕೆಯ ಪ್ರವೃತ್ತಿ ಯಿಂದಾಗಿ ಸಂಸತ್ತಿನ ಕಾರ್ಯಚಟುವಟಿಕೆಯು ಭಾರಿ ಹಿನ್ನಡೆಯನ್ನು ಕಂಡಿದೆ ಎಂದು ಖರ್ಗೆ ಆರೋಪಿಸಿದರು.

ಸೈಫ್ ಅಲಿಖಾನ್ ಮೇಲೆ ಹಲ್ಲೆ ಪ್ರಕರಣದಲ್ಲಿ ಹೊಸ ಟ್ವಿಸ್ಟ್

ಮುಂಬೈ: ನಟ ಸೈಫ್ ಅಲಿಖಾನ್ ಅವರ ಮೇಲೆ ಕಳ್ಳತನ ಯತ್ನ ಮತ್ತು ಚಾಕು ದಾಳಿಯ ನಂತರ ಅವರ ನಿವಾಸದಿಂದ ಸಂಗ್ರಹಿಸಲಾದ 19 ಸೆಟ್ ಬೆರಳಚ್ಚುಗಳು ಆರೋಪಿ ಶರೀಫುಲ್ ಇಸ್ಲಾಂನ ಬೆರಳಚ್ಚುಗಳಿಗೆ ಹೊಂದಿಕೆಯಾಗುತ್ತಿಲ್ಲ ಎಂದು ಹೈ ಪೊಫೈಲ್ ಪ್ರಕರಣದ ತನಿಖೆಯಿಂದ ತಿಳಿದುಬಂದಿದೆ.

ಮೂಲಗಳ ಪ್ರಕಾರ, ಮುಂಬೈ ಪೊಲೀಸರು ಖಾನ್ ಅವರ ಮನೆಯಲ್ಲಿ ಪತ್ತೆಯಾದ ಬೆರಳಚ್ಚುಗಳನ್ನು ರಾಜ್ಯ ಅಪರಾಧ ತನಿಖಾ ಇಲಾಖೆಯ (ಸಿಐಡಿ) ಫಿಂಗರ್‌ಪ್ರಿಂಟ್ ಬ್ಯೂರೋಗೆ ಕಳುಹಿಸಿದ್ದಾರೆ. ಸಿಸ್ಟಮ್-ರಚಿಸಿದ ವರದಿಯು ಷರೀಫುಲ್ ಅವರ ಮುದ್ರಣಗಳಿಗೆ ಹೊಂದಿಕೆಯಾಗುವುದಿಲ್ಲ ಎಂದು ತಿಳಿದುಬಂದಿದೆ.

ಪರೀಕ್ಷೆಯ ಫಲಿತಾಂಶ ನೆಗೆಟಿವ್ ಎಂದು ಮುಂಬೈ ಪೊಲೀಸರಿಗೆ ಸಿಐಡಿ ಮಾಹಿತಿ ನೀಡಿದೆ ಎಂದು ಮೂಲಗಳು ತಿಳಿಸಿವೆ. ಮುಂಬೈ ಪೊಲೀಸರು ಹೆಚ್ಚಿನ ಮಾದರಿಗಳನ್ನು ಹೆಚ್ಚಿನ ಪರೀಕ್ಷೆಗೆ ಕಳುಹಿಸಿದ್ದಾರೆ. 54 ವರ್ಷದ ನಟ ಜನವರಿ 15 ರಂದು ತನ್ನ ಮನೆಗೆ ಒಳನುಗ್ಗಿದ ನಂತರ ಆಘಾತಕಾರಿ ದಾಳಿಯಲ್ಲಿ



ಆರು ಇರಿತದ ಗಾಯಗಳನ್ನು ಅನುಭವಿಸಿದರು. ಖಾನ್ ಒಳನುಗ್ಗುವವರನ್ನು ಎದುರಿಸಿದಾಗ ಅವರ ಮೇಲೆ ಚಾಕುವಿನಿಂದ ದಾಳಿ ಮಾಡಲಾಗಿತ್ತು. ಖಾನ್ ಅನುಭವಿಸಿದ ಇರಿತದ ಗಾಯಗಳಲ್ಲಿ ಒಂದು ಅವರ ಬೆನ್ನುಮೂಳೆಯ ಮೇಲಿತ್ತು. ಒಳನುಗ್ಗಿದವನು ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದ.

ಚಾಕುವಿನ ಗಾಯಗಳಲ್ಲಿ ಒಂದು ನಟನ ಬೆನ್ನುಮೂಳೆಯ ಮೇಲೆ ಮತ್ತು ಅವರ ಬೆನ್ನು ಮೂಳೆಯ ದ್ರವವು ಸೋರಿಕೆಗೆ ಕಾರಣವಾ ಗಿದೆ ಎಂದು ವೈದ್ಯರು ಹೇಳಿದ್ದಾರೆ.

ಅವರ ಬೆನ್ನುಹುರಿಯಿಂದ ಚಾಕು ಕೇವಲ 2 ಮಿಮೀ ದೂರದಲ್ಲಿದೆ ಎಂದು ವರದಿಯಾಗಿದೆ.

ಪದ್ಮ ಪ್ರಶಸ್ತಿಗಳಲ್ಲಿ ಆಂಧ್ರ ಕಡೆಗಣನೆಗೆ ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಅತೃಪ್ತಿ

ಹೈದರಾಬಾದ್: ಪದ್ಮ ಪ್ರಶಸ್ತಿಗೆ ರಾಜ್ಯ ಸರ್ಕಾರ ಶಿಫಾರಸು ಮಾಡಿದ ಹೆಸರುಗಳನ್ನು ಕೇಂದ್ರ ಪರಿಗಣನೆಗೆ ತೆಗೆದುಕೊಳ್ಳದಿರುವ ಬಗ್ಗೆ ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅತೃಪ್ತಿ ವ್ಯಕ್ತಪಡಿಸಿದ್ದಾರೆ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆಯಲು ನಿರ್ಧರಿಸಿದ್ದಾರೆ.

ಸಚಿವರು ಮತ್ತು ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಮುಖ್ಯಮಂತ್ರಿಗಳು ಈ ತಾರತಮ್ಯವು ತೆಲಂಗಾಣ ಜನತೆಗೆ ಮಾಡಿದ ಅವಮಾನವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪದ್ಮ ಪ್ರಶಸ್ತಿಯಲ್ಲಿ ತೆಲಂಗಾಣಕ್ಕೆ ಆಗಿರುವ ಅನ್ಯಾಯದ ಬಗ್ಗೆ ಪ್ರಧಾನಿ ಮೋದಿಗೆ ಪತ್ರ ಬರೆಯಲು ರೆಡ್ಡಿ ಯೋಚಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಜಾನಪದ ಗಾಯಕ ಗದ್ದರ್ (ಪದ್ಮ ವಿಭೂಷಣ), ಶಿಕ್ಷಣ ತಜ್ಞ ಚುಕ್ಕಾ ರಾಮಯ್ಯ (ಪದ್ಮಭೂಷಣ), ಕವಿ ಅಂದೇ ಶ್ರೀ (ಪದ್ಮಭೂಷಣ), ಕವಿ ಮತ್ತು ಗಾಯಕ ಗೋರಟಿ ವೆಂಕಣ್ಣ (ಪದ್ಮಶ್ರೀ), ಕವಿ ಮತ್ತು ಇತಿಹಾಸಕಾರ ಜಯಧೀರ್ ತಿರುಮಲ ಅವರ ಹೆಸರನ್ನು ರಾಜ್ಯ ಸರ್ಕಾರ ಶಿಫಾರಸು ಮಾಡಿದೆ.

ಸಾಮರಸ್ಯದಿಂದ ಬದುಕಲು ಒಗ್ಗಟ್ಟು ಮುಖ್ಯ: ಮೋಹನ್ ಭಾಗವತ್

ಮುಂಬೈ: ಭಿನ್ನಾಭಿಪ್ರಾಯಗಳನ್ನು ಗೌರವಿಸಬೇಕು ಮತ್ತು ಸಾಮರಸ್ಯದಿಂದ ಬದುಕಲು ಒಗ್ಗಟ್ಟು ಮುಖ್ಯ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ.

ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಭಿವಂಡಿ ಪಟ್ಟಣದ ಕಾಲೇಜಿನಲ್ಲಿ ನಡೆದ ಗಣರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಆಚರಣೆಯ ಜೊತೆಗೆ, ಗಣರಾಜ್ಯೋತ್ಸವವು ರಾಷ್ಟ್ರದ ಕಡೆಗೆ ನಮ ಜವಾಬ್ದಾರಿಗಳನ್ನು ನೆನಪಿಸಿಕೊಳ್ಳುವ ಸಂದರ್ಭವಾಗಿದೆ ಎಂದು ಅವರು ಹೇಳಿದರು.



ವೈವಿಧ್ಯತೆಯ ಸಮಸ್ಯೆಯನ್ನು ಉದ್ದೇಶಿಸಿ ಮಾತನಾಡಿದ ಭಾಗವತ್ ಅವರು,

ಸ್ನೀಕ್ ಪೀಕ್ ಟೀಸರ್ ಬಿಡುಗಡೆ

ಮದ್ಯ ವ್ಯಸನದ ಕಹಾನಿಯನ್ನೇ ಕೇಂದ್ರವಾಗಿ ಇಟ್ಟುಕೊಂಡು 'ಪಿವೋಟ್' ಸಿನಿಮಾವನ್ನು ಮಾಡಲಾಗಿದೆ. ಕಾರ್ತಿಕ್ ರಾಜನ್ ನಿರ್ದೇಶನ ಮಾಡಿದ ಈ ಚಿತ್ರದಲ್ಲಿ ಅಶ್ವಿನಿ ಚಾವ್ರೆ, ಎಂ.ಎನ್. ಲಿಖಿತ್ ಜೋಡಿಯಾಗಿ ನಟಿಸಿದ್ದಾರೆ. ಸ್ನೀಕ್ ಪೀಕ್ ಮೂಲಕ ಕುತೂಹಲ ಮೂಡಿಸಲಾಗುತ್ತಿದೆ. ಈ ಸಿನಿಮಾದ ಬಗ್ಗೆ ಇಲ್ಲಿದೆ ಒಂದಷ್ಟು ಮಾಹಿತಿ.

ಅತಿಯಾಗಿ ಕುಡಿತದ ಚಟಕ್ಕೆ ಒಳಗಾದವರನ್ನು ಪಿವೋಟ್ ಅಂತಾರೆ. ಈಗ ಅದೇ ಶೀರ್ಷಿಕೆಯಲ್ಲಿ ಒಂದು ಸಿನಿಮಾ ಮೂಡಿಬರುತ್ತಿದೆ. ಮದ್ಯವ್ಯಸನಕ್ಕೆ ದಾಸರಾದ ವ್ಯಕ್ತಿಗಳನ್ನು ಅದರಿಂದ ಹೊರಗೆ ತರುವುದು ಸುಲಭವಲ್ಲ, ಈ ರೀತಿಯ ಕಥೆಯನ್ನೇ ಇಟ್ಟುಕೊಂಡು 'ಪಿವೋಟ್' ಸಿನಿಮಾವನ್ನು ಮಾಡಲಾಗಿದೆ. ಹೊಸ ನಿರ್ದೇಶಕ ಕಾರ್ತಿಕ್ ರಾಜನ್ ಅವರು ಈ ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ಈ ಚಿತ್ರದಲ್ಲಿ ಎಂ.ಎನ್. ಲಿಖಿತ್ ಮತ್ತು ಮರಾಠಿ ಮೂಲದ ನಟಿ ಅಶ್ವಿನಿ ಚಾವ್ರೆ ಅವರು ಪ್ರಮುಖ ಪಾತ್ರಗಳನ್ನು ನಿಭಾಯಿಸಿದ್ದಾರೆ. 'ಪಿವೋಟ್' ಸಿನಿಮಾಗೆ ಕೊನೆಯ ಹಂತದ ಕೆಲಸಗಳು ನಡೆಯುತ್ತಿವೆ. ಗಣರಾಜ್ಯೋತ್ಸವದ ಪ್ರಯುಕ್ತ ಭಾನುವಾರ ಸಂಜೆ ಈ ಸಿನಿಮಾದ ಸ್ನೀಕ್ ಪೀಕ್ ಟೀಸರ್ ರಿಲೀಸ್ ಆಗುತ್ತಿದೆ. ಈ ಸಿನಿಮಾದ ಕಾನ್ಸೆಪ್ಟ್ ಬಗ್ಗೆ ಚಿತ್ರತಂಡ ಮಾಹಿತಿ ಹಂಚಿಕೊಂಡಿದೆ. ಸಾಮಾನ್ಯವಾಗಿ ಕುಡುಕರಿಗೆ ಎಲ್ಲಾರೂ ಬೈಯುತ್ತಾರೆ. ಹಾಗಿದ್ದರೂ ಅಂಥವರ ಕಥೆಯನ್ನೇ ಕೇಂದ್ರವಾಗಿ ಇಟ್ಟುಕೊಂಡ ಸಿನಿಮಾ ಮಾಡಲಾಗಿದೆ. 'ಮದ್ಯವ್ಯಸನಿಗಳನ್ನು ಬಯ್ಯುವುದಷ್ಟೇ ನಮಗೆ ಗೊತ್ತು. ಆದರೆ ಆತ ಯಾಕೆ ಆ ರೀತಿ ಆದ ಅದಕ್ಕೆ ಕಾರಣವಾದವರು ಯಾರು ಅಂತ ನಾವು ಒಮ್ಮೆಯೂ ಯೋಚಿಸಲ್ಲ. ಆ ಪ್ರಶ್ನೆಗಳ ಹಿಂದೆ ಕಥೆಗಳು ಇರುತ್ತವೆ. ಈ ಥರದ ಹಲವು ವಿಷಯಗಳನ್ನು ಇಟ್ಟುಕೊಂಡು ಸಿನಿಮಾ ಮಾಡಲಿದೆ ಎಂದಿದ್ದಾರೆ ಚಿತ್ರತಂಡದವರು. ಡೈರೆಕ್ಟರ್ ಕಾರ್ತಿಕ್ ರಾಜನ್ ಅವರು ಈ ಸಿನಿಮಾಗೆ ಕಥೆ, ಚಿತ್ರಕಥೆ ಬರೆದಿದ್ದಾರೆ. ಹಲವು ನಿರ್ದೇಶಕರ ಜೊತೆ ಕೆಲಸ ಮಾಡಿದ ಅನುಭವ ಹೊಂದಿರುವ ಅವರು ಈಗಾಗಲೇ 2 ಕಿರುಚಿತ್ರಗಳಿಗೆ ನಿರ್ದೇಶನ ಮಾಡಿದ್ದಾರೆ. ಈಗ 'ಪಿವೋಟ್' ಸಿನಿಮಾವನ್ನು ತೆರೆಗೆ ತರುತ್ತಿದ್ದಾರೆ. ಈ ಮೊದಲು ಸಿನಿಮಾದ ಫಸ್ಟ್ ಲುಕ್ ಬಿಡುಗಡೆ ಆಗಿತ್ತು. ಈಗ ಸ್ನೀಕ್ ಪೀಕ್ ಮೂಲಕ ಸಿನಿಮಾದ ಕೌತುಕವನ್ನು ಹೆಚ್ಚಿಸಲು ಹೊರಟಿದೆ ಚಿತ್ರತಂಡ.

ಆತ ಯಾಕೆ ಆ ರೀತಿ ಆದ?

ಪದ್ಮಭೂಷಣ ಪ್ರಶಸ್ತಿ ಕನ್ನಡಿಗರಿಗೆ ಅರ್ಪಣೆ

ಸ್ಯಾಂಡಲ್‌ವುಡ್ ನಟ ಅನಂತ್‌ನಾಗ್ ಅವರು ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿ, ಈ ಪ್ರಶಸ್ತಿ ಬಂದಿರೋದಕ್ಕೆ ಅನಂತ್‌ನಾಗ್ ಸಂತಸ ವ್ಯಕ್ತಪಡಿಸಿದ್ದಾರೆ. ಪದ್ಮಭೂಷಣ ಪ್ರಶಸ್ತಿಯನ್ನು ಕನ್ನಡಿಗರಿಗೆ ಅರ್ಪಿಸುತ್ತೇನೆ ಎಂದಿದ್ದಾರೆ. ಧನ್ಯವಾದಗಳು ಈ ಪ್ರಶಸ್ತಿ ಸಿಕ್ಕಿರೋದಕ್ಕೆ ನನಗೆ ಸಂತೋಷವಾಗಿದೆ. ವಿಶೇಷವಾಗಿ ಕನ್ನಡಿಗರು ಈ ಪ್ರಶಸ್ತಿ ನನಗೆ ಬರಬೇಕು ಅಂತ ಇಷ್ಟಪಟ್ಟಿದರು. ನಮ್ಮ ದೇಶದಲ್ಲಿ ಹಿಂದಿನಿಂದ ಪದ್ಮ ಪ್ರಶಸ್ತಿ ಕೊಡುವ ವ್ಯವಸ್ಥೆ ಬೇರೆ ಇತ್ತು. ಪಿಎಂ ಅವರು 3 ವರ್ಷಗಳ ಹಿಂದೆ ಪದ್ಮ ಪ್ರಶಸ್ತಿಯಲ್ಲಿ ಸಾರ್ವಜನಿಕರು ಭಾಗಿಯಾಗಬೇಕು ಅಂತ ಘೋಷಣೆ ಮಾಡಿದ್ದರು. ಬಳಿಕ ಕನ್ನಡಿಗರು ನನ್ನ ಹೆಸರನ್ನು ಸೂಚಿಸಿದ್ದರು. ಆ ವರ್ಷ ನನಗೆ ಪ್ರಶಸ್ತಿ ಬರಲಿಲ್ಲ. 3 ವರ್ಷಗಳಿಂದ ಹೀಗೆ ಆಗಿತ್ತು ಎಂದು ಅನಂತ್‌ನಾಗ್ ಮಾತನಾಡಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ಕನ್ನಡಿಗರು ನನಗೆ ಪದ್ಮ ಪ್ರಶಸ್ತಿ ಬರಲಿ ಅಂತಾ ಅಭಿಯಾನ ನಡೆಸಿದ್ದರು. ಅಭಿಮಾನಿಗಳಿಗೆ ಈಗ ಸಂತೋಷವಾಗಿರೋದು ನನಗೂ ಸಂತೋಷವಾಗಿದೆ. ಪ್ರಶಸ್ತಿಯನ್ನು ಕನ್ನಡ ಪ್ರೇಕ್ಷಕರಿಗೆ, ಅಭಿಮಾನಿಗಳಿಗೆ ಅರ್ಪಿಸುತ್ತೇನೆ.

ನನಗೂ ಸಂತೋಷ

ಶಿವರಾಜ್‌ಕುಮಾರ್‌ಗೆ ಅದ್ಧೂರಿ ಸ್ವಾಗತ

ಮಹಾಮಾರಿ ಕ್ಯಾನ್ಸರ್‌ಗೆ ತುತ್ತಾಗಿ ಅಮೆರಿಕಾದ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದ ನಟ ಶಿವರಾಜ್ ಕುಮಾರ್ ಇದೀಗ ಸಂಪೂರ್ಣ ಚೇತರಿಸಿಕೊಂಡು ತವರಿಗೆ ಆಗಮಿಸಿದ್ದು ಅಭಿಮಾನಿಗಳು ಅದ್ಧೂರಿ ಸ್ವಾಗತ ಕೋರಿ ಬರಮಾಡಿಕೊಂಡಿದ್ದಾರೆ. ಕರುನಾಡ ಚಕ್ರವರ್ತಿ ಶಿವರಾಜ್ ಕುಮಾರ್ ಅವರನ್ನು ಬರಮಾಡಿಕೊಳ್ಳಲು ಬೆಳ್ಳಂಬೆಳಗ್ಗೆಯೇ ವಿಮಾನ ನಿಲ್ದಾಣದ ಸುತ್ತಮುತ್ತ ಅಭಿಮಾನಿಗಳು ಸೇರಿ ವಿಮಾನ ನಿಲ್ದಾಣದಲ್ಲೇ ಅದ್ಧೂರಿ ಸ್ವಾಗತಕ್ಕೆ ಅಭಿಮಾನಿಗಳು ತಯಾರಿ ಮಾಡಿಕೊಂಡಿದ್ದರು. ಗಣರಾಜ್ಯೋತ್ಸವದ ಹಿನ್ನಲೆಯಲ್ಲಿ ವಿಮಾನ ನಿಲ್ದಾಣದಲ್ಲಿ ಹೈಅಲರ್ಟ್ ಘೋಷಿಸಲಾಗಿದೆ. ಹೀಗಾಗಿ ವಿಮಾನ ನಿಲ್ದಾಣದಲ್ಲಿ ಯಾವುದೇ ರೀತಿಯ ಸಂಭ್ರಮಾಚರಣೆಗೆ, ಸ್ವಾಗತಕ್ಕೆ ಅವಕಾಶವಿರಲಿಲ್ಲ. ಇದರ ನಡುವೆಯೂ ಹಾರ, ಶಾಲು ಹಾಕಿ ಬರಮಾಡಿಕೊಂಡರು. ನಟ ಶ್ರೀನಗರ ಕಿಟ್ಟಿ, ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಏರ್‌ಪೋರ್ಟ್ ಬಳಿ ತೆರಳಿ ಸ್ವಾಗತಿಸಿದರು. ಭಾನುವಾರ ಬೆಳಗ್ಗೆ 8.50ಕ್ಕೆ ಶಿವರಾಜ್ ಕುಮಾರ್ ಪ್ರಯಾಣಿಸಿದ ವಿಮಾನ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಆದ ಬಳಿಕ. ಟರ್ಮಿನಲ್ 2 ಮುಖಾಂತರ ಶಿವರಾಜ್ ಕುಮಾರ್ ನಿಲ್ದಾಣದಿಂದ ಹೊರಬಂದರು. ಇನ್ನು ಸಾದಹಳ್ಳಿ ಟೋಲ್‌ನಿಂದ ಅದ್ಧೂರಿ ಸ್ವಾಗತ ಕೋರಿ ಬರಮಾಡಿಕೊಳ್ಳಲಾಯಿತು. ಶಿವರಾಜ್ ಕುಮಾರ್ ಆಗಮನ ಅಭಿಮಾನಿಗಳ ಸಂಭ್ರಮಕ್ಕೆ ಪಾರವೇ ಇಲ್ಲದಂತಾಗಿ ನೆಚ್ಚಿನ ನಟನಾಗಿ ಗುರುತಿಸಿಕೊಂಡಿರುವ ಶಿವರಾಜ್ ಕುಮಾರ್ ಸ್ವಾಗತಕ್ಕೆ ಅಭಿಮಾನಿಗಳು ಕೇಕ್, ಹಾರ, ಹೂವುಗಳನ್ನು ತಂದಿದ್ದರು. ಮೂತ್ರ ಕೋಶದ ಕ್ಯಾನ್ಸರ್ ಸಂಬಂಧ ಶಿವರಾಜ್ ಕುಮಾರ್ ಡಿಸೆಂಬರ್ 18 ರಂದು ಬೆಂಗಳೂರಿನಿಂದ ಅಮೆರಿಕಕ್ಕೆ ಪ್ರಯಾಣ ಮಾಡಿದ್ದರು. ಡಿಸೆಂಬರ್ 24ರಂದು ಶಿವರಾಜ್ ಕುಮಾರ್‌ಗೆ ಶಸ್ತ್ರಚಿಕಿತ್ಸೆ ಮಾಡಲಾಗಿತ್ತು. ಆರೋಗ್ಯ ಸಂಬಂಧ ಶಿವರಾಜ್ ಕುಮಾರ್ 6 ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು. ಶಸ್ತ್ರಚಿಕಿತ್ಸೆ ಬಳಿಕ ವಿಶ್ರಾಂತಿಗೆ ಜಾರಿದ್ದ ಶಿವರಾಜ್ ಕುಮಾರ್ ಇದೀಗ ಚೇತರಿಸಿಕೊಂಡು ತವರಿಗೆ ವಾಪಾಸ್ ಆಗಿದ್ದಾರೆ.

ನಾನು ಮದುವೆಗೆ ರೆಡಿ ಹುಡುಗಿ ಹುಡುಕಿ

ಬಿಗ್ ಬಾಸ್ ಕನ್ನಡ 11ರ ಆಟ ಮುಗಿಯಲು ಕೌಂಟ್‌ಡೌನ್ ಶುರುವಾಗಿದೆ. ಸುದೀಪ್ ಅವರು ಗ್ರ್ಯಾಂಡ್ ಆಗಿ ವೇದಿಕೆಗೆ ಎಂಟ್ರಿ ಕೊಟ್ಟಿದ್ದಾರೆ. ಇದೆಲ್ಲದರ ನಡುವೆ ಫಿನಾಲೆಯಲ್ಲಿ ಮಂಜು ಮದುವೆ ಬಗ್ಗೆ ಚರ್ಚೆ ನಡೆದಿದೆ. ಸುದೀಪ್ ಮುಂದೆ ಅಪ್ಪನಿಗೆ ಮದುವೆಯಾಗುವುದಾಗಿ ಮಂಜು ಮಾತು ಕೊಟ್ಟಿದ್ದಾರೆ. ಫಿನಾಲೆಯಲ್ಲಿ ಉಗ್ರಂ ಮಂಜುಗಾಗಿ ಅವರ ತಂದೆ ಬಿಗ್ ಬಾಸ್ ವೇದಿಕೆ ಮೇಲೆ ಡ್ಯಾನ್ಸ್ ಮಾಡಿದ್ದಾರೆ. ಮಗನಿಗಾಗಿ ಕುಣಿದು ಕುಪ್ಪಳಿಸಿದ್ದಾರೆ. ನಿಮ್ಮ ತಂದೆ ನಿನಗಾಗಿ ಡ್ಯಾನ್ಸ್ ಮಾಡಿ ಗಿಫ್ಟ್ ಕೊಟ್ಟಿದ್ದಾರೆ. ನೀನು ಅಪ್ಪನಿಗೆ ಏನು ಗಿಫ್ಟ್ ಕೊಡುತ್ತೀರ ಎಂದು ಸುದೀಪ್ ಅವರು ಮಂಜು ಅನ್ನು ಪ್ರಶ್ನೆ ಮಾಡಿದರು. ಅದಕ್ಕೆ ಮಂಜು, ಮದುವೆ ಆಗ್ತೀನಿ ಹುಡುಗಿ ಹುಡುಕಪ್ಪ ಎಂದರು. ಅದಕ್ಕೆ ಮಂಜು ಅವರ ತಂದೆ, ನಾವು ಮದುವೆಗೆ ರೆಡಿ ಇದ್ದೀನಿ. ಯಾರನ್ನಾದರೂ ಪ್ರೀತಿಸಿದ್ದರೆ ಹೇಳು ಅವರೊಟ್ಟಿಗೆ ಮದುವೆ ಮಾಡೋಣ ಎಂದರು. ಮುಂಚೆ ಪ್ರೀತಿಸಿದ್ದೆ ಆದರೆ ಈಗ ಇಲ್ಲ ಎಂದು ಉತ್ತರಿಸಿದರು ಮಂಜು. ಆ ವಿಷಯ ತಮಗೂ ಗೊತ್ತೆಂದು ಮಂಜು ಅವರ ತಂದೆ. ಆದರೆ ಆಗ ನಾನೇ ಬೇಡ ಅಂದಿದ್ದೆ. ಮೂರು ಜನ ಹೆಣ್ಣು ಮಕ್ಕಳಿದ್ದಾರೆ. ಮೊದಲು ಅವರ ಮದುವೆ ಆಗಬೇಕು ಅದಾದ ಮೇಲೆ ನೋಡೋಣ ಎಂದಿದ್ದೆ. ಹೆಣ್ಣು ಮಕ್ಕಳ ಮದುವೆ ಮಾಡಿ ಮುಗಿಸುವಷ್ಟರಲ್ಲಿ ಆ ಹುಡುಗಿಯ ಮದುವೆ ಆಗಿ ಹೋಗಿತ್ತು. ಅದಾದ ಮೇಲೆ ಎಷ್ಟು ಬಾರಿ ಸಂಬಂಧಗಳನ್ನು ನೋಡಿ ಬಂದರೂ ಎಲ್ಲಾರನ್ನೂ ಬೇಡ ಬೇಡ ಎನ್ನುತ್ತಲೇ ಇದ್ದ ಎಂದರು ಮಂಜು ಅವರ ತಂದೆ.

ಕರೀನಾ ದೂಷಿಸಿದವರಿಗೆ ಖನ್ನಾ ಕ್ಲಾಸ್

ಸೈಫ್ ಅಲಿ ಖಾನ್ ಮೇಲೆ ನಡೆದ ದಾಳಿಯ ನಂತರ ಕರೀನಾ ಕಪೂರ್ ಅವರನ್ನು ದೂಷಿಸಿದ್ದಕ್ಕೆ ಟ್ವಿಂಕಲ್ ಖನ್ನಾ ತೀವ್ರವಾಗಿ ಖಂಡಿಸಿದ್ದಾರೆ. ಸೈಫ್ ಅವರ ಮೇಲಿನ ದಾಳಿಗೆ ಕರೀನಾ ಕಾರಣ ಎಂದು ಹರಡಿದ ವದಂತಿಗಳನ್ನು ಅವರು ತಳ್ಳಿಹಾಕಿದ್ದಾರೆ. ಪತಿಯ ಮೇಲಿನ ದಾಳಿಗಳಿಗೆ ಪತ್ನಿಯರನ್ನು ದೂಷಿಸುವುದು ಸಾಮಾನ್ಯ ಪದ್ಧತಿಯಾಗುತ್ತಿದೆ ಎಂದು ಅವರು ಟೀಕಿಸಿದ್ದಾರೆ. ಟ್ವಿಂಕಲ್ ಖನ್ನಾ ಅವರು ಉತ್ತಮ ಬರಹಗಾರ್ತಿ ಹೌದು. ನಟಿಯಾಗಿದ್ದ ಅವರು ನಂತರ ಬರಹವನ್ನು ಆಯ್ಕೆ ಮಾಡಿಕೊಂಡರು. ಈಗ ಅವರು ಇತ್ತೀಚಿಗಿನ ಬೆಳವಣಿಗೆ ಬಗ್ಗೆ ಬರೆದುಕೊಂಡಿದ್ದಾರೆ. ಹೌದು, ಇತ್ತೀಚೆಗೆ ಹಲವು ಘಟನೆಗಳಲ್ಲಿ ಪತಿ ಸಮಸ್ಯೆ ಎದುರಿಸಿದಾಗ ಅದಕ್ಕೆ ಪತ್ನಿ ಕಾರಣ ಎಂಬ ರೀತಿಯಲ್ಲಿ ಹೇಳಲಾಗುತ್ತಿದೆ. ಇದಕ್ಕೆ ಟ್ವಿಂಕಲ್ ಖನ್ನಾ ಅವರು ಸರಿಯಾದ ಉತ್ತರ ಕೊಟ್ಟಿದ್ದಾರೆ. ಈ ಮೂಲಕ ಸೋಶಿಯಲ್ ಮೀಡಿಯಾ ಚರ್ಚೆಗೆ ಇತಿ ಹಾಡಿದ್ದಾರೆ. ಇತ್ತೀಚೆಗೆ ಸೈಫ್ ಅಲಿ ಖಾನ್ ಮೇಲೆ ದಾಳಿ ಆಯಿತು. ಈ ದಾಳಿಗೆ ಕರೀನಾ ಕಪೂರ್ ಕಾರಣ ಎಂದು ಅನೇಕರು ದೂರಿದರು. ಸೈಫ್ ಮೇಲೆ ದಾಳಿ ನಡೆಯುತ್ತಿರುವಾಗ ಕರೀನಾ ಕಪೂರ್ ಅವರು ಗೆಳತಿಯರ ಜೊತೆ ಪಾರ್ಟಿ ಮಾಡುತ್ತಿದ್ದರು ಎಂದು ಅನೇಕರು ಹೇಳಿದ್ದರು. ಇದನ್ನು ಟ್ವಿಂಕಲ್ ಖನ್ನಾ ಅವರು ಖಂಡಿಸಿದ್ದಾರೆ. 'ಸೈಫ್ ಅಲಿ ಖಾನ್ ಅವರು ಆಸ್ಪತ್ರೆಯಲ್ಲಿ ಇರುವಾಗ ಒಂದು ವದಂತಿ ಹರಡಿತ್ತು. ಸೈಫ್ ಮೇಲೆ ದಾಳಿ ನಡೆದಾಗ ಸಹಾಯಕ್ಕೆ ಕರೀನಾ ಅಲ್ಲಿ ಇರಲಿಲ್ಲ ಎಂದು ಹೇಳಲಾಯಿತು. ಆದರೆ, ಇದನ್ನು ಸಾಬೀತು ಮಾಡುವ ಯಾವುದೇ ಸಾಕ್ಷ್ಯ ಇರಲಿಲ್ಲ. ಜನರು ಇದನ್ನು ಎಂಜಾಯ್ ಮಾಡಿದರು ಎಂದು ಟ್ವಿಂಕಲ್ ಹೇಳಿದ್ದಾರೆ.

ಮುಂಬೈ ವಿರುದ್ಧ ಗೆಲುವು ಸಾಧಿಸಿ ಬಿಸಿಸಿಐ ಬಳಿ ದೂರು

ಶ್ರೇಯಸ್ ಅಯ್ಯರ್ ಅವರ ನಾಟೌಟ್ ತೀರ್ಪು, ಅಬಿದ್ ಮುಷ್ತಾಕ್ ಅವರ ಎಲ್‌ಬಿಡಬ್ಲ್ಯೂ ಔಟ್ ವಿವಾದಾತ್ಮಕ

ರಣಜಿ ಟ್ರೋಫಿ ಪಂದ್ಯದಲ್ಲಿ ಜಮ್ಮು ಮತ್ತು ಕಾಶ್ಮೀರ ತಂಡವು ರೋಹಿತ್ ಶರ್ಮಾ ನೇತೃತ್ವದ ಪ್ರಬಲ ಮುಂಬೈ ತಂಡವನ್ನು ಸೋಲಿಸಿ ಅಚ್ಚರಿ ಮೂಡಿಸಿದೆ. ಆದರೆ, ಪಂದ್ಯದಲ್ಲಿನ ಕೆಲವು ಅಂಪೈರಿಂಗ್ ನಿರ್ಧಾರಗಳಿಂದ ಅಸಮಾಧಾನಗೊಂಡ ಜಮ್ಮು ಮತ್ತು ಕಾಶ್ಮೀರ ಕ್ರಿಕೆಟ್ ಸಂಸ್ಥೆ, ಕಳಪೆ ಅಂಪೈರಿಂಗ್ ಬಗ್ಗೆ ಬಿಸಿಸಿಐಗೆ ಅಧಿಕೃತ ದೂರು ಸಲ್ಲಿಸಿದೆ. ಶ್ರೇಯಸ್ ಅಯ್ಯರ್ ಅವರ ನಾಟೌಟ್ ತೀರ್ಪು ಮತ್ತು ಅಬಿದ್ ಮುಷ್ತಾಕ್ ಅವರ ಎಲ್‌ಬಿಡಬ್ಲ್ಯೂ ಔಟ್ ವಿವಾದಾತ್ಮಕವಾಗಿತ್ತು.

ರಣಜಿ ಟ್ರೋಫಿ ಪಂದ್ಯದಲ್ಲಿ ಜಮ್ಮು ಕಾಶ್ಮೀರ ತಂಡ ರೋಹಿತ್ ಶರ್ಮಾ, ಯಶಸ್ವಿ ಜೈಸ್ವಾಲ್, ಅಜಿಂಕ್ಯ ರಹಾನೆ, ಶ್ರೇಯಸ್ ಅಯ್ಯರ್ ಮತ್ತು ಶಿವಂ ದುಬೆಯಂತಹ ಸ್ಟಾರ್‌ಗಳಿಂದ ಅಲಂಕರಿಸಲ್ಪಟ್ಟ ಮುಂಬೈ ತಂಡವನ್ನು ಸೋಲಿಸಿದ ಅಮೋಘ ಸಾಧನೆ ಮಾಡಿದೆ. ಸ್ಟಾರ್ ಆಟಗಾರರಿಂದ ಕಂಗೊಳಿಸುತ್ತಿದ್ದ ತಂಡವನ್ನು ಸೋಲಿಸಿದ ನಂತರವೂ ತೃಪ್ತರಾಗದ ಜಮ್ಮು ಮತ್ತು ಕಾಶ್ಮೀರ ಕ್ರಿಕೆಟ್ ಸಂಸ್ಥೆಯು ಪಂದ್ಯ ಮುಗಿದ ನಂತರ, ಕಳಪೆ ಅಂಪೈರಿಂಗ್ ಬಗ್ಗೆ ಬಿಸಿಸಿಐಗೆ ದೂರು ನೀಡಿದೆ. ವಾಸ್ತವವಾಗಿ ಈ ಪಂದ್ಯದಲ್ಲಿ ಅಂಪೈರ್ ನೀಡಿದ ಕೆಲವು ನಿರ್ಧಾರಗಳು ಜಮ್ಮು ಮತ್ತು ಕಾಶ್ಮೀರ ತಂಡದ ಅಸಮಾಧಾನಕ್ಕೆ ಕಾರಣವಾಗಿದ್ದು, ಈ ವಿಚಾರ ಇದೀಗ ಬಿಸಿಸಿಐ ಮುಂದೆ ಪ್ರಸ್ತಾಪವಾಗಿದೆ.

ದೂರು: ಜಮ್ಮು ಮತ್ತು ಕಾಶ್ಮೀರ ಕ್ರಿಕೆಟ್ ಸಂಸ್ಥೆಯ ಆಡಳಿತಾಧಿಕಾರಿ ಅನಿಲ್ ಗುಪ್ತಾ ಈ ವಿಷಯದ ಕುರಿತು ಟೈಮ್ಸ್ ಆಫ್ ಇಂಡಿಯಾದೊಂದಿಗೆ ಮಾತನಾಡಿದ್ದು, ಕಳಪೆ ಅಂಪೈರಿಂಗ್ ಬಗ್ಗೆ ಬಿಸಿಸಿಐಗೆ ಅಧಿಕೃತ ದೂರು ಸಲ್ಲಿಸಿದ್ದಾರೆ. 'ಪಂದ್ಯದಲ್ಲಿ ಅಂಪೈರಿಂಗ್ ಕುರಿತು ನಾವು ಬಿಸಿಸಿಐಗೆ ಅಧಿಕೃತ ದೂರು ನೀಡಿದ್ದೇವೆ. ಅಂಪೈರ್ ನೀಡಿದ ಕೆಲವು ನಿರ್ಧಾರಗಳನ್ನು ಜಮ್ಮು ಮತ್ತು ಕಾಶ್ಮೀರ ತಂಡದ ವಿರುದ್ಧವಾಗಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ನಮ್ಮ ತಂಡದ ಆಟಗಾರ ಅಬಿದ್ ಮುಷ್ತಾಕ್ ಅವರನ್ನು ಚೆಂಡು ಲೆಗ್-ಸ್ಟಂಪ್‌ನಿಂದ ಹೊರಗೆ ಇದ್ದರೂ ಅಂಪೈರ್ ಅವರನ್ನು ಎಲ್‌ಬಿಡಬ್ಲ್ಯೂ ಔಟೆಂದು ತೀರ್ಪು ನೀಡಿದರು. ತದನಂತರ ಶ್ರೇಯಸ್ ಅಯ್ಯರ್, ವಿಕೆಟ್ ಕೀಪರ್ ಗೆ ಕ್ಯಾಚ್ ನೀಡಿರುವುದು ಸ್ಪಷ್ಟವಾಗಿದ್ದರೂ ಅಂಪೈರ್ ಅವರನ್ನು ನಾಟೌಟ್ ಎಂದು ಘೋಷಿಸಿದರು. ನಾನು ಮೈದಾನದಲ್ಲಿ ಉಪಸ್ಥಿತರಿದ್ದು ಪಂದ್ಯವನ್ನು ವೀಕ್ಷಿಸುತ್ತಿದ್ದೆ, ಹಾಗಾಗಿ ಕೆಲವು ಅಂಪೈರಿಂಗ್ ನಿರ್ಧಾರಗಳಿಂದ ನಾನು ನಿರಾಶೆಗೊಂಡಿದ್ದೇನೆ ಎಂದಿದ್ದಾರೆ.

ಅಯ್ಯರ್ ನಾಟೌಟ್ ತೀರ್ಪಿನ ಬಗ್ಗೆ ಅಸಮಾಧಾನ: ಉಭಯ ತಂಡಗಳ ನಡುವಿನ ಈ ಪಂದ್ಯದಲ್ಲಿ ಜಮ್ಮು ಕಾಶ್ಮೀರ ಆಟಗಾರ ಅಬಿದ್ ಮುಷ್ತಾಕ್ ಅವರ ಎಲ್‌ಬಿಡಬ್ಲ್ಯೂ ಔಟನ್ನು ಹೊರತುಪಡಿಸಿ, ಶ್ರೇಯಸ್ ಅಯ್ಯರ್ ಅವರ ನಾಟೌಟ್ ತೀರ್ಪಿನ ಬಗ್ಗೆ ಸಾಕಷ್ಟು ಚರ್ಚೆಗಳು ನಡೆದಿದ್ದವು. ಎರಡನೇ ಇನ್ನಿಂಗ್ಸ್ ನಲ್ಲಿ, ಶ್ರೇಯಸ್ ಅಯ್ಯರ್ ಎಂಟು ರನ್‌ಗಳಿಸಿ ಬ್ಯಾಟಿಂಗ್ ಮಾಡುತ್ತಿದ್ದಾಗ, ಚೆಂಡು ಅವರ ಬ್ಯಾಟ್‌ನ ಅಂಚನ್ನು ತಾಗಿ ವಿಕೆಟ್‌ಕೀಪರ್‌ಗೆ ಹೋಯಿತು. ಚೆಂಡು ಬ್ಯಾಟ್?ನ ಅಂಚಿಗೆ ಹೊಡೆಯುವ ಸದ್ದು ಕೂಡ ಸ್ಪಷ್ಟವಾಗಿ ಕೇಳಿಸಿತು. ಜಮ್ಮು ಮತ್ತು ಕಾಶ್ಮೀರದ ಆಟಗಾರರು ಕೂಡ ಅಯ್ಯರ್ ಅವರ ವಿಕೆಟ್ ಅನ್ನು ಆಚರಿಸಲು ಪ್ರಾರಂಭಿಸಿದರು. ಆದರೆ ಅಂಪೈರ್ ಮಾತ್ರ ಶ್ರೇಯಸ್ ನಾಟೌಟ್ ಎಂದು ತೀರ್ಪು ನೀಡಿದರು.

ಅಂಪೈರ್ ಜೊತೆ ಅಯ್ಯರ್ ವಾಗ್ವಾದ

ಇದಾದ ಬಳಿಕ ಶ್ರೇಯಸ್ 17 ರನ್ ಗಳಿಸಿದ್ದಾಗಲೂ ಸ್ಟಂಪ್‌ನ ಹಿಂದೆ ವಿಕೆಟ್‌ಕೀಪರ್‌ಗೆ ಕ್ಯಾಚಿತ್ತರು. ಈ ವೇಳೆ ಅಂಪೈರ್, ಅಯ್ಯರ್ ಔಟೆಂದು ತೀರ್ಪು ನೀಡಿದರು. ಆದರೆ ಈ ನಿರ್ಧಾರದಿಂದ ಅಸಮಾಧಾನಗೊಂಡ ಅಯ್ಯರ್, ಅಂಪೈರ್ ಜೊತೆ ಬಹಳ ಹೊತ್ತು ವಾಗ್ವಾದ ನಡೆಸಿದರು. ಆದರೆ ಅಂತಿಮವಾಗಿ ಅವರು ಮೈದಾನವನ್ನು ತೊರೆಯಬೇಕಾಯಿತು. ಈ ಎರಡೂ ನಿರ್ಧಾರಗಳಿಗಾಗಿ ಅಂಪೈರ್ ಸುಂದರಂ ರವಿ ತೀವ್ರ ಟೀಕೆಗೆ ಗುರಿಯಾಗಿದ್ದರು. ಈ ಪಂದ್ಯದಲ್ಲಿ ಸುಂದರಂ ರವಿ ಹೊರತಾಗಿ ನವದೀಪ್ ಸಿಂಗ್ ಕೂಡ ಅಂಪೈರ್ ಆಗಿದ್ದರು. ನಿತಿನ್ ಗೋಯಲ್ ಪಂದ್ಯದ ರೆಫರಿಯಾಗಿದ್ದರು.

ಕೆಟ್ಟ ಅಂಪೈರಿಂಗ್ ಬಗ್ಗೆ ಬಿಸಿಸಿಐಗೆ